ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 209
11–2–2025 ಮಂಗಳವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 209

## ಭದ್ರತೆ ದುರ್ಬಲವಾಗಿದ್ದರೆ ಶಾಂತಿ ಅಸಾಧ್ಯ: ರಾಜನಾಥ್ ಸಿಂಗ್




**ಬೆಂಗಳೂರು:** ಭದ್ರತೆ ದುರ್ಬಲವಾಗಿದ್ದರೆ ಶಾಂತಿ ಸ್ಥಾಪಿಸಲು ಸಾಧ್ಯವಿಲ್ಲ ಮತ್ತು ಬಲಿಷ್ಠರಾಗಿರುವುದರಿಂದ ಮಾತ್ರ ನಾವು ಉತ್ತಮ ಜಗತ್ತಿಗಾಗಿ ಕೆಲಸ ಮಾಡಲು ಸಾಧ್ಯ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಸೋಮವಾರ ಹೇಳಿದ್ದಾರೆ.

ಇಂದು ಬೆಂಗಳೂರಿನ ಯಲಹಂಕ ವಾಯುನೆಲೆಯಲ್ಲಿ ಏರೋ ಇಂಡಿಯಾ 2025 ವೈಮಾನಿಕ ಪ್ರದರ್ಶನವನ್ನು ರಾಜನಾಥ್ ಸಿಂಗ್ ಉದ್ಘಾಟಿಸದರು. ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಸಹ ಸಮಾರಂಭದಲ್ಲಿ ಭಾಗವಹಿಸಿದ್ದರು.

ಬಳಿಕ ಮಾತನಾಡಿದ ರಾಜನಾಥ್ ಸಿಂಗ್, ಜಾಗತಿಕ ಅನಿಶ್ಚಿತತೆಗಳನ್ನು ಉಲ್ಲೇಖಿಸಿ, ಒಂದು ದೊಡ್ಡ ದೇಶವಾಗಿ, ಭಾರತ ಯಾವಾಗಲೂ ಶಾಂತಿ ಮತ್ತು ಸ್ಥಿರತೆಯ ಪ್ರತಿಪಾದಕವಾಗಿದೆ ಎಂದು ಹೇಳಿದರು.

ಏರೋ ಇಂಡಿಯಾದಲ್ಲಿ ವಿದೇಶಗಳಿಂದ ಬಂದ ನಮ್ಮ ಸ್ನೇಹಿತರ ಉಪಸ್ಥಿತಿಯು(ಏರೋ ಇಂಡಿಯಾದಲ್ಲಿ) ಒಂದು ಭೂಮಿ, ಒಂದು ಕುಟುಂಬ, ಒಂದು ಭವಿಷ್ಯದ ನಮ್ಮ ದೃಷ್ಟಿಕೋನವನ್ನು ಹಂಚಿಕೊಳ್ಳುತ್ತಾರೆ ಎಂಬುದಕ್ಕೆ ಸಾಕ್ಷಿಯಾಗಿದೆ" ಎಂದರು.

ಉತ್ತರ ಪ್ರದೇಶದಲ್ಲಿ ಸಂಸ್ಕೃತಿಯ ಮಹಾ ಕುಂಭಮೇಳ ನಡೆಯುತ್ತಿದೆ. ಇಲ್ಲಿ ಬೆಂಗಳೂರಿನಲ್ಲಿ ತಂತ್ರಜ್ಞಾನ ಹಾಗೂ ಯುದ್ಧೋಪಕರಣಗಳ, ಯುದ್ಧ ವಿಮಾನಗಳ ಮಹಾ ಕುಂಭ ನಡೆಯುತ್ತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದರು. ಹೊಸ ಸವಾಲುಗಳಿಗೆ ಉತ್ತರ ಹುಡುಕುವ ಕಾರ್ಯ ಮಾಡಬೇಕಿದೆ. ಶಾಂತಿ, ಶಕ್ತಿ ನಮ್ಮ ಮಂತ್ರ ಬಲ ಆಗಬೇಕಿದೆ. ನಾವು ಬಲಾಢ್ಯರಾಗಿ ವಿಶ್ವದಲ್ಲಿ ನಮ್ಮ ಸ್ಥಾನ ಪ್ರದರ್ಶನ ಮಾಡಬೇಕಿದೆ.

## ಬಿಜೆಪಿ ಸಂಸದರಿಗೆ ಧಮ್ ಇದ್ರೆ ಮೆಟ್ರೋ ದರ ಕಡಿಮೆ ಮಾಡಿಸಲಿ

### ಕೇಂದ್ರದ ವಿರುದ್ಧ ಪ್ರಿಯಾಂಕ್ ಖರ್ಗೆ ವಾಗ್ದಾಳಿ

**ಬೆಂಗಳೂರು:** ಮೆಟ್ರೋ ಪ್ರಯಾಣದ ದರ ಏರಿಕೆ ಮಾಡುವ ಮೂಲಕ ಬೆಂಗಳೂರಿನ ಪ್ರಯಾಣಿಕರಿಗೆ ಬಿಗ್ ಶಾಕ್ ನೀಡಿರುವ ಕೇಂದ್ರ ಸರ್ಕಾರದ ವಿರುದ್ಧ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಸೋಮವಾರ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ನಿನ್ನೆಯಿಂದ ನಮ್ಮ ಮೆಟ್ರೋ ದರ ಏಕಾಏಕಿ ಶೇ. 50ರಷ್ಟು ಹೆಚ್ಚು ಮಾಡಿದ್ದು, ಇದಕ್ಕೆ ಜನರಿಂದ ತೀವ್ರ ಆಕ್ರೋಶ ವ್ಯಕ್ತವಾಗಿದೆ.

ಈ ಬಗ್ಗೆ ಇಂದು ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಸಚಿವ ಪ್ರಿಯಾಂಕ್ ಖರ್ಗೆ, ಮೆಟ್ರೊ ದರ ಏರಿಕೆಗೆ ರಾಜ್ಯ ಸರ್ಕಾರ ಹೊಣೆಯಲ್ಲ. ದರ ನಿಗಿದಿ ಕಮಿಟಿ ಮಾಡಿದ್ದು ಕೇಂದ್ರ ಸರ್ಕಾರ. ಪ್ರಧಾನಿ ಮೋದಿ ಪರವಾಗಿ ಬಿಜೆಪಿಯವರು ಕ್ಷಮೆ ಕೇಳಲಿ. ಮೆಟ್ರೋ



ಸ್ಟೇಷನ್ ಗೆ ಹೋಗಿ ಕ್ಷಮೆ ಕೇಳಲಿ. ನಾವೇ ಬಿಜೆಪಿಯವರಿಗೆ ಗುಲಾಬಿ ಹೂ ಕೊಡುತ್ತೇವೆ. ಮೋದಿ ಪರ ಗುಲಾಬಿ ಕೊಟ್ಟು ಕ್ಷಮೆ ಕೇಳಲಿ? ಎಂದು ಕಿಡಿಕಾರಿದರು.

ಮೆಟ್ರೋಮೆಟ್ರೋ ಕೇಂದ್ರ ಸರ್ಕಾರದ ನಿಯಂತ್ರಣದಲ್ಲಿದೆ. ಈ ಹಿಂದೆ ಮೆಟ್ರೋ ದರ ಏರಿಕೆ ಮಾಡಲ್ಲ ಎಂದಾಗ ಇದೇ ಬಿಜೆಪಿ ಸಂಸದರು ಕೇಂದ್ರ ಸರ್ಕಾರ–ಕ್ಕೆ ಧನ್ಯವಾದ ಹೇಳಿದ್ದರು. ಆದರೆ ಈಗ ದರ ಏರಿಕೆ ಮಾಡಿದಾಗ ನಾವು ಜವಾಬ್ದಾರಿಯಾ? ಈಗಲೂ ಕೇಂದ್ರ ಸರ್ಕಾರವನ್ನು ಹೋಗಿ ಕೇಳಲಿ ಎಂದರು.

ನಾವು ಬಸ್ ಪ್ರಯಾಣ ದರ ಏರಿಕೆ ಮಾಡಿದಾಗ ಇದೇ ಬಿಜೆಪಿ ನಾಯಕರು ಗುಲಾಬಿ ಹೂ ಹಿಡಿದುಕೊಂಡು ಬಸ್ ನಿಲ್ದಾಣಕ್ಕೆ ಹೋಗಿ ಜನರ ಬಳಿ ಕ್ಷಮೆ ಕೇಳಿದ್ದರು. ಈಗಲೂ ಬಿಜೆಪಿ ನಾಯಕರು ಮೆಟ್ರೋ ನಿಲ್ದಾಣಕ್ಕೆ ಹೋಗಿ ಮೋದಿ ಪರವಾಗಿ ಕ್ಷಮೆ ಕೇಳಲಿ. ಬೇಕಿದ್ದರೆ ಗುಲಾಬಿ ಹೂ ನಾವೇ ಖರೀದಿಸಿ ಕೊಡುತ್ತೇವೆ ಎಂದು ಖರ್ಗೆ ಟಾಂಗ್ ನೀಡಿದ್ದಾರೆ. ರಾಜ್ಯದ ಬಿಜೆಪಿ ಸಂಸದರಿಗೆ ಧಮ್ ಇದ್ದರೆ ಮೆಟ್ರೋ ದರ ಕಡಿಮೆ ಮಾಡಲಿ. ಅದು ಬಿಟ್ಟು ಹೆಚ್ಚು ಮಾಡಿದಾಗ ರಾಜ್ಯ ಸರ್ಕಾರದ ವಿರುದ್ಧ ಗೂಬೆ ಕೂರಿಸೋದು, ಕಡಿಮೆ ಮಾಡಿದಾಗ ಕೇಂದ್ರ ಸರ್ಕಾರಕ್ಕೆ ಧನ್ಯವಾದ ಸಲ್ಲಿಸೋದು ಅಲ್ಲ ಎಂದು ಕಿಡಿ ಕಾರಿದ್ದಾರೆ.

### ಸಿಎಂ ಸಿದ್ದರಾಮಯ್ಯ ಪತ್ನಿ, ಸಚಿವ ಬೈರತಿಗೆ ಮತ್ತೆ ರಿಲೀಫ್:

## ಇಡಿ ಸಮನ್ಸ್‌ಗೆ ತಡೆ ವಿಸ್ತರಿಸಿದ ಹೈಕೋರ್ಟ್



**ಧಾರವಾಡ:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ನಿವೇಶನ ಹಂಚಿಕೆ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಮತ್ತು ಸಚಿವ ಬೈರತಿ ಸುರೇಶ್ ಅವರಿಗೆ ಜಾರಿ ನಿರ್ದೇಶನಾಲಯ(ಇಡಿ)ದ ನೋಟಿಸ್ ಗೆ ನೀಡಿದ್ದ ತಡೆಯಾಜ್ಞೆಯನ್ನು ಹೈಕೋರ್ಟ್ ಸೋಮವಾರ ವಿಸ್ತರಿಸಿದೆ.

ಇಡಿ ಸಮನ್ಸ್ ರದ್ದು ಕೋರಿ ಸಿಎಂ ಪತ್ನಿ ಪಾರ್ವತಿ ಹಾಗೂ ಸಚಿವ ಬೈರತಿ ಸುರೇಶ್ ಸಲ್ಲಿಸಿದ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್, ಮುಂದಿನ ವಿಚಾರಣೆಯನ್ನು ಫೆಬ್ರವರಿ 20ಕ್ಕೆ ಮುಂದೂಡಿದೆ. ಹೀಗಾಗಿ ಫೆ. 20ರ ರವರೆಗೆ ಇಡಿ ಸಮನ್ಸ್ ಗೆ ತಡೆ–ಯಾಜ್ಞೆ ವಿಸ್ತರಣೆಯಾಗಿದೆ. ಇದರಿಂದ ಸಿಎಂ ಪತ್ನಿ ಹಾಗೂ ಬೈರತಿ ಸುರೇಶ್‌ಗೆ ತಾತ್ಕಾಲಿಕ ರಿಲೀಫ್ ಸಿಕ್ಕಂತಾಗಿದೆ.

ಇಡಿ ನೋಟಿಸ್ ನೀಡುತ್ತಿದ್ದಂತೆ ಪಾರ್ವತಿ ಸಿದ್ದರಾಮಯ್ಯ ಮತ್ತು ಬೈರತಿ ಸುರೇಶ್ ಅವರು? ಇಡಿ ಸಮನ್ಸ್ ಪ್ರಶ್ನಿಸಿ ಧಾರವಾಡ ಏಕಸದಸ್ಯ ಪೀಠ–ಕ್ಕೆ ಎರಡು ಪ್ರತ್ಯೇಕ ಅರ್ಜಿ ಸಲ್ಲಿಸಿದ್ದರು.

ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರು, ಫೆಬ್ರವರಿ 10ರ ವರೆಗೆ ಇಡಿ ನೀಡಿದ್ದ ಸಮನ್ಸ್‌ಗೆ ತಡೆ ನೀಡಿದ್ದರು. ಇದೀಗ ಮತ್ತೆ ಫೆಬ್ರವರಿ 20 ರವರೆಗೆ ತಡೆಯಾಜ್ಞೆಯನ್ನು ವಿಸ್ತರಿಸಲಾಗಿದೆ.

ಇಡಿ ಪರ ವಾದ ಮಂಡಿಸಿದ ಹೆಚ್ಚುವರಿ ಸಾಲಿಸಿಟರ್ ಜನರಲ್ ಅರವಿಂದ್ ಕಾಮತ್ ಅವರು, ಇಡಿ ಸಮನ್ಸ್ ಜಾರಿಗೊಳಿಸಿದಾಗ ಹೈಕೋರ್ಟ್ ಮಧ್ಯಪ್ರವೇಶ ಮಾಡಬಾರದು. ಈ ಬಗ್ಗೆ ಸುಪ್ರೀಂಕೋರ್ಟ್ ನ ಇತ್ತೀಚಿನ ತೀರ್ಪು ಇದೆ ಎಂದರು.

ಸಚಿವ ಬೈರತಿ ಸುರೇಶ್ ಪರ ವಾದ ಮಂಡಿಸಿದ ವಕೀಲ ಸಿ.ವಿ.ನಾಗೇಶ್, ಇಡಿ ತನಿಖಾಧಿಕಾರಿಗಳು ನಮೂನೆಯೊಂದನ್ನು ಕಳುಹಿಸಿದ್ದಾರೆ. ಇದರಲ್ಲಿ ಬೈರತಿ ಕುಟುಂಬದವರು, ಉದ್ಯೋಗಿಗಳು ಇತರರ ವಿವರ ಕೇಳಿದ್ದಾರೆ. ಇದು ಅವರ ಖಾಸಗಿತನದ ಸ್ಪಷ್ಟ ಉಲ್ಲಂಘನೆ.14 ಸೈಟ್ ಹಂಚಿಕೆಗೂ ಬೈರತಿ ಸುರೇಶ್‌ಗೂ ಸಂಬಂಧವಿಲ್ಲ. ಮುಡಾದಲ್ಲಿ ಬೈರತಿ ಸುರೇಶ್ ಯಾವುದೇ ಹುದ್ದೆ ವಹಿಸಿಕೊಂಡಿಲ್ಲ. ಹೀಗಾಗಿ ಇಡಿ ಸಮನ್ಸ್ ಕಾನೂನುಬಾಹಿರವೆಂದು ಮನವಿ ಮಾಡಿದರು.

## ಉಚ್ಚಂಗಿದುರ್ಗದಲ್ಲಿನ ಭರತ ಹುಣ್ಣಿಮೆಯ ಪ್ರಯುಕ್ತ ವಿಶೇಷ ಬಸ್ ಸೌಲಭ್ಯ

**ದಾವಣಗೆರೆ :** ಶ್ರೀಕ್ಷೇತ್ರ ಉಚ್ಚಂಗಿದುರ್ಗದ ಭರತ ಹುಣ್ಣಿಮೆ ಫೆ.11 ರಿಂದ 13 ರವರೆಗೆ ಜರುಗಲಿದೆ. ಭಕ್ತಾದಿಗಳ ಅನುಕೂಲಕ್ಕಾಗಿ ರಾಜ್ಯ ರಸ್ತೆ ಸಾರಿಗೆ ದಾವಣಗೆರೆ ವಿಭಾಗದ ಘಟಕಗಳಿಂದ 45 ಹೆಚ್ಚುವರಿ ವಿಶೇಷ ಬಸ್‌ಗಳ ಸಂಚಾರ ಕಲ್ಪಿಸಲಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ.

## ಮೈಲಾರ ಜಾತ್ರಾ ಪ್ರಯುಕ್ತ ವಿಶೇಷ ಬಸ್ ಸೌಲಭ್ಯ

**ದಾವಣಗೆರೆ :** ಫೆಬ್ರವರಿ 14 ರಂದು ನಡೆಯುವ ಮೈಲಾರ ಕಾರ್ಣಿಕೋತ್ಸವ ಪ್ರಯುಕ್ತ ಫೆ.13 ರಿಂದ 15 ರವರೆಗೆ ಭಕ್ತಾದಿಗಳ ಅನುಕೂಲಕ್ಕಾಗಿ ರಾಜ್ಯ ರಸ್ತೆ ಸಾರಿಗೆ ದಾವಣಗೆರೆ ವಿಭಾಗದಿಂದ 75 ಹೆಚ್ಚುವರಿ ವಿಶೇಷ ಬಸ್‌ಗಳ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ.

## ಉಚಿತವಾಗಿ ಇ–ಕೆವೈಸಿ ನೋಂದಣಿ

**ದಾವಣಗೆರೆ :** ಹರಿಹರ ತಾಲ್ಲೂಕಿನ ನಗರ ಮತ್ತು ಗ್ರಾಮಾಂತರ ಪ್ರದೇಶದ 124 ನ್ಯಾಯಬೆಲೆ ಅಂಗಡಿಯಲ್ಲಿ ಚಾಲ್ತಿಯಲ್ಲಿರುವ 58,335 ಅಂತ್ಯೋದಯ ಅನ್ನ ಯೋಜನೆ ಮತ್ತು ಅದತ್ಯಾ ಬಿ.ಪಿ.ಎಲ್ ಪಡಿತರ ಚೀಟಿಗಳಲ್ಲಿನ ಒಟ್ಟು ಸದಸ್ಯರ ಪೈಕಿ 7567 ಅಂತ್ಯೋದಯ ಅನ್ನ ಯೋಜನೆ ಮತ್ತು ಆದತ್ಯಾ ಬಿ.ಪಿ.ಎಲ್ ಪಡಿತರ ಚೀಟಿಗಳಲ್ಲಿನ ಸದಸ್ಯರ ಇ–ಕೆವೈಸಿ ಮಾಡಲು ಬಾಕಿ ಇರುತ್ತದೆ.

ಬಾಕಿ ಇರುವ 7567 ಸದಸ್ಯರುಗಳು ಕೂಡಲೇ ಇ–ಕೆವೈಸಿಯನ್ನು ಪ್ರತಿ ದಿನ ಬೆಳಗ್ಗೆ 7 ರಿಂದ ಸಂಜೆ 8 ಗಂಟೆಯವರೆಗೆ ಸಂಬಂಧಪಟ್ಟ ನ್ಯಾಯಬೆಲೆ ಅಂಗಡಿ ಅಥವಾ ರಾಜ್ಯದ ಯಾವುದೇ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಪೋರ್ಟಬಲಿಟಿ ಮೂಲಕ ಇ–ಕೆವೈಸಿಯನ್ನು ಉಚಿತವಾಗಿ ಮಾಡಿಕೊಳ್ಳಬಹುದೆಂದು ಹರಿಹರ ತಹಶೀಲ್ದಾರ್ ಗುರುಬಸವರಾಜ್ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದಲ್ಲಿ ಪ್ರಸ್ತಾವನೆಗಳ ಪರಿಶೀಲನಾ ಸಭೆ

**ದಾವಣಗೆರೆ :** ಪ್ರಸಕ್ತ ಸಾಲಿನ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಸಂದರ್ಭದಲ್ಲಿ ನೀಡುವ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗಾಗಿ ಜಿಲ್ಲಾ ಮಟ್ಟದಲ್ಲಿ ಸ್ವೀಕೃತವಾದ ಪ್ರಸ್ತಾವನೆಗಳ ಪರಿಶೀಲನೆಗೆ ಫೆಬ್ರವರಿ 12 ರಂದು ಸಂಜೆ 4 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ರಾಜಾನಾಯ್ಕ ತಿಳಿಸಿದ್ದಾರೆ.

## ಫೆ. 14, 15ರಂದು ಶ್ರೀ ಶಾರದಾಂಬ ದೇವಸ್ಥಾನದ ವಾರ್ಷಿಕೋತ್ಸವ

**ದಾವಣಗೆರೆ:** ಇಲ್ಲಿನ ನಿಜಲಿಂಗಪ್ಪ ಬಡಾವಣೆಯಲ್ಲಿರುವ ಶ್ರೀ ಗಣಪತಿ, ಶ್ರೀ ಶಾರದಾಂಬ, ಶ್ರೀ ಚಂದ್ರಮೌಳೇಶ್ವರ ಮತ್ತು ಶ್ರೀ ಶಂಕರಚಾರ್ಯರ ದೇವಸ್ಥಾನಗಳ 16ನೇ ವಾರ್ಷಿಕೋತ್ಸವ ಸಮಾರಂಭ ಅಂಗವಾಗಿ ಫೆಬ್ರವರಿ 14 ಮತ್ತು 15ರಂದು ಶ್ರೀ ಶಂಕರ ಸಮುದಾಯ ಭವನದಲ್ಲಿ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಫೆಬ್ರವರಿ 14ರಂದು ಬೆಳಿಗ್ಗೆ 7.30 ರಿಂದ ಮಂಗಳವಾದ್ಯ ಕಲಶ ಸ್ಥಾಪನೆ, ಶ್ರೀ ಗಣಪತಿ ಮತ್ತು ಶ್ರೀ ಚಂದ್ರಮೌಳೇಶ್ವರರಿಗೆ ಅಭಿಷೇಕ, ಶ್ರೀ ಶಾರದಾಂಬ ಮೂರ್ತಿಗೆ ಸಹಸ್ರನಾಮ ಅರ್ಚನೆ, ಶ್ರೀಚಕ್ರ ಪೂಜೆ, ಸಪ್ತಶತಿ ಪಾರಾಯಣ, ಗಣ ಹೋಮ ಸೇರಿದಂತೆ ಪೂಜಾ ಕಾರ್ಯಗಳು ನೆರವೇರಲಿದ್ದು, ಮಧ್ಯಾಹ್ನ 12 ಗಂಟೆಗೆ ಪೂರ್ಣಾಹುತಿ ಮಂಗಳಾರತಿ ನಡೆಯಲಿದೆ.

ಫೆ.14 ಮತ್ತು 15 ರಂದು ಸಂಜೆ 6ಕ್ಕೆ ಅದ್ವೈತ ಪ್ರತಿಷ್ಠಾನದ ಅಧ್ಯಕ್ಷ, ಆಧ್ಯಾತ್ಮಿಕ ಚಿಂತಕ ಡಾ. ಪಾವಗಡ ಪ್ರಕಾಶ್ ರಾವ್ ಅವರಿಂದ ಶ್ರೀ ಶಂಕರ ಸಮುದಾಯ ಭವನದಲ್ಲಿ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ. ಸಂಜೆ 7:30ಕ್ಕೆ ಶ್ರೀ ಶಾರದಾಂಬ ದೇವಿಗೆ ಪಾಲಕಿ ಉತ್ಸವ, ಅಷ್ಟಾವಧಾನ ಮಂಗಳಾರತಿ ಮತ್ತು ಪ್ರಸಾದ ವಿನಿಯೋಗವಿರುತ್ತದೆ.

ಫೆಬ್ರವರಿ 15ರಂದು ಬೆಳಿಗ್ಗೆ 7ರಿಂದ ಕಲಾಹೋಮ ಬೆಳಿಗ್ಗೆ 9ಕ್ಕೆ ಪೂರ್ಣಾವತಿ ಮತ್ತು 9:30ರಿಂದ ಶ್ರೀ ಗಣಪತಿ ಮೂಲ ವಿಗ್ರಹಕ್ಕೆ ಅಥರ್ವಶೀರ್ಷದಿಂದ ಅಭಿಷೇಕ, ರುದ್ರಾಭಿಷೇಕ, ಶ್ರೀಚಕ್ರ ಪೂಜೆ ನಡೆಯಲಿದ್ದು, ಮಧ್ಯಾಹ್ನ 12:30 ನಂತರ ಅನ್ನಸಂತರ್ಪಣೆ ಜರುಗಲಿದೆ.

## ಕಾಯಕದ ಜೊತೆಗೆ ಸಾಮಾಜಿಕ ಪಿಡುಗಳ ವಿರುದ್ದ ಹೋರಾಟದಲ್ಲಿ ಕಾಯಕ ಶರಣರ ಪಾತ್ರ ಮುಖ್ಯ



**ದಾವಣಗೆರೆ :** ಹನ್ನೆರಡನೇ ಶತಮಾನ ಶಿವಶರಣರ ಶತಮಾನವಾಗಿದ್ದು, ಕಾಯಕದ ಜತೆಗೆ ಹಿಂದುಳಿದ ವರ್ಗಗಳ ಏಳಿಗೆಗಾಗಿ ತಮ್ಮ ವಚನಗಳ ಮೂಲಕ ಸಮಾಜ ಸುಧಾರಿಸುವ ಕೆಲಸ ಮಾಡಿದರು ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ತಿಳಿಸಿದರು.

ಸೋಮವಾರ (ಫೆ.10) ರಂದು ಜಿಲ್ಲಾಧಿಕಾರಿ ಕಚೇರಿಯ ತುಂಗಭದ್ರ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆಯೋಜಿಸಲಾಗಿದ್ದ ಕಾಯಕ ಶರಣರ ಜಯಂತಿಯನ್ನು ಉದ್ಘಾಟಿಸಿ ಮಾತಾನಾಡಿದರು. ತಾರತಮ್ಯ, ಅಸಮಾನತೆ, ಲಿಂಗ ತಾರತಮ್ಯ, ಜಾತಿಭೇದ ಎಂಬ ಅನೇಕ ಸಾಮಾಜಿಕ ಪಿಡುಗುಗಳ ವಿರುದ್ದ ಹೋರಾಡಿದವರು ಶರಣರು, ಈ ಮೂಲಕ ಕಾಯಕ ಶರಣರು ಸಮಾಜಕ್ಕೆ ತಮ್ಮದೇ ಆದ ಕೊಡುಗೆಯನ್ನು ನೀಡಿ–ದ್ದಾರೆ. ಕಲ್ಯಾಣದ ಕ್ರಾಂತಿಯಲ್ಲಿ ಇಡೀ ಶರಣರ ಹೋರಾಟವಿದೆ. ಬಸವ ಕಲ್ಯಾಣ ಎಂಬುವುದು ಒಬ್ಬರಿಂದ ಮಾತ್ರವಲ್ಲದೇ ಸಮಾಜದ ಕಟ್ಟ ಕಡೆಯಿಂದ ಬಂದ ಈ ಐದು ಜನ ಕಾಯಕ ಶರಣರ ಪಾತ್ರ ಪ್ರಮುಖವಾಗುತ್ತದೆ. ಇವರ ಬಗ್ಗೆ ಬಸವಣ್ಣನರು ಅನೇಕ ಹೇಳಿಕೆಗಳನ್ನು ನೀಡಿದ್ದಾರೆ, ಒಬ್ಬ ಅಜ್ಞಾನವಂತನೂ ಸಹ ಪರಿವರ್ತನೆಯಿಂದ ಮಹಾಜ್ಞಾನಿಯಾಗುತ್ತಾನೆ ಎಂದರು.

ಸತ್ಯ, ಶುದ್ದ ಕಾಯಕದ ಮೂಲಕ ಜೀವನ ನಡೆಸುವ ಕುರಿತಂತೆ ಅಂದಿನ ಅನೇಕ ವಚನಕಾರರು ತಮ್ಮ ಮೊನಚಾದ ವಚನಗಳ ಮೂಲಕ ಸಮಾಜವನ್ನು ತಿದ್ದುವ ಕಾರ್ಯ ಮಾಡಿದ್ದರು. ಅವರ ವಚನಗಳು ಇಂದಿನ ಸಮಾಜಕ್ಕೂ ಪ್ರಸ್ತುತವಾಗಿವೆ. ಅವರು ನೀಡಿರುವ ಸಂದೇಶಗಳನ್ನು ಎಲ್ಲರೂ ಪಾಲಿಸಿದಲ್ಲಿ, ಉತ್ತಮ ಸಮಾಜ ನಿರ್ಮಾಣಕ್ಕೆ ಸಹಕಾರಿಯಾಗುತ್ತದೆ ಎಂದರು.

ಸಾಹಿತಿ ಡಾ.ರಾಮಚಂದ್ರಪ್ಪ ಮಾತನಾಡಿ ಕಾಯಕ ಶರಣರಾದ ಮಾದಾರ ಚೆನ್ನಯ್ಯ, ಮಾದಾರ ದೂಳಯ್ಯ, ಸಮಗಾರ ಹರಳಯ್ಯ, ಡೋಹರ ಕಕ್ಕಯ್ಯ ಹಾಗೂ ಉರಿಲಿಂಗ ಪೆದ್ದಿ ಇವರ ವಚನಗಳ ಬಗ್ಗೆ ಶಾಲಾ, ಕಾಲೇಜುಗಳಲ್ಲಿ ಮಕ್ಕಳಿಗೆ ಓದಿಸುವುದರ ಜತೆಗೆ ಅವುಗಳನ್ನು ವಿಮರ್ಶೆಗೊಳಪಡಿಸಬೇಕು. ಆ ನಿಟ್ಟಿನಲ್ಲಿ ಶಿಕ್ಷಕರು ಮುನ್ನಡೆದಾಗ ಸಮಾಜದಲ್ಲಿ ಬದಲಾವಣೆ ತರಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಕಲಾವಿದರಾದ ಹೆಗ್ಗೆರೆ ರಂಗಪ್ಪ ಮತ್ತು ಕಲಾ ತಂಡದವರಿಂದ ವಚನಗಾಯನ ನಡೆಸಲಾಯಿತು. ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ನವೀನ್‌ಮಠದ್, ಡಿಡಿಪಿಐ ಕೊಟ್ರೇಶ್, ಮುಖಂಡರಾದ ಮಂಜುನಾಥ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವಿಚಂದ್ರ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ದಾಮ್‌ಕೋಸ್ ಅಧ್ಯಕ್ಷ ಶಿವಕುಮಾರ್ ಮರು ಆಯ್ಕೆ

**ದಾವಣಗೆರೆ :** ಅಡಕೆ ಅಭಿವೃದ್ಧಿ ಪರಿಷ್ಕರಣ ಮತ್ತು ಮಾರಾಟ ಸಹಕಾರ ಸಂಘ ನಿಯಮಿತದ (ದಾಮ್‌ಕೋಸ್) ಮುಂದಿನ ಐದು ವರ್ಷಗಳ ಅವಧಿಗೆ ಅಧ್ಯಕ್ಷರಾಗಿ ಬಿ.ಕೆ.ಶಿವಕುಮಾರ್ ಮತ್ತು ಉಪಾಧ್ಯಕ್ಷರಾಗಿ ಹೆಚ್.ಜಿ. ಮಲ್ಲಿಕಾರ್ಜುನ್ ಅವಿರೋಧ ಆಯ್ಕೆಯಾಗಿದ್ದಾರೆ.

ಕೃಷಿ ಉತ್ಪನ್ನ ಮಾರುಕಟ್ಟೆ ಆವರಣದಲ್ಲಿರುವ ದಾಮ್‌ಕೋಸ್ ಆಡಳಿತ ಕಚೇರಿಯಲ್ಲಿ ಸೋಮವಾರ ಎಲ್ಲ 12 ನಿರ್ದೇಶಕರ ಸಮ್ಮುಖದಲ್ಲಿ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಗೆ ಚುನಾವಣೆ ನಡೆಯಿತು. ದಾವಣಗೆರೆ ಉಪ ವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರಾದ ಎಸ್.ಮಂಜುಳಾ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದರು.

ಈ ಹಿಂದಿನ ಅವಧಿಯಲ್ಲೂ ಶಿವಕುಮಾರ್ ಹಾಗೂ ಮಲ್ಲಿಕಾರ್ಜುನ್ ಅಧ್ಯಕ್ಷ, ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಎಲ್ಲ ನಿರ್ದೇಶಕರೂ ಸೇರಿ ಒಮ್ಮತದಿಂದ ಎರಡನೇ ಬಾರಿಗೆ ಅವರನ್ನೇ ಮುಂದುವರಿಸಲು




ನಿರ್ಧರಿಸಿ, ಅವಿರೋಧ ಆಯ್ಕೆ ಮಾಡಿದರು.

ಈ ವೇಳೆ ಸಂಘದ ಸಂಸ್ಥಾಪಕ ಅಧ್ಯಕ್ಷ ಎಚ್.ಜಯ್ಯಣ್ಣ, ಮಾಜಿ ಅಧ್ಯಕ್ಷ ಕೆ.ಸಿ.ಶಿವಕುಮಾರ್, ಮಾಜಿ ನಿರ್ದೇಶಕರಾದ ಜಿ.ಸಿ.ವಾಮದೇವಪ್ಪ, ಎಂ.ಆರ್.ಮಂಜುನಾಥಯ್ಯ, ನಿರ್ದೇಶಕರಾದ ಕೆ.ಸುಧಾ, ಎ.ಜಿ.ವಿಮಲಾಕ್ಷಮ್ಮ, ಎಚ್. ಎಸ್ ಮಂಗಳಗೌರಮ್ಮ, ಜಿ.ಎಸ್.ಬಸವರಾಜ್, ಎಚ್.ಜಿ.ಮರುಳಸಿದ್ದಪ್ಪ, ಆರ್.ಜಿ.ನರೇಂದ್ರ, ಎಂ.ಎಸ್. ಮಲ್ಲಿಕಾರ್ಜುನ, ಟಿ.ಎಂ.ಮುನಿಯಪ್ಪ, ಬಿ.ಬಸವರಾಜಯ್ಯ, ಕೆ.ಟಿ.ಮಹಾಂತಪ್ಪ, ಕಾರ್ಯದರ್ಶಿ ಶಿವಕುಮಾರ್, ಲಿಂಗರಾಜ್ ಇತರರಿದ್ದರು.

## ಕಾಯಕ ನಿಷ್ಟೆಯೊಂದಿಗೆ ಸಮಾಜ ಸುಧಾರಣೆಯಲ್ಲಿ ತೊಡಗಿದವರು ಕಾಯಕ ಶರಣರು : ಶಾಸಕ ಎಸ್.ಎಸ್.ಚನ್ನಬಸಪ್ಪ

**ಶಿವಮೊಗ್ಗ :** ಕಾಯಕ ಶರಣರು ನಡೆ–ನುಡಿಗೆ ಅಂತರವಿಲ್ಲದಂತೆ ಬದುಕಿದವರು. ತಮ್ಮ ವಿವಿಧ ಕಾಯಕಗಳ ಮೂಲಕ ಕಾಯಕ ನಿಷ್ಟೆಯಿಂದ ಸಮಾಜ ಸುಧಾರಣೆಯಲ್ಲಿ ಪಾಲ್ಗೊಂಡವರು ಇವರು ಎಂದು ಶಾಸಕರಾದ ಎಸ್.ಎನ್.ಚನ್ನಬಸಪ್ಪ ಹೇಳಿದರು.

ಜಿಲ್ಲಾಡಳಿತ, ಜಿ.ಪಂ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಸೋಮವಾರ ಕುವೆಂಪು ರಂಗ ಮಂದಿರದಲ್ಲಿ ಏರ್ಪಡಿಸಲಾಗಿದ್ದ ಕಾಯಕ ಶರಣರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಕಾಯಕ ಶರಣರು ಕೇವಲ ತಮ್ಮ ಉದ್ಧಾರಕ್ಕಾಗಿ ಅಲ್ಲ. ಸಮಾಜದ ಉದ್ಧಾರಕ್ಕಾಗಿ ಶ್ರಮಿಸಿದವರು. ಕಾಯಕದ ಮೂಲತತ್ವ ಅರಿತು ಕಾರ್ಯವೆಸಗಿದವರು ಈ ಕಾಯಕ ಶರಣರು. 12 ನೇ ಶತಮಾನ ಸಮಾಜದಲ್ಲಿನ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಿದ ಯುಗ. ಕಾಯಕ ಶರಣು ಸೇರಿದಂತೆ ಶರಣರು ತಮ್ಮ ವೃತ್ತಿ ಜೊತೆಗೆ ಸಮಾಜ ಸುಧಾರಕರಾಗಿ ಕೊಡುಗೆ ನೀಡಿ–ದ್ದಾರೆ. ವಚನಗಳ ಮೂಲಕ ಸಮಾನತೆ ತತ್ವ ಸಾರಿದರು.

ಕಾಯಕ ಮಾಡ್ತಾ ಮಾಡ್ತಾ ಅದಕ್ಕೆ ಪೂರಕವಾಗಿ ವಚನ ಬರೆಯುತ್ತಾ, ಜನರಿಗೆ ತಿಳುಸುತ್ತಾ ಹೋದ ಸಾಧಕರು ಇವರು. ಇಂತಹ ವಚನಗಳನ್ನು, ಶರಣರ ತತ್ವಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ವ್ಯವಸ್ಥೆಯನ್ನು ನಾವು ಮಾಡಬೇಕು.

ತುಳಿತಕ್ಕೊಳಗಾದ ಸಮಾಜದ ಏಳ್ಗೆಗೆ ಶ್ರಮಿಸಿದವರು, ಸಮಾಜದಲ್ಲಿನ ಅಂಕುಡೊಂಕು ತಿದ್ದಿದವರು, ಕಾಯಕವೇ ಶ್ರೇಷ್ಠ ಎಂದು ಸಾರಿದವರು ಕಾಯಕ ಶರಣರು. ಕಾಯಕದ ಮೂಲಕ ಸಮಾಜಕ್ಕೆ ಶಕ್ತಿ ತುಂಬಿದವರು. ಜಾತಿ, ಮತ ಮೀರಿ ಮುಂದೆ ಸಾಗಬೇಕೆಂದು ತಿಳಿಸಿದ ಐದು ಕಾಯಕ ಶರಣರ ಜಯಂತಿ ಅರ್ಥಪೂರ್ಣ ವಾಗಲಿ ಎಂದು ಹಾರೈಸಿದ ಅವರು ಮುಂದಿನ ದಿನಗಳಲ್ಲಿ ಜಯಂತಿಗೆ ಹೆಚ್ಚಿನ ಜನರು ಪಾಲ್ಗೊಳ್ಳುತ್ತಾರೆಂಬ ನಂಬಿಕೆ ಇದೆ ಎಂದರು.

ಶಿಕಾರಿಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕರಾದ ಡಾ.ಸೋಮಶೇಖರ್ ಹೆಚ್.ಶಿಮೊಗ್ಗಿ ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ಮಾದಾರ ಚೆನ್ನಯ್ಯ, ಮಾದಾರ ದೂಳಯ್ಯ, ಡೋಹರ ಕಕ್ಕಯ್ಯ, ಸಮಗಾರ ಹರಳಯ್ಯ, ಉರಿಲಿಂಗ ಪೆದ್ದಿ, ಗುಡ್ಡಯ್ಯ ಇನ್ನೂ ಮುಂತಾದ ಶರಣರು ತಳ ಸಮುದಾಯದ ಪ್ರತಿನಿಧಿಗಳು. ವಿವಿಧ ವರ್ಗಗಳಿಂದ ಬಂದ ಇವರು ವಿವಿಧ ಕಾಯಕದಲ್ಲಿ ನಿಷ್ಟರಾಗಿ ದುಡಿಯುತ್ತಾ, ಕಾಯಕದ ಮೂಲಕ, ತಮ್ಮ ವಚನಗಳ ಮೂಲಕ ಸಮಾಜದಲ್ಲಿನ ಅಸಮಾನತೆ ಹೋಗಲಾಡಿಸಲು ಪ್ರಯತ್ನಿಸಿದವರು.

12 ನೇ ಶತಮಾನ ಸಾಂಸ್ಕೃತಿಕ ಮತ್ತು ಸಾಹಿತ್ಯ ಕ್ಷೇತ್ರದಲ್ಲಿ ಬದಲಾವಣೆ ಮತ್ತು ಹೋರಾಟದ ಮಹತ್ವವನ್ನು ತೋರಿದ ಸಮಯವಾಗಿದೆ. ಅಸಮಾನತೆ ತೊಡೆಯುವ ಚಳವಳಿಯಾಗಿತ್ತು. ಇಂದಿನ ಯುವಜನತೆಗೆ ಚಳವಳಿ ಮತ್ತು ಹೋರಾಟ ಎಂದರೇನು ಎಂದು ಅರ್ಥವಾಗಬೇಕು. ತಿಳುವಳಿಕೆ ಮೂಡಬೇಕಿದೆ.

ಬಹುತೇಕ ಎಲ್ಲ ವಚನಗಳಲ್ಲಿ ನಾವು ಬಹಳ ಮುಖ್ಯವಾಗಿ ಹಸಿವು, ಬಡತನ ಮತ್ತು ಆಧ್ಯಾತ್ಮಿಕ ಪರಿವರ್ತನೆಯನ್ನು ಕಾಣಬಹುದು. ಅನ್ನದ ಬಗ್ಗೆ ಅಂದಿನ ವಚನಗಳಾದಿಯಾಗಿ ಪ್ರಸುತದಲ್ಲಿ ಬೇಂದ್ರೆಯವರು ಅನ್ನ ದೇವರ ಬಗ್ಗೆ ಪ್ರಸ್ತಾಪ ಮಾಡಿದ್ದಾರೆ. ಅನ್ನ ಜಗತ್ತಿನ ಪ್ರಾಣ ಎಂದಿದ್ದಾರೆ.

## ಭದ್ರಾನಾಲೆಯ ಅಕ್ರಮ ಮೋಟಾರ್ ತೆರವು ಕಾರ್ಯಾಚರಣೆ



**ಮಾಯಕೊಂಡ :** ಸಮೀಪದ ಭದ್ರಾ ನಾಲೆಯಲ್ಲಿ ಅಕ್ರಮವಾಗಿ ಅಳವಡಿಸಿದ ಮೋಟಾರ್ ತೆರವು ಕಾರ್ಯಾಚರಣೆ ಶನಿವಾರ ಪಡೆಯಿತು.

ಭದ್ರಾ ಅಚ್ಚುಕಟ್ಟು ಭಾಗದಲ್ಲಿ ಇದೀಗ ನಾಟಿ ಭರದಿಂದ ಸಾಗಿದ್ದು, ಅಚ್ಚುಕಟ್ಟು ಪ್ರದೇಶದ

ಕೊನೆ ಭಾಗಕ್ಕೆ ನೀರು ತಲುಪುತ್ತಿಲ್ಲ ಎಂದು ರೈತರು ಆರೋಪಿಸಿದ್ದರು.

ಜಿಲ್ಲಾಡಳಿತದ ಆದೇಶದ ಮೇರೆಗೆ ಉಪ ವಿಭಾಗಾಧಿಕಾರಿ ಸಂತೋಷ ಕುಮಾರ್ ನೇತೃತ್ವದಲ್ಲಿ ಶನಿವಾರ ಕಾರ್ಯಾಚರಣೆ ನಡೆಸಲಾಯಿತು. ಕುರ್ಕಿ, ಅಣಬೇರು, ಬಾಡ, ನಲಕುಂದ ಮತ್ತಿತರ ಕಡೆ ನಾಲೆಯಲ್ಲಿ ಅಳವಡಿಸಲಾದ ಅಕ್ರಮ ಮೋಟಾರ್ ತೆರವುಗೊಳಿಸಲಾಯಿತು. ಸುಮಾರು ನೂರಕ್ಕೂ ಹೆಚ್ಚು ಮೋಟಾರ್ ತೆರವುಗೊಳಿಸಲಾಯಿತು. ಬೆಸ್ಕಾಂ ಅಧಿಕಾರಿಗಳು ಅಕ್ರಮ ಮೋಟಾರುಗಳ ವಿದ್ಯುತ್ ಸಂಪರ್ಕ ಕಡಿತಗೊಳಿಸಿದರು.

ಕರ್ನಾಟಕ ನೀರಾವರಿ ನಿಗಮ ನಿಯಮಿತದ ಕಾರ್ಯಪಾಲಕ ಇಂಜಿನಿಯರ್ ಮನೋಜ್ ಕುಮಾರ್ ಮತ್ತು ಸಿಬ್ಬಂದಿ, ಕಂದಾಯ ಇಲಾಖೆಯ ನಿರೀಕ್ಷಕ ಹಿರೇಗೌಡರು ಮತ್ತು ಸಿಬ್ಬಂದಿ, ಮಾಯಕೊಂಡ ಮತ್ತು ಹದಡಿ ಪೊಲೀಸ್ ಠಾಣೆಯ ಸಿಬ್ಬಂದಿ ಕಾರ್ಯಚರಣೆಯಲ್ಲಿ ಪಾಲ್ಗೊಂಡಿದ್ದರು.

## ಗ್ಯಾರಂಟಿ ಯೋಜನೆಗಳು ಅಭಿವೃದ್ಧಿ ಕಾರ್ಯಗಳಿಗೆ ಅಡ್ಡಿಯಾಗಿಲ್ಲ: ಶಾಸಕ ಹೆಚ್.ಡಿ. ತಮ್ಮಯ್ಯ



**ಚಿಕ್ಕಮಗಳೂರು: ಫೆ. 10:** ಸರ್ಕಾರವು ಗ್ಯಾರಂಟಿ ಯೋಜನೆಗಳನ್ನು ನೀಡುವುದರೊಂದಿಗೆ ಅಭಿವೃದ್ಧಿ ಕಾರ್ಯಗಳಲ್ಲೂ ಮುಂಚೂಣಿಯಲ್ಲಿದೆ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಹೇಳಿದರು.

ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿ ಕಡೂರು ಇವರ ವತಿಯಿಂದ ಬಾಣೂರು ಮತ್ತು ನಾಗೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶಿವಪುರ ಗ್ರಾಮದಲ್ಲಿ ಆಯೋಜಿಸಿದ್ದ ಜನ ಸಂಪರ್ಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜನ ಸಂಪರ್ಕ ಸಭೆಯಲ್ಲಿ ಸ್ಥಳೀಯ ಮಟ್ಟದಲ್ಲಿ ಬಗೆಹರಿಯಬಹುದಾದ ಎಲ್ಲಾ ಸಮಸ್ಯೆಗಳಿಗೂ ಪರಿಹಾರ ಕಂಡುಕೊಳ್ಳಬಹುದಾಗಿದೆ. ಜನರ ಮನೆ ಬಾಗಿಲಿಗೆ ಅಧಿಕಾರಿಗಳನ್ನು ಕರೆತಂದು ಪ್ರತಿಯೊಬ್ಬ ಸಾರ್ವಜನಿಕರ ಸಮಸ್ಯೆಗಳನ್ನು ಬಗೆಹರಿಸುವುದೇ ಜನ ಸಂಪರ್ಕ ಸಭೆಯ ಮುಖ್ಯ ಉದ್ದೇಶವಾಗಿದೆ, ಗ್ಯಾರಂಟಿ ಯೋಜನೆಗಳಿಂದ ಅಭಿವೃದ್ಧಿ ಕಾರ್ಯಗಳಿಗೆ ಯಾವುದೇ ರೀತಿಯ ಅಡ್ಡಿಯಾಗಿಲ್ಲ ಎಂದು ತಿಳಿಸಿದರು.

ಜನ ಸಂಪರ್ಕ ಸಭೆಯಲ್ಲಿ ಸ್ಥಳೀಯ ಮಟ್ಟದಲ್ಲಿ ಬಗೆಹರಿಯಬಹುದಾದ ಎಲ್ಲಾ ಸಮಸ್ಯೆಗಳಿಗೂ ಪರಿಹಾರ ಕಂಡುಕೊಳ್ಳಬಹುದಾಗಿದೆ. ಜೊತೆಗೆ ಯಾವುದೇ ಇಲಾಖೆಗೆ ಸಂಬಂಧಿಸಿದ ದೂರುಗಳು ಬಂದರು ಸಂಬಂಧಪಟ್ಟ ಅಧಿಕಾರಿಗಳು ಅವುಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ಜರುಗಿಸಿ ಕೊಡಬೇಕೆಂದು ತಿಳಿಸಿದರು.

ಸರ್ಕಾರವು ಬಡವರ ಹಾಗೂ ಮಹಿಳಾ ಸಬಲೀಕರಣದ ಉದ್ದೇಶದಿಂದ ಅನ್ನಭಾಗ್ಯ, ಶಕ್ತಿ ಯೋಜನೆ, ಗೃಹಲಕ್ಷ್ಮಿ, ಗೃಹಜ್ಯೋತಿ, ಯುವನಿಧಿಯಂತಹ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿ ಎಲ್ಲಾ ವರ್ಗದ ಬಡವರನ್ನು ಪ್ರೋತ್ಸಾಹಿಸಿ ಅಭಿವೃದ್ಧಿಗೊಳಿಸುವ ಉದ್ದೇಶವನ್ನು ಹೊಂದಿದೆ. ವರ್ಷಕ್ಕೆ ಸುಮಾರು 59 ಸಾವಿರ ಕೋಟಿ ರೂಗಳಷ್ಟು ಹಣವನ್ನು ಸರ್ಕಾರ ಗ್ಯಾರಂಟಿ ಯೋಜನೆಗಳಿಗಾಗಿ ವ್ಯಯಿಸುತ್ತಿದೆ. ಗ್ಯಾರಂಟಿ ಯೋಜನೆಗಳಿಂದ ಅಭಿವೃದ್ಧಿಗೆ ಯಾವುದೇ ಅಡೆತಡೆಗಳಾಗಿಲ್ಲ ಎಂದು ಹೇಳಿದರು.

ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗಾಗಿ 25 ಕೋಟಿ ರೂ.ಗಳ ವಿಶೇಷ ಅನುದಾನವನ್ನು ನೀಡಲಾಗಿದೆ. ಇದರಲ್ಲಿ ನಾಗೇನಹಳ್ಳಿ ಪಂಚಾಯಿತಿ ವ್ಯಾಪ್ತಿಗೆ ಒಟ್ಟು 71 ಲಕ್ಷ ರೂ.ಗಳ ಕಾಮಗಾರಿಗೆ ಶಂಕು ಸ್ಥಾಪಿಸಲಾಗಿದೆ. ಬಾಳೂರು ಪಂಚಾಯಿತಿ ವ್ಯಾಪ್ತಿಯಲ್ಲಿ ಸುಮಾರು 95 ಲಕ್ಷ ರೂ.ಗಳಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಲಾಗಿದೆ. ಚಂದ್ರಶೇಖರ ಪುರ, ಗೊಲ್ಲರ ಹಟ್ಟಿ ಹಾಗೂ ಕೇತಮಾರನಹಳ್ಳಿ ರಸ್ತೆ ನಿರ್ಮಾಣ ಕಾಮಗಾರಿಗೆ ಸುಮಾರು 4 ಕೋಟಿ ಅನುದಾನ ಮೀಸಲಿಡಲಾಗಿದೆ ಹಾಗೂ ಬಾಣಾವರ ಸಖರಾಯಪಟ್ಟಣ ದಿಂದ ಶಿವಪುರ ವರೆಗೆ ರಸ್ತೆ ಅಭಿವೃದ್ಧಿಗಾಗಿ 1 ಕೋಟಿ ಅನುದಾನ ಇರಿಸಿದ್ದು, ಅಂದಾಜು ಪಟ್ಟಿ ತಯಾರಿಸಿ ಶೀಘ್ರವಾಗಿ ಕಾಮಗಾರಿ ಪ್ರಾರಂಭಿಸಲಾಗುವುದು,

# ಇಂದಿನ ರಾಶಿ ಭವಿಷ್ಯ

## ಮೇಷ ರಾಶಿ

ನಗುವಿನ ಚಿಕಿತ್ಸೆ ಎಲ್ಲಾ ಸಮಸ್ಯೆಗಳಿಗೂ ಮದ್ದಾಗಿರುವುದರಿಂದ ನಿಮ್ಮ ಅನಾರೋಗ್ಯ ಗುಣಪಡಿಸಲು ನಗುವಿನ ಚಿಕಿತ್ಸೆ ಬಳಸಿ. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು ಮತ್ತು ಭೂಮಿಯನ್ನು ಮಾರಾಟ ಮಾಡುವ ಮೂಲಕ ಅವರು ಉತ್ತಮ ಹಣವನ್ನು ಪಡೆಯಬಹುದು.

## ವೃಷಭ ರಾಶಿ

ಕುಡಿಯುವ ಮತ್ತು ತಿನ್ನುವಾಗ ಎಚ್ಚರದಿಂದಿರಿ. ಅಸಡ್ಡೆ ನಿಮಗೆ ಅನಾರೋಗ್ಯ ತರಬಹುದು. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ಈಗ ತಾನೇ ಪರಿಚಯವಾದವರ ಜೊತೆ ನಿಮ್ಮ ವೈಯಕ್ತಿಕ ವಿಷಯಗಳನ್ನು ಹಂಚಿಕೊಳ್ಳಬೇಡಿ. ನಿಮ್ಮ ಸಂಗಾತಿಯ ಮೇಲೆ ಭಾವನಾತ್ಮಕ ಬೆದರಿಕೆಯನ್ನು ಬಳಸಬಾರದು.

## ಮಿಥುನ ರಾಶಿ

ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ನಿಮ್ಮ ಸೃಜನಶೀಲ ಪ್ರತಿಭೆಯನ್ನು ಸರಿಯಾಗಿ ಬಳಸಿದಲ್ಲಿ ಅದು ಅತ್ಯಂತ ಲಾಭದಾಯಕವೆಂದು ಸಾಬೀತಾಗಬಹುದು. ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು. ಇಂದು ನಿಮ್ಮ ಯಾವುದೇ ಭರವಸೆಯನ್ನು ಪೂರೈಸಲು ಸಾಧ್ಯವಾಗುವುದಿಲ್ಲ. ಇದರಿಂದಾಗಿ ನಿಮ್ಮ ಪ್ರೀತಿಪಾತ್ರರು ನಿಮ್ಮ ಮೇಲೆ ಕೋಪಗೊಳ್ಳಬಹುದು. ಇಂದು ಕೆಲಸದ ಸ್ಥಳದಲ್ಲಿ ನಿಮ್ಮ ಯಾವುದೊ ಹಳೆಯ ಕೆಲಸವನ್ನು ಪ್ರಶಂಸಿಸಬಹುದು.

## ಕರ್ಕ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಇಂದಿನ ದಿನ ಯಾರಿಗೂ ಸಾಲ ನೀಡಬೇಡಿ ಮತ್ತು ಕೊಡುವುದು ಅಗತ್ಯವಾಗಿದ್ದರೆ ಕೊಡುವವರಿಂದ ಅವರು ಯಾವಾಗ ಹಣವನ್ನು ಮರುಪಾವತಿ ಮಾಡುತ್ತಾರೆಂದು ಬರವಣಿಗೆಯಲ್ಲಿ ತೆಗೆದುಕೊಳ್ಳಿ ಮಕ್ಕಳು ಮತ್ತು ಕುಟುಂಬ ಇಂದು ನಿಮ್ಮ ಕೇಂದ್ರಬಿಂದುವಾಗಿರುತ್ತದೆ. ಇಂದು ನಿಮ್ಮ ಹೃದಯ ಬಡಿತವು ನಿಮ್ಮ ಸಂಗಾತಿಯೊಡನೆ ಲಯದಲ್ಲಿ ಪ್ರೀತಿಯ ಸಂಗೀತವನ್ನು ನುಡಿಸುತ್ತದೆ.

## ಸಿಂಹ ರಾಶಿ

ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು. ಇದು ನಿಮಗೆ ಆರ್ಥಿಕ ಲಾಭವನ್ನು ನೀಡುತ್ತದೆ. ನೀವು ಗುಂಪಿನ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರೆ ನೀವು ಹೊಸ ಸ್ನೇಹಿತರನ್ನು ಸಂಪಾದಿಸುತ್ತೀರಿ. ಪ್ರಣಯ ರೋಮಾಂಚಕಾರಿಯಾಗಿರುತ್ತದೆ ಆದ್ದರಿಂದ ನೀವು ಪ್ರೀತಿಸುವವರನ್ನು ಸಂಪರ್ಕಿಸಿ ಮತ್ತು ದಿನದ ಅತ್ಯುತ್ತಮ ಲಾಭ ಪಡೆಯಿರಿ.

## ಕನ್ಯಾ ರಾಶಿ

ನಿಮ್ಮ ದಿಟ್ಟ ಮತ್ತು ನಿರ್ಭಯ ಅಭಿಪ್ರಾಯಗಳು ನಿಮ್ಮ ಸ್ನೇಹಿತನ ಆತ್ಮಗೌರವವನ್ನು ಹಾನಿ ಮಾಡಬಹುದು. ದೀರ್ಘಕಾಲದ ಲಾಭಗಳಿಗೆ ಸ್ಟಾಕ್ಗಳು ಮತ್ತು ಮ್ಯೂಚುವಲ್ ಫಂಡ್ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ. ನಿಮ್ಮ ಪ್ರೇಮಿಯೆಡೆಗೆ ಸೇಡು ಹೊಂದುವುದು ಯಾವುದೇ ಫಲ ತರುವುದಿಲ್ಲ ಅದರ ಬದಲಿಗೆ ನೀವು ಶಾಂತರಾಗಿರಬೇಕು ಮತ್ತು ನಿಮ್ಮ ಪ್ರೇಮಿಗೆ ನಿಮ್ಮ ನಿಜವಾದ ಪ್ರೀತಿಯನ್ನು ವಿವರಿಸಬೇಕು

## ತುಲಾ ರಾಶಿ

ಮಾನಸಿಕ ಒತ್ತಡ ತರುವ ಸುಪ್ತ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ತ್ಯರಾಗಿರುತ್ತೀರಿ. ಹತ್ತಿರದ ಗೆಳೆಯರು ಹಾಗು ಸ್ನೇಹಿತರು ಆಕ್ರಮಣಕಾರಿಯಾಗುತ್ತಾರೆ ಪಡೆಯಲು ಮತ್ತು ನಿಮಗೆ ಜೀವನವನ್ನು ಕಠಿಣಗೊಳಿಸುತ್ತಾರೆ. ನಿಮ್ಮ ಸಂಬಂಧದ ಆ ಎಲ್ಲಾ ದೂರುಗಳು ಮತ್ತು ದ್ವೇಷಗಳು ಈ ಅದ್ಭುತವಾದ ದಿನದಂದು ಕಣ್ಮರೆಯಾಗುತ್ತವೆ. ನಿಮ್ಮ ಕೆಲಸಕ್ಕೆ ಅಂಟಿಕೊಳ್ಳಿ ಮತ್ತು ಇಂದು ನಿಮಗೆ ಸಹಾಯ ಮಾಡಲು ಇತರರನ್ನು ಅವಲಂಬಿಸಬೇಡಿ.

## ವೃಶ್ಚಿಕ ರಾಶಿ

ವಿಶೇಷವಾಗಿ ಬಿಕ್ಕಟ್ಟಿನ ಸಮಯದಲ್ಲಿ ನಿಮ್ಮ ತಾಳ್ಮೆ ಕಳೆದುಕೊಳ್ಳಬೇಡಿ. ನಿಮ್ಮ ಯಾವುದೇ ಹಳೆಯ ಸ್ನೇಹಿತ ಇಂದು ವ್ಯಾಪಾರದಲ್ಲಿ ಲಾಭ ಗಳಿಸಲು ನಿಮಗೆ ಸಲಹೆ ನೀಡಬಹುದು, ನೀವು ಈ ಸಲಹೆಯನ್ನು ಅನುಸರಿಸಿದರೆ, ನೀವು ಖಂಡಿತವಾಗಿಯೂ ಹಣವನ್ನು ಗಳಿಸುವಿರಿ. ಕುಟುಂಬದ ರಹಸ್ಯ ಸುದ್ದಿ ನಿಮಗೆ ಅಚ್ಚರಿ ನೀಡಬಹುದು.

## ಧನು ರಾಶಿ

ಅಭದ್ರತೆ / ದಿಗ್ಭ್ರಮೆಯ ಭಾವನೆ ತಲೆತಿರುಗುವಿಕೆಯನ್ನು ಉಂಟುಮಾಡಬಹುದು. ವಿವಾಹಿತ ಜನರು ಇಂದು ತಮ್ಮ ಮಕ್ಕಳ ಶಿಕ್ಷಣದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಮಕ್ಕಳು ನಿಮಗೆ ಸಂತಸದ ಸುದ್ದಿ ತರಬಹುದು ಪ್ರೇಮ ಜೀವನ ಸ್ವಲ್ಪ ಕಠಿಣವಾಗಿರಬಹುದು. ಕೆಲಸದ ಒತ್ತಡ ಇನ್ನೂ ನಿಮ್ಮ ಮನಸ್ಸನ್ನು ಆವರಿಸುತ್ತದೆ ಹಾಗೂ ಇದು ಕುಟುಂಬ ಮತ್ತು ಸ್ನೇಹಿತರಿಗೆ ಯಾವುದೇ ಸಮಯವಿಲ್ಲದಂತೆ ಮಾಡುತ್ತದೆ.

## ಮಕರ ರಾಶಿ

ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸಗಳನ್ನು ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ. ಆರ್ಥಿಕ ದೃಷ್ಟಿಯಿಂದ ಇಂದಿನ ದಿನ ಮಿಶ್ರವಾಗಿ ಉಳಿಯುತ್ತದೆ.ಇಂದು ನೀವು ಹಣದ ಪ್ರಯೋಜನವನ್ನು ಪಡೆಯಬಹುದು ಆದರೆ ಇದಕ್ಕಾಗಿ ನೀವು ಕಠಿಣ ಪರಿಶ್ರಮ ಮಾಡಬೇಕಾಗುತ್ತದೆ. ಇತರರಲ್ಲಿ ಅನಗತ್ಯವಾಗಿ ದೋಷಗಳನ್ನು ಹುಡುಕುವ ನಿಮ್ಮ ಬುದ್ಧಿಗೆ ಸಂಬಂಧಿಕರಿಂದ ಟೀಕೆ ಎದುರಾಗಬಹುದು.


## ಕುಂಭ ರಾಶಿ

ನಿಮ್ಮ ಸಂಜೆ ವಿಭಿನ್ನ ಪ್ರತಿಕ್ರಿಯೆಗಳಿಂದ ಗುರುತಿಸಲ್ಪಡುತ್ತದೆ ಹಾಗೂ ಇದು ನಿಮ್ಮನ್ನು ಉದ್ವಿಗ್ನವಾಗಿರಿಸಬಹುದು. ಆದರೆ ಹೆಚ್ಚು ಚಿಂತಿಸುವ ಅಗತ್ಯವಿಲ್ಲ – ನಿಮ್ಮ ಸಂತೋಷ ನಿಮಗೆ ನಿರಾಸೆಗಿಂತ ಹೆಚ್ಚು ಆನಂದ ನೀಡುತ್ತದೆ. ಸಹೋದರ–ಸಹೋದರಿಯರ ಸಹಾಯದಿಂದ ಇಂದು ನೀವು ಅರ್ಹಿಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ನಿಮ್ಮ ಗೌಪ್ಯ ಮಾಹಿತಿಯನ್ನು ನಿಮ್ಮ ಸಂಗಾತಿಯ ಜೊತೆ ಹಂಚಿಕೊಳ್ಳುವ ಮೊದಲು ಯೋಚಿಸಿ.

## ಮೀನ ರಾಶಿ

ನೀವು ವ್ಯಾಯಾಮದ ಮೂಲಕ ನಿಮ್ಮ ತೂಕವನ್ನು ನಿಯಂತ್ರಿಸಬಹುದು. ದೊಡ್ಡ ಯೋಜನೆಗಳನ್ನು ಮತ್ತು ಕಲ್ಪನೆಗಳಿರುವ ಯಾರಾದರೂ ನಿಮ್ಮ ಗಮನ ಸೆಳೆಯುತ್ತಾರೆ – ಯಾವುದೇ ಹೂಡಿಕೆಗಳನ್ನು ಮಾಡುವ ಮೊದಲು ವ್ಯಕ್ತಿಯ ವಿಶ್ವಾಸಾರ್ಹತೆ ಮತ್ತು ಪ್ರಾಮಾಣಿಕತೆಯನ್ನು ದೃಢೀಕರಿಸಿ. ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ಪ್ರೇಮ ಧನಾತ್ಮಕ ಕಂಪನಗಳನ್ನು ತೋರಿಸುತ್ತದೆ ಇಡೀ ಬ್ರಹ್ಮಾಂಡದ ಭಾವಪರವಶತೆ ಪ್ರೀತಿಯಲ್ಲಿರುವವರ ನಡುವೆ ನಡೆಯುತ್ತದೆ. ಹೌದು, ನೀವು ಅದೃಷ್ಟವಂತರು.

# ಎಸ್ಸೆಸ್ಸೆಫ್ ಡಿವಿಶನ್‌ಗೆ ನೂತನ ಸಾರಥ್ಯ ಅಧ್ಯಕ್ಷರಾಗಿ ನಾಸಿರ್ ಮುಈನಿ ಆಯ್ಕೆ



**ಚಿಕ್ಕಮಗಳೂರು:** ಕರ್ನಾಟಕ ರಾಜ್ಯ ಸುನ್ನೀ ಸ್ಟೂಡೆಂಟ್ಸ್ ಫೆಡರೇಷನ್ (ರಿ.) ಎಸ್ಸೆಸ್ಸೆಫ್ ಚಿಕ್ಕಮಗಳೂರು ಡಿವಿಶನ್ ಇದರ ವಾರ್ಷಿಕ ಕೌನ್ಸಿಲ್ ಇತ್ತೀಚೆಗೆ ಉಪ್ಪಳ್ಳಿ ಜಮಾಲಿಯ್ಯ ಮದ್ರಸಾ ಹಾಲ್ ನಲ್ಲಿ ನಡೆಯಿತು. ಅಧ್ಯಕ್ಷರಾದ ಫಾಝಿಲ್ ಸಅದಿ ರವರ ಸಭಾಧ್ಯಕ್ಷತೆಯಲ್ಲಿ ನಡೆದ ಸಭೆಯನ್ನು ಶಾಧುಲಿ ಜುಮಾ ಮಸ್ಜಿದ್ ಮುದರ್ರಿಸರಾದ ಮಾಚಾರು ಇಸ್ಮಾಯಿಲ್ ಸಅದಿಯವರು ಉದ್ಘಾಟಿಸಿ ಶುಭ ಹಾರೈಸಿದರು.

ರಾಜ್ಯ ಮಾಜಿ ಸದಸ್ಯರಾದ ಕೊಂಬಾಳಿ ಕೆ.ಎಂ.ಎಚ್ ಝುಹುರಿ ಯವರು ಸಂಘಟನಾ ಕಾರ್ಯಾಚರಣೆ ಬಗ್ಗೆ ಮಾತನಾಡಿದರು. ವಾರ್ಷಿಕ ವರದಿ ಹಾಗೂ ವಾರ್ಷಿಕ ಆಯ – ವ್ಯಯ ಲೆಕ್ಕ ಮಂಡಿಸಿದ ಬಳಿಕ ನಡೆದ ಆಯ್ಕೆ ಪ್ರಕ್ರಿಯೆಯಲ್ಲಿ ನೂತನ ಸಮಿತಿಯನ್ನು ಆಯ್ಕೆ ಮಾಡಲಾಯಿತು.

ಅಧ್ಯಕ್ಷರಾಗಿ ನಾಸಿರ್ ಮುಈನಿ ಉಪ್ಪಳ್ಳಿ , ಪ್ರಧಾನ ಕಾರ್ಯದರ್ಶಿಯಾಗಿ ಅಶ್ಫಾಕ್ ಶಾಮಿಲ್ ಸಖಾಫಿ ಉಪ್ಪಳ್ಳಿ, ಕೋಶಾಧಿಕಾರಿ ಜುನೈದ್ ಅಲ್ ಬದ್ರಿಯಾ. ಉಪಾಧ್ಯಕ್ಷರಾಗಿ ಶಮೀಮ್ ಕರಾವಳಿ, ಕಾರ್ಯದರ್ಶಿಯಾಗಿ ನಿಸಾರ್ ವಿಜಯಪುರ, ಕ್ಯಾಂಪಸ್ ಕಾರ್ಯದರ್ಶಿಯಾಗಿ ಶಿಹಾಬ್ ಟೌನ್ ಯೂನಿಟ್ , ಕಾರ್ಯದರ್ಶಿಯಾಗಿ ಯಾಸಿರ್ ಶಾಂತಿನಗರ, ದಅವಾ ಕಾರ್ಯದರ್ಶಿಯಾಗಿ ರಶೀದ್ ಉಪ್ಪಳ್ಳಿ, ರೈಂಬೋ ಕಾರ್ಯದರ್ಶಿಯಾಗಿ ಇಮ್ರಾನ್ ಸಖರಾಯಪಟ್ಟಣ, ಮೀಡಿಯಾ ಕಾರ್ಯದರ್ಶಿಯಾಗಿ ಅಶ್ರಫ್ ಅಲ್ ಬದ್ರಿಯಾ, ಕಾರ್ಯಕಾರಿ ಸದಸ್ಯರಾಗಿ ಶಾಹುಲ್ ಅಲ್ ಬದ್ರಿಯಾ, ಮುಸ್ತಫ ಶಾಂತಿನಗರ, ಸಿನಾನ್ ಉಪ್ಪಳ್ಳಿ, ಶುಹೈಬ್ ಟೌನ್ ಯೂನಿಟ್, ಶಿಫಾನ್ ಶಾಂತಿನಗರ, ಮುನೀರ್ ಉಪ್ಪಳ್ಳಿ, ಆಶಿಖ್ ಶಾಂತಿನಗರ, ಶಾಕಿರ್ ಸಖರಾಯಪಟ್ಟಣ, ಸಮೀರ್ ಉಪ್ಪಳ್ಳಿ ಎಂಬವರನ್ನು ಆಯ್ಕೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಎಸ್ಸೆಸ್ಸೆಫ್ ಜಿಲ್ಲಾಧ್ಯಕ್ಷ ಶಂಸುದ್ದೀನ್ ಬದ್ರಿಯಾ, ರಾಜ್ಯ ಸದಸ್ಯರಾದ ನಿಝಾಂ ಬದ್ರಿಯಾ, ಎಸ್ವೈಎಸ್ ಜಿಲ್ಲಾ ನಾಯಕರಾದ ಉಸ್ಮಾನ್ ಹಂಡುಗುಳಿ ಜಿಲ್ಲಾ ನಾಯಕರಾದ ನೌಶಾದ್ ಬದ್ರಿಯಾ, ಮುಂತಾದವರು ಉಪಸ್ಥಿತರಿದ್ದರು. ಕಾರ್ಯದರ್ಶಿ ತಮೀಮ್ ಪಿ.ಜೆ. ಸ್ವಾಗತಿಸಿ, ಅಶ್ಫಾಕ್ ಸಖಾಫಿ ಉಪ್ಪಳ್ಳಿ ವಂದಿಸಿದರು.

# ವಸಂತ ಮಡ್ಲೂರ ಅವರಿಗೆ ಸ್ವಾಮಿ ವಿವೇಕಾನಂದ ರಾಜ್ಯ ಸದ್ಭಾವನಾ ಪ್ರಶಸ್ತಿ ಪ್ರದಾನ



**ಗದಗ:** ಗದಗ ಜಿಲ್ಲೆಯ ಜಿಲ್ಲಾ ವಾರ್ತಾಧಿಕಾರಿ ವಸಂತ ಬಿ. ಮಡ್ಲೂರ ಅವರಿಗೆ ಸ್ವಾಮಿ ವಿವೇಕಾನಂದ ರಾಜ್ಯ ಸದ್ಭಾವನಾ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ಪಟ್ಟಣದಲ್ಲಿ ರಾಜ್ಯ ಯುವ ಸಂಘಗಳ ಒಕ್ಕೂಟ ಹಾಗೂ ವಿಜಯಪುರ ಜಿಲ್ಲಾ ಮುದ್ದೇಬಿಹಾಳ ಘಟಕ, ವಿಜಯಪುರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಜಾನಪದ ಪರಿಷತ್ ಮಹಿಳಾ ಘಟಕ, ಜಾನಪದ ಯುವ ಬ್ರಿಗೇಡ್ ಹಾಗೂ ಸಾಧನ ಮಹಿಳಾ ಒಕ್ಕೂಟ ಮುದ್ದೇಬಿಹಾಳ ಮತ್ತು ಧರ್ಮಯುದ್ಧ ದಿನಪತ್ರಿಕಾ ಬಳಗ ಮುದ್ದೇಬಿಹಾಳ ಸಂಯುಕ್ತ ಆಶ್ರಯದಲ್ಲಿ ಸ್ವಾಮಿ ವಿವೇಕಾನಂದರ 162ನೇ ಜಯಂತಿ ಉತ್ಸವದ ಪ್ರಯುಕ್ತ ಸ್ವಾಮಿ ವಿವೇಕಾನಂದ ರಾಷ್ಟ್ರ ಮತ್ತು ರಾಜ್ಯ ಸದ್ಭಾವನಾ ಪ್ರಶಸ್ತಿ ಪ್ರದಾನ ಸಮಾರಂಭ ಮತ್ತು ಸಾಂಸ್ಕೃತಿಕ ಯುವ ಸಂಭ್ರಮ ಸಮಾರಂಭ ಕಾರ್ಯಕ್ರಮ ಆಯೋಜಿಸಲಾಗಿತ್ತು. ರಾಜ್ಯ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗದಗ ಜಿಲ್ಲಾ ವಾರ್ತಾಧಿಕಾರಿ ವಸಂತ ಬಿ ಮಡ್ಲೂರ ಅವರ ಸೇವೆ ಗುರುತಿಸಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಸರ್ಕಾರ ಮತ್ತು ಸಾರ್ವಜನಿಕರು ಹಾಗೂ ಮಾಧ್ಯಮ ಪ್ರತಿನಿಧಿಗಳ ನಿರಂತರ ಸಮನ್ವಯದಲ್ಲಿ ಸರ್ಕಾರದ ಅಭಿವೃದ್ಧಿ ಕಾರ್ಯಗಳು, ಯೋಜನೆಯನ್ನು ಜನ ಸಾಮಾನ್ಯರಿಗೆ ಮಾಧ್ಯಮದ ಮೂಲಕ ತಲುಪಿಸುವಲ್ಲಿ ಇವರ ಸೇವೆ ಅಪಾರವಿದ್ದು, ಪ್ರಶಸ್ತಿ ನೀಡಿ ಪುರಸ್ಕರಿಸಲಾಯಿತು.ಸಿದ್ದನಕೊಳ್ಳದ ಡಾ. ಶಿವಕುಮಾರ ಸ್ವಾಮೀಜಿ, ಶಾಸಕ ಮತ್ತು ಕೆಎಸ್‌ಡಿ ನಿಗಮದ ಅಧ್ಯಕ್ಷ ಸಿ.ಎಸ್. ನಾಡಗೌಡ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಕಲಾವಿದ ಗುರುರಾಜ ಹೊಸಕೋಟೆ, ಪುರಸಭೆ ಅಧ್ಯಕ್ಷ ಮೆಹಬೂಬ ಗೊಳಸಂಗಿ, ಬೆಲ್ ಬಾಟಮ್ ಚಿತ್ರ ಖ್ಯಾತಿಯ ಕಲಾವಿದ ಕಡಬಗೆರೆ ಮುನಿರಾಜು, ರಾಜ್ಯ ಯುವ ಸಂಘಗಳ ಒಕ್ಕೂಟದ ರಾಜ್ಯಾಧ್ಯಕ್ಷ ಡಾ. ಜಾನಪದ ಬಾಲಾಜಿ, ಕಲಬುರಗಿ ವಿಭಾಗೀಯ ಸಂಚಾಲಕ ಮಂಜುನಾಥ ಜಿ. ಗೊಂಡಬಾಳ, ಗದಗ ಜಿಲ್ಲಾಧ್ಯಕ್ಷ ರವಿಕಾಂತ ಅಂಗಡಿ, ಬಿಜಾಪೂರ ಜಿಲ್ಲಾಧ್ಯಕ್ಷ ಪತ್ರಕರ್ತ ಪುಂಡಲೀಕ ಮುರಾಳ ಇದ್ದರು.

ಫೋಟೋ: ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ಪಟ್ಟಣದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಗದಗ ವಾರ್ತಾಧಿಕಾರಿ ವಸಂತ ಬಿ. ಮಡ್ಲೂರ ಅವರಿಗೆ ರಾಜ್ಯ ಸದ್ಭಾವನಾ ಪ್ರಶಸ್ತಿ ಪ್ರದಾನ ಮಾಡಲಾಯಿತು.

## ಮಕ್ಕಳ ಕಲ್ಯಾಣ ಸಮಿತಿ ರಚನೆ

**ಚಿಕ್ಕಮಗಳೂರು:** ಜಿಲ್ಲೆಗೆ ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ನೂತನವಾಗಿ ಮಕ್ಕಳ ಕಲ್ಯಾಣ ಸಮಿತಿಯನ್ನು ರಚನೆ ಮಾಡಿ ಸರ್ಕಾರದಿಂದ ಆದೇಶ ಹೊರಡಿಸಲಾಗಿದೆ.

ಮಕ್ಕಳ ಕಲ್ಯಾಣ ಸಮಿತಿಯು ಒಟ್ಟು 5 ಜನರ ತಂಡವಾಗಿದೆ. ಈ ತಂಡದಲ್ಲಿ ಅಧ್ಯಕ್ಷೆ ಜಯಶೀಲ ಕೆ.ಆರ್. ಮತ್ತು ಸದಸ್ಯರಾಗಿ ಕುಮಾರ್ ಪಿ., ಜಯಮ್ಮ ಹೆಚ್.ವಿ., ಯಶವಂತ್ ಸಿ.ಎಂ., ಅಪ್ಪು ಎನ್., ನೇಮಕವಾಗಿರುತ್ತಾರೆ.

ಸಮಿತಿಯ ಅಧ್ಯಕ್ಷರು ಹಾಗೂ

ಎಲ್ಲಾ ಸದಸ್ಯರು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಯನ್ನು ಭೇಟಿ ಮಾಡಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರೋಗ್ಯದ ಬಗ್ಗೆ ಎಲ್ಲರಲ್ಲಿಯೂ ಜಾಗೃತಿ ಅವಶ್ಯ

ಹಾಸನ: ಇಂದಿನ ದಿನಮಾನಗಳಲ್ಲಿ ಆರೋಗ್ಯದ ಬಗ್ಗೆ ಎಲ್ಲರಲ್ಲಿಯೂ ಜಾಗೃತಿ ಅವಶ್ಯಕ. ಈ ನಿಟ್ಟಿನಲ್ಲಿ ಪತ್ರಕರ್ತರು ಹಾಗೂ ಕುಟುಂಬವರ್ಗಕ್ಕೆ ಆಯೋಜಿಸಿರುವ ಬೃಹತ್ ಆರೋಗ್ಯ ಶಿಬಿರ ಅರ್ಥಪೂರ್ಣವಾಗಿ ಜರುಗಿದೆ ಎಂದು ಶ್ರೀ ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಬುನಾಥ ಸ್ವಾಮೀಜಿ ತಿಳಿಸಿದರು.

ನಗರದ ಗಾಂಧಿ ಭವನದಲ್ಲಿ ಶ್ರೀ ಡಾ. ಬಾಲಗಂಗಾಧರನಾಥ ಮಹಾಸ್ವಾಮೀಜಿಯವರ ದಿವ್ಯ ಆಶೀರ್ವಾದ ದೊಂದಿಗೆ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಡಾ. ನಿರ್ಮಲಾನಂದನಾಥ ಮಹಾಸ್ವಾಮಿಜಿಯವರ ದಿವ್ಯ ಸಾನಿಧ್ಯದೊಂದಿಗೆ ಹಾಗೂ ವಿಧಾನಪರಿಷತ್ ಮಾಜಿ ಸದಸ್ಯ ಎಂ.ಎ ಗೋಪಾಲಸ್ವಾಮಿ ಅವರ ಸಹಕಾರದೊಂದಿಗೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ಹಮ್ಮಿಕೊಂಡಿರುವ ಆರೋಗ್ಯ ಶಿಬಿರದಲ್ಲಿ ಗಾಂಧಿ ಪುತ್ಥಳಿಗೆ ಪುಷ್ಪಾರ್ಚನೆ ಮಾಡಿದ ನಂತರ ಮಾತನಾಡಿದ ಅವರು ಆದಿಚುಂಚನಗಿರಿ ಮಹಾವಿದ್ಯಾಲಯದಿಂದ ಇಂದು ಪತ್ರಕರ್ತರು, ಏಜೆಂಟರ ಕುಟುಂಬ ವರ್ಗಕ್ಕೆ ಬೃಹತ್ ಆರೋಗ್ಯ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಪತ್ರಕರ್ತರ ಸಂಘದ ಕೆ.ಹೆಚ್ ವೇಣು ಕುಮಾರ್ ಅವರ ಪರಿಶ್ರಮ, ಹೆಚ್ ಪಿ ಮದನ ಗೌಡರು,ಜಿಲ್ಲಾ ಪದಾಧಿಕಾರಿಗಳು, ತಾಲೂಕಿನ ಎಲ್ಲಾ ಅಧ್ಯಕ್ಷರ ಅಭಿಲಾಷೆಯಂತೆ ಆರೋಗ್ಯ ಶಿಬಿರವನ್ನು ಇದೇ ಪ್ರಥಮ ಬಾರಿಗೆ ಆಯೋಜನೆ ಮಾಡಲಾಗಿದೆ. ಆಯೋಜಕರಾದ ವಿಧಾನ ಪರಿಷತ್ ಮಾಜಿ ಸದಸ್ಯರಾದ ಎಂ.ಎ ಗೋಪಾಲ ಸ್ವಾಮಿ ಅವರು ಸಹಕಾರ ನೀಡಿದ್ದಾರೆ.

ಬೆಂಗಳೂರಿನ ಕಿದ್ವಾಯಿ, ನಿಮಾನ್ಸ್ ,ಜಯದೇವ ಸೇರಿದಂತೆ ಹಲವು ಆಸ್ಪತ್ರೆಗಳು ಸಹಕಾರ ನೀಡಿದ್ದು ಇಂದು ಮನುಷ್ಯರಿಗೆ ಆರೋಗ್ಯ ಅತಿ ಮುಖ್ಯವಾಗಿದ್ದು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿಗಳು ಗ್ರಾಮೀಣ ಪ್ರದೇಶದಲ್ಲಿ ಆರೋಗ್ಯ ಸೇವೆಯನ್ನು ಪ್ರಾರಂಭಿಸಿ ಇಂದು ಹಾಸನ, ತುಮಕೂರು, ಕುಣಿಗಲ್,ಮಂಡ್ಯಾ ಸೇರಿದಂತೆ ನಾನಾ ಜಿಲ್ಲೆಗಳ ಬಡ ಹಾಗೂ ಮಧ್ಯಮ , ರೈತಾಪಿ ವರ್ಗದ ಜನರಿಗೆ ಆಸ್ಪತ್ರೆಗಳ ಮೂಲಕ ಉತ್ತಮ ಆರೋಗ್ಯ ಸೇವೆಯನ್ನು ಒದಗಿಸಲಾಗುತ್ತಿದೆ.

ಸೇವೆಯೇ ಪೂಜೆ ಎಂಬ ಭಾವನೆಯಂತೆ ಶ್ರೀಮಠದಿಂದ ಆರೋಗ್ಯ ಸೇವೆಯನ್ನು ಒದಗಿಸಲಾಗುತ್ತಿದ್ದು ನುರಿತ ವೈದ್ಯರ ಸಹಕಾರದೊಂದಿಗೆ ಇಂದು ಯಶಸ್ವಿಯಾಗಿ ಆರೋಗ್ಯ ಶಿಬಿರ ನಡೆದಿದೆ ಎಂದರು .

ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಯವರ 12ನೇ ವರ್ಷದ ಪಟ್ಟಾಭಿಷೇಕ ಹಿನ್ನೆಲೆಯಲ್ಲಿ ಬಿಜಿಎಸ್ ಆಸ್ಪತ್ರೆಯಲ್ಲಿ 100 ಮಂದಿಗೆ ಉಚಿತವಾಗಿ ಹೃದ್ರೋಗ ಶಸ್ತ್ರಚಿಕಿತ್ಸೆ ಒದಗಿಸಲಾಗುತ್ತಿದೆ. ಶ್ರೀ ಆದಿಚುಂಚನಗಿರಿ ಹಾಸನ ಶಾಖಾ ಮಠಕ್ಕೂ ಪತ್ರಕರ್ತರಿಗೂ ಅವಿನಾಭಾವ ಸಂಬಂಧವಿದ್ದು ಶಿಬಿರದ ಯಶಸ್ಸಿಗೆ ಎಲ್ಲರೂ ಸಹಕಾರ ನೀಡಿದ್ದು ಆರೋಗ್ಯ ಶಿಬಿರ ಉತ್ತಮವಾಗಿ ಆಯೋಜನೆಗೊಂಡಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಹಲವು ತಿಂಗಳಿನಿಂದ ಪತ್ರಕರ್ತರು ಹಾಗೂ ಅವರ ಕುಟುಂಬಕ್ಕೆ ಆರೋಗ್ಯ ಶಿಬಿರ ಆಯೋಜನೆ ಮಾಡಬೇಕು ಎಂಬ ಉದ್ದೇಶಕ್ಕೆ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಶ್ರೀ ಶಂಬುನಾಥ ಸ್ವಾಮೀಜಿ, ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ. ಗೋಪಾಲಸ್ವಾಮಿ ಅವರ ಸಹಕಾರದೊಂದಿಗೆ ಹಾಗೂ ಬೆಂಗಳೂರು, ಮೈಸೂರು ಪ್ರಮುಖ ಆಸ್ಪತ್ರೆಗಳ ಸಹಯೋಗದೊಂದಿಗೆ ಶಿಬಿರ ಯಶಸ್ವಿಯಾಗಿದ್ದು ಸಹಕರಿಸಿದ ಹಿರಿಯಾ ಪತ್ರಕರ್ತರು ಸಂಘದ ಸದಸ್ಯರು ಸೇರಿದಂತೆ ಎಲ್ಲರಿಗೂ ಧನ್ಯವಾದ ಅರ್ಪಿಸುವುದಾಗಿ ತಿಳಿಸಿದರು.



ಆರೋಗ್ಯ ಶಿಬಿರದಲ್ಲಿ ಮೈಸೂರಿನ ಜಯದೇವ ಹೃದ್ರೋಗ ಆಸ್ಪತ್ರೆ , ಬೆಂಗಳೂರಿನ ನಿಮಾನ್ಸ್, ಕಿದ್ವಾಯಿ ಮಂಗಳೂರಿನ ಯನೊಪೋಯ ಹಾಗೂ ಹಾಸನದ ಪ್ರಸೋತಿ ಮತ್ತು ಸ್ತ್ರಿ ರೋಗ ತಜ್ಞರ ಸಂಘದ ಸಹಕಾರದೊಂದಿಗೆ ನಡೆಯಿತು.

12 ಕ್ಕೂ ಹೆಚ್ಚು ಮಂದಿಯಿಂದ ನೇತ್ರದಾನ:20 ಮಂದಿ ರಕ್ತದಾನ

ಪಬ್ಲಿಕ್ ಎಕ್ಸ್ಪ್ರೆಸ್ ದೃಶ್ಯ ಮಾಧ್ಯಮದ ವರದಿಗಾರ ನಾಗರಾಜ್,ಸುನಿತಾ , ಲೋಕೇಶ್ ಸೇರಿದಂತೆ ಸುಮಾರು 12 ಮಂದಿ ನೇತ್ರದಾನಕ್ಕೆ ನೋಂದಣಿ ಮಾಡಿಸಿದರು. ಸುಮಾರು 20 ಕ್ಕೂ ಹೆಚ್ಚು ಮಂದಿ ರಕ್ತದಾನ ಮಾಡಿದರು.

ಆರೋಗ್ಯ ತಪಾಸಣೆಗೆ ಒಳಗಾದ 1000 ಕ್ಕೂ ಹೆಚ್ಚು ಮಂದಿ;

ಇಂದು ಬೆಳಗ್ಗೆ 9:00 ಗಂಟೆಯಿಂದ ಆರಂಭವಾದ ಆರೋಗ್ಯ ತಪಾಸಣಾ ಶಿಬಿರದಲ್ಲಿ ಜಿಲ್ಲೆಯ ನಾನಾ ತಾಲೂಕುಗಳಿಂದ ಆಗಮಿಸಿದ ಪತ್ರಕರ್ತರು ಹಾಗೂ ಅವರ ಕುಟುಂಬ ವರ್ಗದವರು ರಕ್ತ ಪರೀಕ್ಷೆ, ಅಧಿಕರಕ್ತದೊತ್ತಡ, ಕಣ್ಣು, ಮೂಗು ,ಕಿವಿ ಸೇರಿದಂತೆ ನಾನಾ ಚಿಕಿತ್ಸೆಗೆ ಒಳಗಾದರೂ .

ಸುಮಾರು 1000ಕ್ಕೂ ಹೆಚ್ಚು ಮಂದಿ ಆರೋಗ್ಯ ತಪಾಸಣೆಗೆ ಒಳಗಾಗಿದ್ದು ಎಲ್ಲರಿಗೂ ವೈದ್ಯರು ಸೂಕ್ತ ತಪಾಸಣೆ ನಡೆಸಿ ಸಲಹೆ ನೀಡಿದರು ಹಾಗೂ ಅಗತ್ಯವಿದ್ದವರಿಗೆ ಉಚಿತವಾಗಿ ಔಷಧಿಯನ್ನು ವಿತರಿಸಿದರು. ಮಹಿಳೆಯರಿಗೆ ವಿಶೇಷವಾಗಿ ಕ್ಯಾನ್ಸರ್ ತಪಾಸಣೆಯೂ ನಡೆಯಿತು.

ಈ ವೇಳೆ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಘಟಕದ ಅಧ್ಯಕ್ಷ ಶಿವಾನಂದ ತಗಡೂರು, ಜಿಲ್ಲಾ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷರಾದ ಕೆ.ಆರ್.ಮಂಜುನಾಥ್, ಬಿ.ಆರ್ ಉದಯಕುಮಾರ್, ಲೀಲಾವತಿ, ತಾಲ್ಲುಕು ಘಟಕದ ಅಧ್ಯಕ್ಷರು, ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಬಿ.ಸಿ ಶಶಿಧರ್, ಉಪಾಧ್ಯಕ್ಷರಾದ ಎಚ್.ಟಿ ಮೋಹನ್, ಕೆ.ಎಂ.ಹರೀಶ್,ಖಜಾಂಚಿ ಕುಮಾರ್,

ಕಾರ್ಯದರ್ಶಿ ಸಿ.ಬಿ.ಸಂತೋಷ್, ಪಿ.ಎ.ಶ್ರೀನಿವಾಸ್ ಸೇರಿದಂತೆ ಕಾರ್ಯಕಾರಿ ಮಂಡಳಿ ಹಾಗೂ ಸದಸ್ಯರು ಇದ್ದರು.

### ಆರೋಗ್ಯ ಶಿಬಿರ ಯಶಸ್ಸಿಗೆ ಗೋಪಾಲಸ್ವಾಮಿ ಮೆಚ್ಚುಗೆ:

ಆರೋಗ್ಯ ಶಿಬಿರ ವೀಕ್ಷಣೆ ಬಳಿಕ ಮಾತನಾಡಿದ ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ ಗೋಪಾಲಸ್ವಾಮಿ ಅವರು ಇಂದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಹಮ್ಮಿಕೊಂಡಿರುವ ಬೃಹತ್ ಆರೋಗ್ಯ ಶಿಬಿರ ಯಶಸ್ವಿಯಾಗಿ ನಡೆದಿರುವುದು ಸಂತಸ ತಂದಿದೆ .

ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಸ್ವಾಮೀಜಿಗಳು ಸಹಕಾರ ನೀಡಿದ್ದು ತುಮಕೂರು ಹಾಸನ ಕುಣಿಗಲ್ ಮಂಡ್ಯ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಆಸ್ಪತ್ರೆಗಳನ್ನು ತೆರೆದು ಶ್ರೀ ಮಠವು ಉತ್ತಮ ಆರೋಗ್ಯ ಸೇವೆಯನ್ನು ಒದಗಿಸುತ್ತಿದೆ. ಇದು ಉತ್ತಮ ಬೆಳವಣಿಗೆಯಾಗಿದ್ದು ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರ ಆಶೀರ್ವಾದ ಹಾಗೂ ಶ್ರೀ ಕಾಲಭೈರವೇಶ್ವರ ದೇವರ ಕೃಪ ಆಶೀರ್ವಾದವು ಇರುವುದರಿಂದ ಯಶಸ್ವಿಯಾಗಿ ಮುನ್ನಡೆಯುತ್ತಿದ ಎಂದು ಹೇಳಿದರು.

### ಪತ್ರಕರ್ತರಿಗೆ ಆರೋಗ್ಯ ತಪಾಸಣೆ ಅವಶ್ಯಕ:

ಶಾಸಕ ಸ್ವರೂಪ್ ಪ್ರಕಾಶ್ ಶಿಬಿರದ ವೀಕ್ಷಣೆ ಬಳಿಕ ಮಾತನಾಡಿ ಸದಾ ಒತ್ತಡದಲ್ಲಿ ಕಾರ್ಯ ನಿರ್ವಹಿಸುವ ಪತ್ರಕರ್ತರಿಗೆ ಆರೋಗ್ಯ ತಪಾಸಣೆ ಅತ್ಯವಶ್ಯಕವಾಗಿದ್ದು ಇಂತಹ ಬೃಹತ್ ಆರೋಗ್ಯ ಶಿಬಿರ ಆಯೋಜನೆ ಶ್ಲಾಘನೀಯ ಎಂದು ಹೇಳಿದರು .

ಪತ್ರಕರ್ತರು ಹಾಗೂ ಅವರ ಕುಟುಂಬ ವರ್ಗಕ್ಕೆ ಬೃಹ ತಾರೋಗ್ಯ ಶಿಬಿರ ಆಯೋಜನೆ ಮಾಡಿರುವ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ವೇಣುಕುಮಾರ್ ಹಾಗೂ ಪದಾಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದ ಅವರು ಈ ರೀತಿಯ ಆರೋಗ್ಯ ಶಿಬಿರಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಸಲಹೆ ನೀಡಿದರು.

### ಪ್ರಥಮ ಆರೋಗ್ಯ ಶಿಬಿರದ ಯಶಸ್ಸಿಗೆ ಸಹಕಾರಿಸಿದ ಎಲ್ಲರಿಗೂ ಧನ್ಯವಾದ:

ಇದೇ ಪ್ರಥಮ ಬಾರಿಗೆ ಜಿಲ್ಲೆಯಲ್ಲಿ ಹಮ್ಮಿಕೊಂಡಿದ್ದ ಬೃಹತ್ ಆರೋಗ್ಯ ಶಿಬಿರದಲ್ಲಿ ಜಿಲ್ಲೆಯ ಪತ್ರಕರ್ತರು ಹಾಗೂ ಕುಟುಂಬ ವರ್ಗ ಹುಮ್ಮಸ್ಸಿನಿಂದ ಭಾಗವಹಿಸಿದ್ದು ಸಂತಸ ತಂದಿದೆ ಎಂದು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ಎಚ್.ವೇಣುಕುಮಾರ್ ತಿಳಿಸಿದರು.

# ಗುರಿ ಹೊಂದಿರುವ ವಿದ್ಯಾರ್ಥಿಗಳಿಗೆ ದಾರಿ ತೋರುವುದು ಶಿಕ್ಷಕರ ಕರ್ತವ್ಯ: ಹೆಚ್.ಡಿ ತಮ್ಮಯ್ಯ



**ಚಿಕ್ಕಮಗಳೂರು:** ಗುರಿ ಹೊಂದಿರುವ ವಿದ್ಯಾರ್ಥಿಗಳಿಗೆ ದಾರಿ ತೋರುವುದು ಶಿಕ್ಷಕರ ಕರ್ತವ್ಯವಾಗಿದೆ. ಶಿಕ್ಷಣ ಕೇವಲ ನೌಕರಿಗಲ್ಲ ಉತ್ತಮ ಜೀವನ ನಿರ್ವಹಣೆಗೂ ಅತ್ಯವಶ್ಯಕ ಎಂದು. ಶಾಸಕ ಹೆಚ್.ಡಿ ತಮ್ಮಯ ಹೇಳಿದರು.

ನಗರದ ಕುವೆಂಪು ಕಲಾ ಮಂದಿರದಲ್ಲಿ ಯುನೈಟೆಡ್ ಇಂಟರ್ ನ್ಯಾಷನಲ್ ಸ್ಕೂಲ್‌ನ 23 ನೇ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮದ ಉದ್ಘಾಟನೆ ನಡೆಸಿ ಮಾತನಾಡಿದ ಅವರು ಮಕ್ಕಳು ಕಲಿಕೆಯಲ್ಲಿ ಹೆಚ್ಚು ಆಸಕ್ತಿ ವಹಿಸಬೇಕು. ಬಾಲ್ಯದಲ್ಲಿ ಮಕ್ಕಳ ಮನಸ್ಸು ಮತ್ತು ಬುದ್ಧಿಶಕ್ತಿ ಹೆಚ್ಚು ಕ್ರೀಯಾಶೀಲತೆಯಿಂದ ಕೂಡಿರುತ್ತದೆ. ಯಾವುದೇ ವಿಷಯವನ್ನು, ಕಲೆಯನ್ನು ಕರಗತ ಮಾಡಿಕೊಳ್ಳುವಂತ ಶಕ್ತಿ ಪ್ರತಿಯೊಂದು ಮಕ್ಕಳಲ್ಲಿ ಅಡಗಿರುತ್ತದೆ. ಪೋಷಕರು ಇವುಗಳನ್ನು ಅರಿತು ಮಕ್ಕಳನ್ನು ಪ್ರೋತ್ಸಾಹಿಸಬೇಕು ಎಂದರು.


ವಿದ್ಯೆ ಎಂಬುದು ಪ್ರಬಲ ಅಸ್ತ್ರ ಇದನ್ನು ಸರಿಯಾದ ರೀತಿಯಲ್ಲಿ ಉಪಯೋಗಿಸಿಕೊಂಡಲ್ಲಿ ಪ್ರಪಂಚವನ್ನೇ ಬದಲಾಯಿಸಬಹುದು. ಮಕ್ಕಳು ವಿದ್ಯೆಯ ಜೊತೆಗೆ ಸಂಸ್ಕಾರವನ್ನು ಕಲಿತು ತಂದೆ–ತಾಯಿ, ಗುರು, ಹಿರಿಯರಿಗೆ ಗೌರವ ನೀಡುವುದನ್ನು ಕಲಿಯಬೇಕು ಎಂದ ಅವರು ಸುಮಾರು 23 ವರ್ಷಗಳಿಂದ ಉತ್ತಮ ಶಿಕ್ಷಣ ನೀಡಿ, ಮಕ್ಕಳ ಭವಿಷ್ಯ ರೂಪಿಸುತ್ತಿರುವ ಈ ಸಂಸ್ಥೆಯು ಇನ್ನಷ್ಟು ಬೆಳವಣಿಗೆ ಹೊಂದಲಿ ಎಂದು ಹಾರೈಸಿದರು.

ಯುನೈಟೆಡ್ ಶಾಲೆಯ ಅಧ್ಯಕ್ಷ ಜಮೀರ್ ಅಹಮದ್ ಮಾತನಾಡಿ. ಶಿಕ್ಷಣ ಕೇವಲ ಪುಸ್ತಕ ಹಾಗೂ ಪರೀಕ್ಷೆಗೆ ಸೀಮಿತವಲ್ಲ. ಶಿಕ್ಷಣವೂ ಮಕ್ಕಳಲ್ಲಿ ವ್ಯಕ್ತಿತ ರೂಪಿಸುತ್ತದೆ. ಬದುಕು ನಿರ್ವಹಿಸುವ ಶಕ್ತಿ ನೀಡುತ್ತದೆ. ಒಬ್ಬ ಉತ್ತಮ ವಿದ್ಯಾರ್ಥಿ ಶಿಕ್ಷಣ ಸಂಸ್ಥೆಗೆ ಜೊತೆಗೆ ಸಾಮಾಜದಲ್ಲೂ ಉನ್ನತ ಸ್ಥಾನ ಗಳಿಸುತ್ತಾನೆ. ನಮ್ಮ ಸಂಸ್ಥೆಯ ಶಿಕ್ಷಕರು ಪ್ರತಿಯೊಂದು ಮಗುವಿನ ಉತ್ತಮ ಭವಿಷ್ಯಕ್ಕಾಗಿ ಶ್ರಮಿಸುತ್ತಿದ್ದಾರೆ. ವಿದ್ಯಾರ್ಥಿಗಳಲ್ಲಿ ಗುರಿ ಮುಖ್ಯ. ಪ್ರಸ್ತುತ ಸಮಾಜದಲ್ಲಿ ಜ್ಞಾನಕ್ಕೆ ಹೆಚ್ಚು ಪ್ರಾಮುಖ್ಯತೆ ದೊರಕುತ್ತಿದೆ ತಮ್ಮ ಆಸಕ್ತಿಯ ಕ್ಷೇತ್ರಗಳಲ್ಲಿ ಹೆಚ್ಚಿನ ಜ್ಞಾನ ಹೊಂದುವುದರ ಮೂಲಕ ತಮ್ಮ ಗುರಿ ತಲುಪಿ ಎಂದರು.

ಶಾಲೆಯ ಪ್ರಾಂಶುಪಾಲರಾದ ಆಯಿಶಾ ಜಮೀರ್ ಅಹಮದ್ ಮಾತನಾಡಿ ಶಾಲೆಯೂ ವಿದ್ಯೆ ಜೊತೆಗೆ ಸಮಾಜದ ಅರಿವನ್ನು ಮೂಡಿಸುತ್ತದೆ. ಪೋಷಕರು ಮಕ್ಕಳಲ್ಲಿ ವಿನಯತೆ, ಮನುಷ್ಯತ್ವ, ಸಂಸ್ಕೃತಿಗಳನ್ನು ಮನೆಯಲ್ಲೇ ಕಲಿಸಬೇಕು ಹಾಗೂ ಮಕ್ಕಳ ಸ್ವಯಂ ಕಲಿಕೆಗೆ ಅವಕಾಶ ಮಾಡಿಕೊಡಬೇಕು. ಅಂಕಗಳನ್ನು ಪ್ರತಿಯೊಂದು ಮಗುವು ಗಳಿಸಬಹುದು ಆದರೆ ಮಕ್ಕಳಲ್ಲಿ ನೈತಿಕ ಶಿಕ್ಷಣ ನೀಡಿ ಅವರನ್ನು ಸಮಾಜದ ಗೌರವಯುತ ವ್ಯಕ್ತಿಯಾಗಿ ರೂಪಿಸುವುದು ನಮ್ಮ ಕರ್ತವ್ಯ ಎಂದ ಅವರು ತಮ್ಮ ಮಕ್ಕಳ ಆಸಕ್ತಿಗಳನ್ನು ಅರಿತು ಅವರ ಮುಂದಿನ ಭವಿಷ್ಯ ನಿರ್ಮಿಸಿಕೊಳ್ಳಲು ಸಹಕರಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ನಜೀರ್ ಅಹಮದ್. ಶೇಖ್ ಇಸ್ಮಾಯಿಲ್, ಮುಖ್ಯ ಶಿಕ್ಷಕಿ ಇಂಪಾಗೌಡ, ಶಿಕ್ಷಕಿ ವನಿತ ಹೆಚ್. ಎಂ ಸೇರಿದಂತೆ ಪೋಷಕರು , ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಭದ್ರಾ ನಾಲೆಯ ಅಕ್ರಮ ಮೋಟಾರ್ ತೆರವು ಕಾರ್ಯಾಚರಣೆ



**ಮಾಯಕೊಂಡ:** ಸಮೀಪದ ಭದ್ರಾ ನಾಲೆಯಲ್ಲಿ ಅಕ್ರಮವಾಗಿ ಅಳವಡಿಸಿದ ಮೋಟಾರ್ ತೆರವು ಕಾರ್ಯಾಚರಣೆ ಶನಿವಾರ ಪಡೆಯಿತು. ಭದ್ರಾ ಅಚ್ಚುಕಟ್ಟು ಭಾಗದಲ್ಲಿ ಇದೀಗ ನಾಟಿ ಭರದಿಂದ ಸಾಗಿದ್ದು, ಅಚ್ಚುಕಟ್ಟು ಪ್ರದೇಶದ ಕೊನೆ ಭಾಗಕ್ಕೆ ನೀರು ತಲುಪುತ್ತಿಲ್ಲ ಎಂದು ರೈತರು ಆರೋಪಿಸಿದ್ದರು. ಜಿಲ್ಲಾಡಳಿತದ ಆದೇಶದ ಮೇರೆಗೆ ಉಪ ವಿಭಾಗಾಧಿಕಾರಿ ಸಂತೋಷ ಕುಮಾರ್ ನೇತೃತ್ವದಲ್ಲಿ ಶನಿವಾರ ಕಾರ್ಯಾಚರಣೆ ನಡೆಸಲಾಯಿತು. ಕುರ್ಕಿ, ಅಣಬೇರು, ಬಾಡ, ನಲಕುಂದ ಮತ್ತಿತರ ಕಡೆ ನಾಲೆಯಲ್ಲಿ ಅಳವಡಿಸಲಾದ ಅಕ್ರಮ ಮೋಟಾರ್ ತೆರವುಗೊಳಿಸಲಾಯಿತು. ಸುಮಾರು ನೂರಕ್ಕೂ ಹೆಚ್ಚು ಮೋಟಾರ್ ತೆರವುಗೊಳಿಸಲಾಯಿತು. ಬೆಸ್ಕಾಂ ಅಧಿಕಾರಿಗಳು ಅಕ್ರಮ ಮೋಟಾರುಗಳ ವಿದ್ಯುತ್ ಸಂಪರ್ಕ ಕಡಿತಗೊಳಿಸಿದರು.ಕರ್ನಾಟಕ ನೀರಾವರಿ ನಿಗಮ ನಿಯಮಿತದ ಕಾರ್ಯಪಾಲಕ ಇಂಜಿನಿಯರ್ ಮನೋಜ್ ಕುಮಾರ್ ಮತ್ತು ಸಿಬ್ಬಂದಿ, ಕಂದಾಯ ಇಲಾಖೆಯ ನಿರೀಕ್ಷಕ ಹಿರೇಗೌಡರು ಮತ್ತು ಸಿಬ್ಬಂದಿ, ಮಾಯಕೊಂಡ ಮತ್ತು ಹದಡಿ ಪೊಲೀಸ್ ಠಾಣೆಯ ಸಿಬ್ಬಂದಿ ಕಾರ್ಯಚರಣೆಯಲ್ಲಿ ಪಾಲ್ಗೊಂಡಿದ್ದರು.

## ಸಾಮಾನ್ಯ ಸಭೆ

**ಚಿಕ್ಕಮಗಳೂರು:** ಚಿಕ್ಕಮಗಳೂರು ತಾಲ್ಲೂಕು ಪಂಚಾಯಿತಿ ಸಾಮಾನ್ಯ ಸಭೆ ಫೆಬ್ರವರಿ 11 ರಂದು ಬೆಳ್ಳಿಗೆ 10.30 ಗಂಟೆಗೆ ತಾಲ್ಲೂಕು ಪಂಚಾಯಿತಿಯ ಡಾ. ಬಿ. ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ(ಆಡಳಿತ)ಗಳಾದ ಎಸ್.ಜಿ. ಕೊರವರ ರವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದೆ ಎಂದು ಚಿಕ್ಕಮಗಳೂರು ತಾಲ್ಲೂಕು ಪಂಚಾಯಿತಿ ಸದಸ್ಯ ಕಾರ್ಯದರ್ಶಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯ ಒಲಂಪಿಕ್ ಕ್ರೀಡಾಕೂಟದಲ್ಲಿ ನಿವೇದಿತಾಗೆ ಚಿನ್ನ, ಸಮೃದ್‌ಗೆ ಕಂಚು

**ಶಿವಮೊಗ್ಗ:** ಉಡುಪಿಯ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಕರ್ನಾಟಕ ರಾಜ್ಯ ಒಲಂಪಿಕ್ಸ್ ಕ್ರೀಡಾಕೂಟದಲ್ಲಿ ಶಿವಮೊಗ್ಗ ಜಿಲ್ಲೆಯಿಂದ ಪ್ರತಿನಿಧಿಸಿದ್ದ ಜಿಲ್ಲಾ ಅಮೆಚುರ್ ಬಾಕ್ಸಿಂಗ್ ಅಸೋಸಿಯೇಷನ್ ಕ್ರೀಡಾಪಟುಗಳಾದ ನಿವೇದಿತಾ ಆರ್. ಇವರು 65 ರಿಂದ 70 ಕೆಜಿ ತೂಕದ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ ಹಾಗೂ ಸಮೃದ್ 60 ರಿಂದ 65 ಕೆಜಿ ತೂಕದ ವಿಭಾಗದಲ್ಲಿ ಭಾಗವಹಿಸಿ ಕಂಚಿನ ಪದಕ ಪಡೆದು-ಕೊಂಡಿದ್ದಾರೆ ಎಂದು ಶಿವಮೊಗ್ಗ ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷ ಯೋಗೀಶ್ ತಿಳಿಸಿದರು. ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಸರ್ಕಾರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲಾ ಕ್ರೀಡಾಂಗಣದಲ್ಲಿ ಕರ್ನಾಟಕ ಒಲಂಪಿಕ್ ಸಹಯೋಗದಲ್ಲಿ ನಡೆದ ಕ್ರೀಡಾಕೂಟದಲ್ಲಿ ಮೀನಾಕ್ಷಿ ಭವನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ನಿವೇದಿತಾ ಆರ್. ಹಾಗೂ ಶಿವಮೊಗ್ಗದ ವಿದ್ಯಾಭಾರತಿ ಕಾಲೇಜಿನ ವಿದ್ಯಾರ್ಥಿ ಸಮೃದ್ ಇದೇ ಮೊದಲ ಬಾರಿಗೆ ಶಿವಮೊಗ್ಗ ಜಿಲ್ಲೆಗೆ ಪ್ರಶಸ್ತಿ ತಂದಿದ್ದಾರೆ. ಈ ಇಬ್ಬರು ಜಿಲ್ಲೆಗೆ ಕ್ರೀಡಾ ವಿಭಾಗದಲ್ಲಿ ಕೀರ್ತಿ ತಂದಿದ್ದು, ಈ ಇಬ್ಬರು ಶಿವಮೊಗ್ಗದ ಬಾಕ್ಸಿಂಗ್ ಕೋಚ್ ಮೀನಾಕ್ಷಿಯವರ ಬಳಿ ತರಬೇತಿ ಪಡೆದಿದ್ದಾರೆ ಎಂದರು.ವಿಜೇತ ಕ್ರೀಡಾಪಟುಗಳಿಗೆ ಜಿಲ್ಲಾ ಅಮೆಚೂರ್ ಬಾಕ್ಸಿಂಗ್ ಅಸೋಸಿಯೇಷನ್ ಅಧ್ಯಕ್ಷ ಶಿವಮೊಗ್ಗ ವಿನೋದ್ ಸೇರಿದಂತೆ ಪೋಷಕರು ಹಾಗೂ ಕಾಲೇಜಿನ ಆಡಳಿತ ಮಂಡಳಿ ಅಭಿನಂದನೆ ಸಲ್ಲಿಸಿದ್ದಾರೆ. ಚಿನ್ನದ ಪದಕ ಪಡೆದಿರುವ ನಿವೇದಿತ ಆರ್. ಮಾತನಾಡಿ, ಇದು ನನ್ನ ಶ್ರಮಕ್ಕೆ ಸಿಕ್ಕ ಪ್ರತಿಫಲವಾಗಿದೆ. ರಾಜ್ಯಮಟ್ಟದಲ್ಲಿ ಉತ್ತಮ ರೀತಿಯಲ್ಲಿ ಆಟ ಆಡಿದ್ದೇನೆ. ಅದೇ ರೀತಿ ರಾಷ್ಟ್ರಮಟ್ಟದಲ್ಲಿ ಆಡಿ, ನನ್ನ ತಂದೆಗೆ ಒಳ್ಳೆಯ ಹೆಸರು ತರಬೇಕೆಂದಿದ್ದೇನೆ ಎಂದರು.ನಿವೇದಿತ ತಂದೆ ರಮೇಶ್ ಆರ್, ತರಬೇತುದಾರ ಶರವಣ್ ಸೇರಿದಂತೆ ಇನ್ನಿತರರು ಸುದ್ದಿಗೋಷ್ಠಿಯಲ್ಲಿದ್ದರು.

# ರೈತರ ತೋಟಗಳ ಮೇಲೆ ಅವೈಜ್ಞಾನಿಕ ಹೈಟೆನ್ಷನ್ ವಿದ್ಯುತ್ ವಿರೋಧಿಸಿ ಪ್ರತಿಭಟನೆ

**ಶಿವಮೊಗ್ಗ:** ರೈತರ ತೋಟಗಳ ಮೇಲೆ ಅವೈಜ್ಞಾನಿಕ ಹೈಟೆನ್ಷನ್ ವಿದ್ಯುತ್ ಮಾರ್ಗ ಹಾದು ಹೋಗುವುದನ್ನು ವಿರೋಧಿಸಿ ಶಿಕಾರಿಪುರದ ತಾಲೂಕು ಕಚೇರಿ ಎದುರು ನಡೆಯುತ್ತಿರುವ ಬೃಹತ್ ಪ್ರತಿಭಟನೆಯಲ್ಲಿ ಸಚಿವ ಮಧು ಬಂಗಾರಪ್ಪ ಮನವಿ ಸ್ವೀಕರಿಸುವ ಮೂಲಕ ತಾತ್ಕಾಲಿಕ ಅಂತ್ಯ ಹಾಡಲಾಗಿದೆ. ಕಳೆದ ಮೂರು ದಿನಗಳಿಂದ ಹೋರಾಟಗಾರ ತೀ.ನಾ.ಶ್ರೀನಿವಾಸ್ ಅವರ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಯುತ್ತಿತ್ತು. ಬುಧವಾರ ಸಚಿವ ಮಧು ಬಂಗಾರಪ್ಪನವರು ಮನವಿ ಸ್ವೀಕರಿಸಿ ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡುವ ಮೂಲಕ ಪ್ರತಿಭಟನೆಗೆ ತಾತ್ಕಾಲಿಕ ಇತಿಶ್ರೀ ಹಾಡಲಾಗಿದೆ. ಈಸೂರಿನಿಂದ ಶಿಕಾರಿಪುರದ ವರೆಗೆ 110/111 ಕೆವಿ ಎಸ್.ಪಿ. ಲೈನ್ ಡಿ.ಸಿ ಗೋಪುರವನ್ನು 4.5 ಕಿಮಿ ದೂರ ಕ್ರಮಿಸದೆ ಇದನ್ನ 23 ಕಿಮಿ ದೂರ ಕ್ರಮಿಸಿ ಬರುವುದರಿಂದ ಹಲವರ ರೈತರ ತೋಟಗಳು ಹಾಳಾಗಲಿದೆ. 4.5 ಕಿಮಿ ದೂರಕ್ಕೆ 12-15 ವಿದ್ಯುತ್ ಗೋಪುರಗಳು ಬರಲಿದೆ. ಇದರ ಬದಲಿಗೆ 45-50 ಗೋಪುರಗಳನ್ನ ನಿರ್ಮಿಸಲಾಗುತ್ತಿದೆ ಎಂದು ಆರೋಪಿಸಿ ರೈತರು ಅಂದಿನ ಎಸಿ ವಿರುದ್ಧ, ಸಂಸದರ ವಿರುದ್ಧ, ಶಿಕಾರಿಪುರ ಶಾಸಕರ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದರು. ಸಚಿವ ಮಧು ಬಂಗಾರಪ್ಪ ಪ್ರತಿಭಟನಾ ರೈತರ ಬಳಿ ಹೋಗಿ ಸಮಸ್ಯೆಯನ್ನು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಭೆ ನಡೆಸಿ ಮೂರು ದಿನಗಳ ಒಳಗೆ ಬಗೆಹರಿಸುವ ಭರವಸೆ ನೀಡಿದ ಮೇರೆಗೆ ರೈತರು ಪ್ರತಿಭಟನೆ ಹಿಂಪಡೆದಿದ್ದಾರೆ. ರೈತ ಮುಖಂಡ ತೀ.ನಾ.ಶ್ರೀನಿವಾಸ್, ಸಚಿವರು ಮೂರು ದಿನಗಳ ಒಳಗೆ ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡಿದ ಕಾರಣ ತಾತ್ಕಾಲಿಕವಾಗಿ ಧರಣಿ ನಿಲ್ಲಿಸಲಾಗಿದೆ. ಒಂದು ವೇಳೆ ಸಮಸ್ಯೆ ನಿಗದಿತ ಸಮಯದಲ್ಲಿ ಬಗೆಹರಿಯದಿದ್ದರೆ ಮುಂದಿನ ದಿನಗಳಲ್ಲಿ ಜೈಲ್ ಭರೋ ಚಳುವಳಿ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.



# ಚಿಕ್ಕಜೋಗಿಹಳ್ಳಿ-ಅಂಜನಾಪುರ ವಿದ್ಯುತ್ ಮಾರ್ಗ: ರೈತರ ಮನೆದೀಪ ನಂದಿಸಲಿದೆಯೇ?

ಶಿವಮೊಗ್ಗ: ಜಿಲ್ಲೆಯ ಶಿಕಾರಿಪುರ ತಾಲ್ಲೂಕಿನ ಚಿಕ್ಕಜೋಗಿಹಳ್ಳಿಯಿಂದ ಅಂಜನಾಪುರದ ನಡುವೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ (ಕೆಪಿಟಿಸಿಎಲ್) ಕೈಗೆತ್ತಿಕೊಂಡಿರುವ 111 ಕೆ.ವಿ. ವಿದ್ಯುತ್ಮಾರ್ಗ ನಿರ್ಮಾಣ ಕಾಮಗಾರಿ ಸುತ್ತಲಿನ ನೂರಾರು ರೈತ ಕುಟುಂಬಗಳ ನಿದ್ದೆ ಕೆಡಿಸಿದೆ.

ಚಿಕ್ಕಜೋಗಿಹಳ್ಳಿಯಿಂದ ಅಜಿಜನಾಪುರ ನಡುವೆ 4.5 ಕಿ.ಮೀ. ಸಮೀಪದ ಹಾದಿಯಲ್ಲಿ ವಿದ್ಯುತ್ಮಾರ್ಗ ಕೊಂಡೊಯ್ಯಲು ಅವಕಾಶವಿದ್ದರೂ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ (ಕೆಪಿಟಿಸಿಎಲ್) ಸುಮಾರು 20 ಕಿ.ಮೀ. ದೂರದಿಂದ ಸುತ್ತಿ ಬಳಸಿ ಸಾಗುತ್ತಿದೆ ಎಂಬುದು ರೈತರ ಆರೋಪ.

280 ರೈತ ಕುಟುಂಬಗಳು ಬಾಧಿತ:

ಉದ್ದೇಶಿತ ವಿದ್ಯುತ್ಮಾರ್ಗ ದಿಂದ 280 ಕುಟುಂಬಗಳು ಬಾಧಿತವಾಗಲಿವೆ. 500 ಎಕರೆಗೂ ಹೆಚ್ಚು ಭೂಮಿ ಬಳಕೆಯಾಗುತ್ತಿದೆ. ಫಸಲು ಕೊಡುತ್ತಿರುವ ನೂರಾರು ಎಕರೆಯಲ್ಲಿನ ಅಡಿಕೆ, ತೆಂಗು ನೆಲಕ್ಕುರುಳಲಿವೆ. ಏಲಕ್ಕಿ, ಕಾಳು ಮೆಣಸು, ಭತ್ತ, ಶುಂಠಿ ಬೆಳೆಯುವ ಜಮೀನು ಕೈ ತಪ್ಪಲಿದೆ ಎಂಬುದು ರೈತರ ಅಳಲು. 'ವಿದ್ಯುತ್ಮಾರ್ಗವನ್ನು ಹತ್ತಿರದ ಹಾದಿಯಲ್ಲಿ ಕೊಂಡೊಯ್ದರೆ ಅಲ್ಲಿ ಬಗರ್ ಹುಕುಂ, ಗ್ರಾಮಠಾಣಾ, ಕೆರೆ ಏರಿ, ಕೆನಾಲ್, ಬಂಜರು ಭೂಮಿಮಾತ್ರ ಇದ್ದು, ಆರುಕುಟುಂಬಗಳು ಮಾತ್ರ ಬಾಧಿತವಾಗಲಿವೆ. ಆದರೆ, ಕೆಪಿಟಿಸಿಎಲ್ಯೋಜನಾ ವೆಚ್ಚ ಹೆಚ್ಚಳಕ್ಕೆ ದೂರದ ಹಾದಿಯ ಆಯ್ಕೆ ಮಾಡಿಕೊಂಡಿದೆ' ಎಂದು ರೈತ ಮುಖಂಡ ಈಸೂರು ಸಂತೋಷ್ ಆರೋಪಿಸುತ್ತಾರೆ.

ನೆಮ್ಮದಿ ಕಸಿದ ಯೋಜನೆ:

'ಜೋಗ ಜಲಪಾತದಿಂದ ಕೊಂಡೊಯ್ಯುತ್ತಿರುವ ಈ ವಿದ್ಯುತ್ಮಾರ್ಗ ಬಳ್ಳಿಗಾವಿ ಭಾಗದಿಂದ ಚುರ್ಚ ಗುಂಡಿವರೆಗೆ ನಿರ್ಮಾಣಗೊಂಡಿದೆ. ಅಲ್ಲಿಂ ದ ಈಗ ಅಂಜನಾಪುರಕ್ಕೆ ಕೊಂಡೊಯ್ಯಬೇಕಿದೆ. ಇದಕ್ಕೆ 2021ರಲ್ಲಿ ಯೋಜನೆ ರೂಪಿಸಲಾಗಿದ್ದು, ಈಗ ಕಾಮಗಾರಿ ಆರಂಭವಾಗಿದೆ. ಕಳೆದ ನಾಲ್ಕೂವರೆ ವರ್ಷದಿಂದ ನಮ್ಮ ಭಾಗದ ರೈತರ ನೆಮ್ಮದಿ ಕಸಿದಿದೆ. ನಮ್ಮ ಬದುಕನ್ನು ಶಾಶ್ವತ ಕತ್ತಲೆಗೆ ದೂಡುತ್ತಿದೆ' ಎಂದು ಅವರು ಹೇಳುತ್ತಾರೆ.

'ನನಗೆ ಒಂದೂ ಕಾಲು ಎಕರೆ ಜಮೀನು ಇದ್ದು, ಅಡಿಕೆ ಬೆಳೆದಿದ್ದೇನೆ. ವಿದ್ಯುತ್ಮಾರ್ಗ ನಿರ್ಮಾಣದಿಂದ ಬರೀ ಕಾಲು ಎಕರೆ ಉಳಿಯುತ್ತದೆ. ಅದನ್ನು ಇಟ್ಟುಕೊಂಡು ಏನುಮಾಡುವುದು. ಕೆಪಿಟಿಸಿಎಲ್ನವರಿಗೇ ಒಪ್ಪಿಸಿ ಗುಳೇ ಹೋಗುತ್ತೇನೆ' ಎಂದು ಈಸೂರಿನ ರೈತ ಬಸವರಾಜಪ್ಪ ಆಕ್ರೋಶ ವ್ಯಕ್ತಪಡಿಸುತ್ತಾರೆ.

'ನಮ್ಮ ತೋಟದಲ್ಲಿ 380 ಅಡಿಕೆ ಗಿಡ ನಾಶವಾಗಲಿವೆ ಎಂದು ಚಿಕ್ಕಜೋಗಿಹಳ್ಳಿಯ ಸುಭಾಷ್ಚಂದ್ರ ಹೇಳುತ್ತಾರೆ. ಚುರ್ಚ ಗುಂಡಿಯ ರಾಜೇಶ್ ಜಮೀನಿನಲ್ಲಿನ 100 ಗಿಡಗಳು, ಎಂ.ಆರ್. ರವಿಕುಮಾರ್ ಅವರ ಒಂದು ಎಕರೆ ಜಮೀನಿನ ಮೇಲೆ ಲೈನ್ ಹಾದುಹೋಗಲಿದೆ. ಎರಡೂ ಬದಿಯಲ್ಲಿ ತಲಾ ಒಂದೊಂದು ಸಾಲು ಬೆಳೆಮಾತ್ರ ಉಳಿಯುತ್ತದೆ' ಎಂದು ರೈತ ಪ್ರೇಮಾನಂದ್ ಹೇಳುತ್ತಾರೆ.

'ಹತ್ತಿರದಮಾರ್ಗದಲ್ಲಿ ಸಿಗುವ ಕೆರೆ ಅಂಗಳದಲ್ಲಿ ಟವರ್ ಹಾಕಲು ಆಗದು ಎಂದು ಕೆಪಿಟಿಸಿಎಲ್ನವರು ಹೇಳುತ್ತಾರೆ. ಶಿಕಾರಿಪುರದ ಹುಚ್ಚರಾಯನ ಕೆರೆಯಲ್ಲಿ ಟವರ್ ಅಳವಡಿಸಿದ್ದಾರೆ. ಚುರ್ಚ ಗುಂಡಿ ಬಳಿ ಏಕೆ ಸಾಧ್ಯವಿಲ್ಲ?' ಎಂಬುದುಮಾಜಿ ಸೈನಿಕ ಬಿ. ವೈ .ರವಿ ಅವರ ಪ್ರಶ್ನೆಯಾಗಿದೆ.

'ಸ್ಥಳೀಯರ ವಿರೋಧದಿಂದ ಚುರ್ಚ ಗುಂಡಿ, ಚಿಕ್ಕಜೋಗಿಹಳ್ಳಿ ಭಾಗದಲ್ಲಿ ಕೆಪಿಟಿಸಿಎಲ್ ಕಾಮಗಾರಿ ಸದ್ಯ ಸ್ಥಗಿತಗೊಂಡಿದೆ. ಅವರು ಕೆಲಸಮಾಡಲು ತರುವ ಸಾಮಗ್ರಿಗಳನ್ನು ಕೊಂಡೊಯ್ದು ಊರಿನ ದೇವಸ್ಥಾನದ ಮುಂದೆ ಇಡುತ್ತಿದ್ದೇವೆ' ಎಂದು ಸ್ಥಳೀಯರು ಹೇಳುತ್ತಾರೆ.



ಚುರ್ಚ ಗುಂಡಿ ಭಾಗದಿಂದ ಅಂಜನಾಪುರದತ್ತ ಹಾದುಹೋಗುವ ಹತ್ತಿರದಮಾರ್ಗ ತೋರಿಸುತ್ತಿರುವ ರೈತರು

ಸ್ಥಳೀಯ ಶಾಸಕರು ಹಾಗೂ ಸಂಸದರು ಜಿಲ್ಲಾಧಿಕಾರಿ ಜೊತೆ ಸಭೆ ನಡೆಸಿ ನಮಗೆ ನ್ಯಾಯ ಕೊಡಿಸಲಿ. ಅಲ್ಲಿಯವರೆಗೂಹೋರಾಟ ನಡೆಸಲಿದ್ದೇವೆ. ಈಸೂರು ಸಂತೋಷ್ ರೈತ ಮುಖಂಡ

ಕಾಮಗಾರಿ ಆರಂಭಕ್ಕೆ ಸಮೀಕ್ಷೆಮಾಡುವಾಗಲೂ ರೈತರಿಗೆ ತಿಳಿಸಿಲ್ಲ. ನೋಟಿಸ್ ಕೊಟ್ಟಿಲ್ಲ. ಸರ್ವೆ ಮಾಡಿಸಿಕೊಂಡುಯೋಜನೆ ರೂಪಿಸಿದ ಮೇಲೆ ನಮಗೆ ಹೇಳಿದ್ದಾರೆ. ಸುಭಾಷಚಂದ್ರ ಚಿಕ್ಕಜೋಗಿಹಳ್ಳಿ ಜಿಲ್ಲಾಡಳಿತದ ನಿರ್ದೇಶನದಂತೆ ಎ.ಸಿ.ಯವರು ಸರ್ವೆ ಮಾಡಿ ವರದಿ ಕೊಟ್ಟಿದ್ದರು. ಅದನ್ನು ಪರಿಶೀಲಿಸಿ ಯಾವುದು ಸೂಕ್ತವಾಗಿದೆಯೋ ಆಮಾರ್ಗದಲ್ಲಿ ಕಾಮಗಾರಿ ನಡೆಸಲು ಜಿಲ್ಲಾಧಿಕಾರಿ ಅನುಮತಿ ಕೊಟ್ಟಿದ್ದಾರೆ. ಕುಮಾರಸ್ವಾಮಿ ಕೆಪಿಟಿಸಿಎಲ್ ಎಂಜಿನಿಯರ್

ಎ.ಸಿ.ಯವರ ವರದಿಯೇ ಅನುಷ್ಠಾನಗೊಳ್ಳಲಿ..

ಸುತ್ತಿ ಬಳಸಿದ ವಿದ್ಯುತ್ಮಾರ್ಗ ಅಳವಡಿಸುತ್ತಿರುವುದಕ್ಕೆ ನಮ್ಮ ವಿರೋಧ ಇರುವ ಹಿನ್ನೆಲೆಯಲ್ಲಿ ಈ ಹಿಂದೆ ಸಾಗರದ ಉಪವಿಭಾಗಾಧಿಕಾರಿ ಆಗಿದ್ದ ಪಲ್ಲವಿ ಸಾತೇನಹಳ್ಳಿ ಯವರು ಹತ್ತಿರದಮಾರ್ಗದಲ್ಲಿಯೇ ವಿದ್ಯುತ್ ಒಯ್ಯಲು ಸ್ಥಳ ಪರಿಶೀಲನೆ ಹಾಗೂ ಸಮೀಕ್ಷೆನಡೆಸಿ ವರದಿ ಕೊಟ್ಟಿದ್ದರು. ಅದರಂತೆಯೋಜನೆ ಕೈಗೆತ್ತಿಕೊಳ್ಳಲಿ ಎಂಬುದು ಹೋರಾಟನಿರತ ರೈತರ ಆಗ್ರಹ. ವಿದ್ಯುತ್ಮಾರ್ಗದ ಈಗಿನಯೋಜನೆ ಬದಲಾಯಿಸುವಂತೆ ಶಿಕಾರಿಪುರದ ತಾಲ್ಲೂಕು ಕಚೇರಿ ಎದುರು ಈಸೂರು ಅಂಜನಾಪುರ ಚುರ್ಚ ಗುಂಡಿ ಚಿಕ್ಕಜೋಗಿಹಳ್ಳಿ ಭಾಗದ ರೈತರು ಕೈ ಗೆತ್ತಿಕೊಂಡಿರುವ ಅಹೋರಾತ್ರಿ ಹೋರಾಟ ಮಂಗಳವಾರ 2ನೇ ದಿನಕ್ಕೆ ಕಾಲಿಟ್ಟಿದೆ.

ಹತ್ತಿರದಮಾರ್ಗ ಫೀಸಿಬಲ್ ಅಲ್ಲ: ಕೆಪಿಟಿಸಿಎಲ್

'ಕೆಪಿಟಿಸಿಎಲ್ ಚಿಕ್ಕಜೋ ಗಿಹಳ್ಳಿಯಿಂದ ಅಂಜನಾಪುರದವರೆಗೆ 23 ಕಿ.ಮೀ ದೂರದಿಂದ ಲೈನ್ ಎಳೆಯುತ್ತಿಲ್ಲ. ಬದಲಿಗೆ ಅದು 10.5 ಕಿ.ಮೀ ಮಾತ್ರ. ರೈತರು ಹೇಳುತ್ತಿರುವ ಹತ್ತಿರದಮಾರ್ಗ 4.5 ಕಿ.ಮೀ ಅಲ್ಲ. ಬದಲಿಗೆ 8.5 ಕಿ.ಮೀ ದೂರ ಇದೆ. ಅದು ಫೀಸಿಬಲ್ ಅಲ್ಲ ಎಂಬ ಕಾರಣಕ್ಕೆ ಅಲ್ಲಿ ಕಾಮಗಾರಿ ಕೈ ಗೆತ್ತಿಕೊಂಡಿಲ್ಲ' ಎಂದು ಕೆಪಿಟಿಸಿಎಲ್ ಎಂಜಿನಿಯರ್ ಕುಮಾರಸ್ವಾಮಿ ಹೇಳುತ್ತಾರೆ. 'ನಾವು (ಕೆಪಿಟಿಸಿಎಲ್) ಸರ್ವೆ ಗೈಡ್ಲೈನ್ಸ್ ಪ್ರಕಾರ ಜಿಲ್ಲಾಧಿಕಾರಿ ಅನುಮತಿ ಪಡೆದು ಕಾಮಗಾರಿ ಕೈಗೆತ್ತಿಕೊಂಡಿದ್ದೇವೆ' ಎಂದು ಅವರು ಪ್ರತಿಕ್ರಿಯಿಸಿದರು. ರೈತರು ಹೇಳುತ್ತಿರುವ ಹತ್ತಿರದಮಾರ್ಗದಲ್ಲಿ ಅರಣ್ಯ ಭೂಮಿ ಇದೆ. ಅದು ಡೀಮ್ಡ್ ಅರಣ್ಯ.ಯೋಜನೆ ಅನುಷ್ಠಾನ ಹಂತದಲ್ಲಿರುವ ಈಹೊತ್ತಿನಲ್ಲಿ ಅರಣ್ಯ ಇಲಾಖೆಯ ಅನುಮತಿ ಪಡೆಯುವುದು ಕಷ್ಟ. ಅದಕ್ಕೆ ವರ್ಷಗಳೇ ಬೇಕಾಗಬಹುದು ಎನ್ನುತ್ತಾರೆ. ಇಂಡಿಯನ್ ಟೆಲಿಗ್ರಾಫಿಕ್ ಆಕ್ಟ್ ಪ್ರಕಾರ ಕೆಪಿಟಿಸಿಎಲ್ಗೆ ಸಾರ್ವಜನಿಕ ಉದ್ದೇಶಕ್ಕೋಸ್ಕರ ಕಾಮಗಾರಿ ಕೈಗೆತ್ತಿಕೊಳ್ಳುವಾಗ ಸಂಬಂಧಿಸಿದವರಿಗೆ ನೋಟಿಸ್ ಕೊಡಬೇಕು ಎಂದೇನೂ ಇಲ್ಲ. ಅಷ್ಟಕ್ಕೂ ಅಲ್ಲಿ ಭೂಮಿ ಸ್ವಾಧೀನಪಡಿಸಿಕೊಳ್ಳುತ್ತಿಲ್ಲ.ಮಾಲೀಕತ್ವ ರೈತರ ಬಳಿಯೇ ಇರುತ್ತದೆ. ಲೈನ್ ಹಾಕಲು ಪರಿಹಾರ ಕೊಡುತ್ತೇವೆ. ಮಾರ್ಗ ಸೂಚಿ ಪ್ರಕಾರ ಟ್ರಾನ್ಸಿಷನ್ ಲೈನ್ ಕೆಳಗೆ ಅಡಿಕೆ ತೆಂಗುಮಾತ್ರ ಬೆಳೆಯಲು ಆಗೊಲ್ಲ. ಬೇರೆ ಬೆಳೆ ಬೆಳೆಯಬಹುದು ಎಂದು ಕುಮಾರಸ್ವಾಮಿ ಹೇಳುತ್ತಾರೆ.

# ಮುಖ್ಯಮಂತ್ರಿಗಳ ವಿಶೇಷ ಅನುದಾನದಿಂದ ಸಮಗ್ರ ಅಭಿವೃದ್ಧಿ



**ಚಿಕ್ಕಮಗಳೂರು:** ಮುಂದಿನ ದಿನಗಳಲ್ಲಿ ಚಿಕ್ಕಮಗಳೂರು ನಗರವನ್ನು ಮುಖ್ಯಮಂತ್ರಿಗಳ ವಿಶೇಷ ಅನುದಾನ ಪಡೆದು ಸಮಗ್ರ ಅಭಿವೃದ್ಧಿಪಡಿಸುವುದಾಗಿ ಶಾಸಕ ಎಚ್.ಡಿ.ತಮ್ಮಯ್ಯ ಭರವಸೆ ನೀಡಿದರು.

ಬುಧವಾರ ನಗರದ ಕೋಟೆ ಬಡಾವಣೆ ಬೇಲೂರು ರಸ್ತೆಯ ನೂತನ ಬಸ್ ನಿಲ್ದಾಣ, ನಗರದ ಆಯ್ದ ಪ್ರಮುಖ ಭಾಗಗಳಲ್ಲಿ ಅತ್ಯುನ್ನತ ಮಾದರಿಯ 4 ಬಸ್ ನಿಲ್ದಾಣಗಳ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿಗಳ ವಿಶೇಷ ಅನುದಾನ ಬಿಡುಗಡೆಯಾದ ಬಳಿಕ ಕಾಮಗಾರಿ ಆರಂಭಿಸಿ, ಮೇ ತಿಂಗಳೊಳಗೆ ನಗರದ ಎಲ್ಲಾ ರಸ್ತೆಗಳನ್ನು ಸಂಪೂರ್ಣ ಅಭಿವೃದ್ಧಿಪಡಿಸಲು ಗುರಿ ಹೊಂದಲಾಗಿದೆ ಎಂದರು.

ಪಕ್ಷಾತೀತವಾಗಿ ಎಲ್ಲಾ ಪದಾಧಿಕಾರಿಗಳು ಭಾಗವಹಿಸಿ, ಅಭಿವೃದ್ಧಿಗೆ ಕೈಜೋಡಿಸಿರುವ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿ, ಇಲ್ಲಿ ಒಂದು ಬಸ್ ನಿಲ್ದಾಣ ನಿರ್ಮಾಣ ಮಾಡಬೇಕೆಂಬ ಹಲವು ದಿನಗಳ ಬೇಡಿಕೆ ಇಂದು ಈಡೇರಿದೆ. ರಾಜ್ಯಸಭಾ ಸದಸ್ಯ ಜಯರಾಂ ರಮೇಶ್ ನಿಧಿಯಿಂದ 10.92 ಲಕ್ಷ ರೂ. ಹಾಗೂ ತಮ್ಮ ಶಾಸಕರ ನಿಧಿಯಿಂದ 5 ಲಕ್ಷ ರೂ. ನಿಧಿಯಲ್ಲಿ ಈ ಬಸ್ ನಿಲ್ದಾಣ ನಿರ್ಮಿಸಲಾಗುತ್ತಿದೆ ಎಂದರು.

10.90 ಲಕ್ಷ ರೂ. ವೆಚ್ಚದಲ್ಲಿ ಹಿರೇಮಗಳೂರಿನಲ್ಲಿ ಬಸ್ ನಿಲ್ದಾಣ, ನಗರಾಭಿವೃದ್ಧಿ ಪ್ರಾಧಿಕಾರದ ಬಡಾವಣೆ ಕಲ್ಯಾಣ ನಗರದಲ್ಲಿ 10 ಲಕ್ಷ ರೂ. ವೆಚ್ಚದಲ್ಲಿ ಬಸ್ ನಿಲ್ದಾಣ, ಕಣಿವೆ ರುದ್ರೇಶ್ವರ ದೇವಸ್ಥಾನದ ಬಳಿ ಹೌಸಿಂಗ್ ಬೋರ್ಡ್ 6ನೇ ಹಂತದ ಜನರಿಗೆ, ದಾಸರಹಳ್ಳಿ ಜನರಿಗೆ ಅನುಕೂಲವಾಗುವಂತೆ 10.90 ಲಕ್ಷ ರೂ. ವೆಚ್ಚದಲ್ಲಿ ಬಸ್ ನಿಲ್ದಾಣ ನಿರ್ಮಾಣ ಮಾಡಲಾಗುವುದು ಎಂದರು.

ನಗರದಲ್ಲಿ ಹಾನಿಯಾಗಿರುವ ರಸ್ತೆಗಳ ದುರಸ್ತಿಗೆ ಈಗಾಗಲೇ ಕಾಮಗಾರಿ ಆರಂಭಗೊಂಡಿದ್ದು, ಅಂಚೆ ಕಚೇರಿ ರಸ್ತೆ, ಒಕ್ಕಲಿಗರ ಸಮುದಾಯ ಭವನದ ರಸ್ತೆ, ಶಂಕರಪುರ 5ನೇ ಕ್ರಾಸ್ ರಸ್ತೆ ಸೇರಿದಂತೆ ಎಲ್ಲಾ ರಸ್ತೆಗಳನ್ನು ದುರಸ್ತಿಪಡಿಸಲು ಜಯರಾಂ ರಮೇಶ್ ಅವರ ಮನವೊಲಿಸಿ ಅನುದಾನ ತಂದಿರುವ ಜೊತೆಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಚಿಕ್ಕಮಗಳೂರು ನಗರಕ್ಕೆ ಸೀಮಿತವಾಗಿ ವಿಶೇಷ ಅನುದಾನ ಬಿಡುಗಡೆ ಮಾಡುವಂತೆ ಮನವಿ ಮಾಡಿರುವುದಾಗಿ ತಿಳಿಸಿದರು.ನಗರಸಭಾಧ್ಯಕ್ಷೆ ಸುಜಾತ ಶಿವಕುಮಾರ್ ಮಾತನಾಡಿ, ಸಿಟಿಬಸ್ ನಿಲ್ದಾಣಗಳನ್ನು ನಿರ್ಮಿಸಬೇಕೆಂದು ಸಾರ್ವಜನಿಕರಿಂದ ಬೇಡಿಕೆ ಬಂದ ಪರಿಣಾಮ ಇಂದು ಶಾಸಕರು ಭೂಮಿಪೂಜೆ ನೆರವೇರಿಸುವ ಮೂಲಕ ಈಡೇರಿಸಿದ್ದಾರೆ ಎಂದರು.ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ನಯಾಜ್ ಅಹಮದ್ ಮಾತನಾಡಿದರು.

ಈ ಸಂದರ್ಭದಲ್ಲಿ ಸಿಡಿಎ ಮಾಜಿ ಅಧ್ಯಕ್ಷ ಎಂ.ಎಲ್. ಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಪಿ.ಮಂಜೇಗೌಡ, ನಗರ ಕಾಂಗ್ರೆಸ್ ಅಧ್ಯಕ್ಷ ತನೂಜ್ ನಾಯ್ಡು, ಗ್ರಾಮಸ್ಥರಾದ ದಯಾನಂದ ನಾಯ್ಡು, ವೆಂಕಟೇಧ್ ನಾಯ್ಡು, ನಗರಸಭೆ ಸದಸ್ಯರಾದ ಮಧುಕುಮಾರ್ ರಾಜ್ ಅರಸ್, ಶಾದಬ್, ಆನಂದ, ಸೋಮಣ್ಣ, ನಗರಸಭೆ ಪೌರಾಯುಕ್ತ ಬಿ.ಸಿ.ಬಸವರಾಜ್, ಸಿಡಿಎ ಆಯುಕ್ತರಾದ ನಾಗರತ್ನ ಮತ್ತಿತರರಿದ್ದರು.

## ಸಿಎಂನೊಂದಿಗೆ ಚರ್ಚೆ: ಶಾಸಕ

ನಗರದಲ್ಲಿ ಹಾನಿಯಾಗಿರುವ ರಸ್ತೆಗಳ ದುರಸ್ತಿಗೆ ಈಗಾಗಲೇ ಕಾಮಗಾರಿ ಆರಂಭಗೊಂಡಿದ್ದು, ಅಂಚೆ ಕಚೇರಿ ರಸ್ತೆ, ಒಕ್ಕಲಿಗರ ಸಮುದಾಯ ಭವನದ ರಸ್ತೆ, ಶಂಕರಪುರ 5ನೇ ಕ್ರಾಸ್ ರಸ್ತೆ ಸೇರಿದಂತೆ ಎಲ್ಲಾ ರಸ್ತೆಗಳನ್ನು ದುರಸ್ತಿಪಡಿಸಲು ಜಯರಾಂ ರಮೇಶ್ ಅವರ ಮನವೊಲಿಸಿ ಅನುದಾನ ತಂದಿರುವ ಜೊತೆಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಚಿಕ್ಕಮಗಳೂರು ನಗರಕ್ಕೆ ಸೀಮಿತವಾಗಿ ವಿಶೇಷ ಅನುದಾನ ಬಿಡುಗಡೆ ಮಾಡುವಂತೆ ಮನವಿ ಮಾಡಿರುವುದಾಗಿ ಶಾಸಕ ಎಚ್.ಡಿ.ತಮ್ಮಯ್ಯ ತಿಳಿಸಿದರು.

# ಆಡುವಳ್ಳಿ ಗ್ರಾ.ಪಂ. ಅಧ್ಯಕ್ಷರ ಚುನಾವಣೆ

**ಬಾಳೆಹೊನ್ನೂರು:** ಬಾಳೆಹೊನ್ನೂರು ಹೋಬಳಿ ಆಡುವಳ್ಳಿ ಗ್ರಾ.ಪಂ. ಯಲ್ಲಿ ನಡೆದ ಅಧ್ಯಕ್ಷೀಯ ಚುನಾವಣೆಯಲ್ಲಿ ಎಂ.ವಿ.ಶ್ರೀನಿವಾಸ್ ಗೌಡ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಚುನಾವಣಾ ಅಧಿಕಾರಿಯಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರ ಬಿ.ವೀರಪ್ಪ ಚುನಾವಣಾ ಪ್ರಕ್ರಿಯೆ ನಡೆಸಿದರು. ನಿರ್ಗಮಿತ ಅಧ್ಯಕ್ಷ ಪ್ರದೀಪ್ ಉಬ್ಬಿನಮನೆ ಅಧಿಕಾರ ಹಸ್ತಾಂತರ ಮಾಡಿ, ಅಧಿಕಾರ ಅವಧಿಯಲ್ಲಿ ಸಹಕರಿಸಿದ ಎಲ್ಲರಿಗೂ ಧನ್ಯವಾದ ಸಲ್ಲಿಸಿದರು. ಬಿಜೆಪಿ ಮುಖಂಡರು ಕಾರ್ಯಕರ್ತರ ಸಹಕಾರ ನೂತನ ಅಧ್ಯಕ್ಷರಿಗೆ ನೀಡಬೇಕೆಂದು ಮನವಿ ಮಾಡಿದರು. ಅಧಿಕಾರ ಸ್ವೀಕರಿಸಿದ ನೂತನ ಅಧ್ಯಕ್ಷ ಎಂ.ವಿ.ಶ್ರೀನಿವಾಸ್ ಗೌಡ ಮಾತನಾಡಿ, ಮುಂದಿನ ದಿನಗಳಲ್ಲಿ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಉತ್ತಮ ಕೆಲಸ ಮಾಡುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ತಾಲ್ಲೂಕು ಬಿಜೆಪಿ ಕಾರ್ಯದರ್ಶಿ ಪ್ರಭಾಕರ್ ಪ್ರಣಸ್ವಿ, ಹೋಬಳಿ ಅಧ್ಯಕ್ಷ ಪ್ರದೀಪ್ ಕಿಚ್ಚಬ್ಬಿ, ಗ್ರಾಪಂ ಸದಸ್ಯರಾದ ರಾಧ, ಚಂದ್ರಶೇಖರ್, ಕವಿತಾ, ಸುರೇಶ, ಪ್ರತಿಮಾ, ಶಶಿಧರ್, ಗಣೇಶ್, ಪ್ರಿಯದರ್ಶಿನಿ, ರಮೇಶ, ವೇಣು, ಅಜಿತ್ ಗ್ರಾಮಸ್ಥರು ಇದ್ದರು.

# ಬೀರೂರು ಗ್ರಾಮದೇವತೆ ಶ್ರೀ ಅಂತರಘಟ್ಟಮ್ಮನ ವೈಭವದ ರಥೋತ್ಸವ

ಬೀರೂರು: ಪಟ್ಟಣದ ಕರಿಗಲ್ ಬೀದಿಯಲ್ಲಿರುವ ಗ್ರಾಮದೇವತೆ ಶ್ರೀ ಅಂತರಘಟ್ಟಮ್ಮ ದೇವಿಯ ರಥೋತ್ಸವ ಕ್ರೋಧಿನಾಮ ಸಂವತ್ಸರ ಉತ್ತರಾಯಣ ಹೇಮಂತ ಋತುವಿನಲ್ಲಿ ಶ್ರದ್ಧಾಭಕ್ತಿ, ಸಡಗರ, ವೈಭವದಿಂದ ಜರುಗಿತು. ಅಮ್ಮನವರಿಗೆ ನಿತ್ಯವೂ ಶ್ರೀಮದ್ಭಗವತ್ ಪೂಜಾ ಕೈಂಕರ್ಯಗಳು ನಡೆದವು. ಧ್ವಜಾರೋಹಣೆ, ತವರು ಮನೆಯಲ್ಲಿ ಕಂಕಣಧಾರಣೆ ಸೇವೆ ಸಲ್ಲಿಸಿ ಗಣಂಗಳ ಸೇವೆ, ರಾತ್ರಿ ದುಗ್ಗಳ ಸೇವೆ, ಬ್ರಹ್ಮರಥೋರೋಹಣ ನಡೆಯಿತು. ದೇವಿಗೆ ವಿಶೇಷ ಪೂಜೆ ಬೇವಿನಸೇವೆ ಉತ್ಸವ ನಡೆದು ಅಪರಾಹ್ನ ಪುಷ್ಪಲಾಂಕೃತ ರಥದಲಿ ದೇವಿಯನ್ನು ವಿಶೇಷ ಹೂವಿನ ಅಲಂಕಾರಗಳೊಂದಿಗೆ ಪೂಜೆ ಸಲ್ಲಿಸಲಾಯಿತು. ನಂತರ ರಥವನ್ನು ಮಂಗಳವಾದ್ಯ, ವೇದಘೋಷ, ಸೋಮನಕುಣಿತದೊಂದಿಗೆ ಹಳೇಪೇಟೆ ಆಂಜನೇಯ ದೇವಾಲಯದವರೆಗೆ ತರಲಾಯಿತು. ಹಿಂದೆಯೇ ಶೃಂಗಾರದೊಂದಿಗೆ ಸಾಗುತ್ತಿದ್ದ ಜೋಡೆತ್ತುಗಳ ಪಾನಕದ ಬಂಡಿಗಳ ಮೆರವಣಿಗೆ ಪಕ್ಕದ ಆಂಜನೇಯ ಸ್ವಾಮಿ ದೇವಾಲಯದ ಪಕ್ಕದಲ್ಲಿ ಅಮ್ಮನವರ ರಥ ಓರೆಯಾಗಿ ಸ್ಥಗಿತಗೊಂಡ ನಂತರ ಪಾನಕದ ಬಂಡಿಗಳ ಓಟ ಸಾಗಿ ಮಹಾನವಮಿ ಬಯಲಿನಲ್ಲಿ ನೆರೆದಿದ್ದ ಭಕ್ತವೃಂದಕ್ಕೆ ಪಾನಕ ವಿತರಿಸಲಾಯಿತು. ರಸ್ತೆಯ ಇಕ್ಕೆಲಗಳಲ್ಲಿ ಅಪಾರ ಸಂಖ್ಯೆಯ ಜನಸಾಗರ ರಥದ ಮೇಲೆ ಮೆಣಸು, ಬಾಳೆಯ ಹಣ್ಣುಗಳನ್ನು ಎಸೆಯುವ ಮೂಲಕ ತಮ್ಮ ಭಕ್ತಿಹರಕೆ ಸಮರ್ಪಿಸಿದರು.

# ಹಳೆ ದೇವಾಲಯಗಳ ಜೀರ್ಣೋದ್ಧಾರ ಶ್ರೇಷ್ಠ: ವಿಶ್ವ ವೀರಾಂಜನೇಯ ಸ್ವಾಮೀಜಿ



**ಚಿಕ್ಕಮಗಳೂರು:** ಹೊಸ ದೇವಾಲಯಗಳ ನಿರ್ಮಾಣಕ್ಕಿಂತ ಹಳೆಯ ದೇವಾಲಯಗಳ ಜೀರ್ಣೋದ್ಧಾರವೇ ಶ್ರೇಷ್ಠ. ಇದು ಬ್ರಹ್ಮದೇವರು ವ್ಯಾಖ್ಯಾನಿಸಿರುವ ರೀತಿ ಆದ್ದರಿಂದ ಎಲ್ಲಿಯೇ ಇರಲಿ, ಯಾವುದೇ ದೇವಸ್ಥಾನವಿರಲಿ ಅಲ್ಲಿ ಯಾವುದೇ ಪೂಜಾ ವಿಧಾನಗಳಲ್ಲಿ ಲೋಪಗಳಾಗಬಾರದು ಎಂದು ಉತ್ತರಕನ್ನಡ ಜಿಲ್ಲೆ ಹೊನ್ನಾವರದ ಶ್ರೀಕ್ಷೇತ್ರ ಬಂಗಾರುಮಕ್ಕಿ ಶ್ರೀ ಹೇಮಪುರ ಮಹಾಪೀಠಂನ ಶ್ರೀ ವಿಶ್ವ ವೀರಾಂಜನೇಯ ಸ್ವಾಮೀಜಿ ಹೇಳಿದರು.

ನಗರದ ಶ್ರೀ ಗಾಯತ್ರಿ ಕಲ್ಯಾಣ ಮಂಟಪದಲ್ಲಿ ಇತ್ತೀಚೆಗೆ ಶ್ರೀಪೀಠಂನ ಭಕ್ತಾದಿಗಳು ಹಾಗೂ ಚಿಕ್ಕಮಗಳೂರು ಬ್ರಾಹ್ಮಣ ಮಹಾಸಭಾ ವತಿಯಿಂದ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಶ್ರೀಗಳು ಆಶೀರ್ವಚನ ನೀಡಿ, ದೇವಾಲಯಗಳ ಜೀರ್ಣೋದ್ಧಾರಗಳು ಕಾಲ ಕಾಲಕ್ಕೆ ಪುನರುಜ್ಜೀವನ ಆಗಬೇಕು. ಈ ದಿಕ್ಕಿನಲ್ಲಿ ಎಲ್ಲಾ ಜಾತಿ, ಜನಾಂಗ, ಧರ್ಮದವರೂ ಭಾಗಿಯಾಗಬೇಕಾಗಿರುವುದು ಇಂದಿನ ಅವಶ್ಯ. ದೇವಸ್ಥಾನಗಳೇ ಅಭಿವೃದ್ಧಿಯ ಸಂಕೇತ ಎಂದರು.

ಹೊನ್ನಾವರದ ಶ್ರೀ ಬಂಗಾರುಮಕ್ಕಿ ಕ್ಷೇತ್ರದಲ್ಲಿ ಮಾ.31 ರಿಂದ ಏಪ್ರಿಲ್ 13 ರವರೆಗೆ ಹಮ್ಮಿಕೊಂಡಿರುವ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳ ವಿವರ ನೀಡಿದರು. ಶ್ರೀಕ್ಷೇತ್ರದಲ್ಲಿ ಶ್ರೀ ವೀರಾಂಜನೇಯ ಪ್ರತಿಷ್ಠಾ ಬಂಧ, ನೂತನ ಗೋಪುರ – ಸ್ವರ್ಣಮಯ ಕಲಶ, ಶ್ರೀ ಸುಬ್ರಹ್ಮಣ್ಯ, ಶ್ರೀ ಮಹಾಗಣಪತಿ ಸನ್ನಿಧಿ, ಚೌಡೇಶ್ವರಿ ಸನ್ನಿಧಿ ನಿರ್ಮಾಣ ಹಾಗೂ ಗುರೂಜಿಯವರ ಪೀಠಾರೋಹಣದರ ಜತ ಮಹೋತ್ಸವ ಮಹಾಕಾರ್ಯಕ್ಕೆ ಈ ಜಿಲ್ಲೆಯ ಎಲ್ಲರನ್ನೂ ಶ್ರೀ ವಿಶ್ವ ವೀರಾಂಜನೇಯರ ಅನುಗ್ರಹದಿಂದ ಆಹ್ವಾನಿಸುತ್ತಿದ್ದು, ಈ ಅವಧಿಯಲ್ಲಿ ಎಲ್ಲ ಸದ್ಭಕ್ತರೂ ಭಾಗವಹಿಸಬಹುದು ಎಂದು ತಿಳಿಸಿದರು.

ಮಾ.31 ರಿಂದ ಜರುಗುವ ಈ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಏ.7 ರಂದು ಶರಾವತಿ ಕುಂಭಸ್ನಾನ, ಶರಾವತಿ ಆರತಿ, ಏ.6 ರಿಂದ 12 ರವರೆಗೆ ಸಂಸ್ಕೃತಿ ಕುಂಭ–ಮಲೆನಾಡ ಉತ್ಸವ, ಸಭಾ ಕಾರ್ಯಕ್ರಮ ಮತ್ತು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿವೆ. ಕೇತ್ರ ಪ್ರತಿನಿಧಿಗಳ ಸಹಕಾರದಿಂದ ರಾಜ್ಯದ ಕನಿಷ್ಠ 50 ಲಕ್ಷ ಮನೆಗಳಿಗೆ ಶ್ರೀ ವಿಶ್ವ ವೀರಾಂಜನೇಯ ಮಹಾ ಸಂಸ್ಥಾನದ ಆಹ್ವಾನ ಪತ್ರಿಕೆ – ಪ್ರಸಾದವನ್ನು ಮನೆ ಮನೆಗೆ ಕಳುಹಿಸುವ ವ್ಯವಸ್ಥೆ ಮಾಡಲಾಗುವುದು. ಈ ಕಾರ್ಯದಲ್ಲಿ ಎಲ್ಲ ಭಕ್ತಾದಿಗಳು ಸಹಕರಿಸಬೇಕು ಎಂದು ತಿಳಿಸಿದರು.

ಇದೀಗ 17 ಜಿಲ್ಲೆಗಳಲ್ಲಿಯೂ ಈ ಪ್ರಚಾರ ಆಂದೋಳನ ಕೈಗೊಂಡಿದ್ದು, ರಾಜ್ಯಾದ್ಯಂತ ಶ್ರೀಕ್ಷೇತ್ರ ಬಂದಾರು ಮಕ್ಕಿಯಲ್ಲಿ ನಡೆಯಲಿರುವ ಕಾರ್ಯಕ್ರಮಗಳ ವಿವರ ತಿಳಿಸಲಾಗುತ್ತಿದೆ. ನಮ್ಮೆಲ್ಲರ ಕಷ್ಟ–ನಷ್ಟ ಪರಿಹರಿಸಿ ಲೋಕಕ್ಕೆ ಮಂಗಳ ಉಂಟು ಮಾಡುವ ಶ್ರೀ ರಾಮಾಂಜನೇಯ ದೇವರ ಕೈಂಕರ್ಯದಲ್ಲಿ ಸಮಸ್ತ ಭಕ್ತರೂ ಸಹಕರಿಸುವಂತೆ ವಿನಂತಿಸಿದರು.

ಶ್ರೀವತ್ಸ ವೇದಘೋಷ, ಬ್ರಾಹ್ಮಣ ಮಹಾಸಭಾ ನಿರ್ದೇಶಕಿ ಸುಮಾ ಪ್ರಸಾದ್ ಸ್ವಾಗತ, ಸತ್ಯವತಿ ಕಾರ್ಯಕ್ರಮ ನಿರೂಪಣೆ, ಬಿ.ಎಂ.ಎಸ್.ನಿರ್ದೇಶಕಿ ಎಸ್.ಶಾಂತಕುಮಾರಿ ವಂದನಾರ್ಪಣೆ ನೆರವೇರಿಸಿದರು.

ಚಿಕ್ಕಮಗಳೂರು ಬ್ರಾಹ್ಮಣ ಮಹಾಸಭಾಧ್ಯಕ್ಷ ಪಿ.ಮಂಜುನಾಥಜೋಷಿ, ಪದಾಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ನಿಷ್ಠಾವಂತ ಕಾರ್ಯಕರ್ತರಿಗೆ ಪಕ್ಷದಲ್ಲಿ ಸ್ಥಾನಮಾನ : ದೇವರಾಜ್‌ಶೆಟ್ಟಿ



**ಚಿಕ್ಕಮಗಳೂರು:** ಪಕ್ಷದ ಸಂಘಟನೆಯಲ್ಲಿ ತೊಡಗಿರುವ ನಿಷ್ಠಾವಂತ ಕಾರ್ಯಕರ್ತರಿಗೆ ಸ್ಥಾನಮಾನ ಹಾಗೂ ಒಳಸಂಚು ನಡೆಸುವ ಪಕ್ಷದ್ರೋಹಿಗಳ ವಿರುದ್ಧ ಶಿಸ್ತು ಕ್ರಮಕೈಗೊಳ್ಳಲು ಮುಂದಾಗಿದ್ದೇವೆ ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ಎಂ.ಆರ್.ದೇವರಾಜ್‌ಶೆಟ್ಟಿ ಹೇಳಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಪರಿಶಿಷ್ಟ ಜಾತಿ ಮೋರ್ಚಾದಿಂದ ಎರಡನೇ ಬಾರಿಗೆ ಜಿಲ್ಲಾಧ್ಯಕ್ಷ ದೇವರಾಜ್‌ಶೆಟ್ಟಿ, ಜಿಲ್ಲಾ ಪ್ರತಿನಿಧಿ ಕುರುವಂಗಿ ವೆಂಕಟೇಶ್ ಹಾಗೂ ರಾಜ್ಯ ಪರಿಷತ್‌ಗೆ ಸದಸ್ಯ ಕನಕರಾಜ್‌ಅರಸ್‌ಗೆ ಸನ್ಮಾನ ಕಾರ್ಯಕ್ರಮದಲ್ಲಿ ಇಂದು ಅಭಿನಂದನೆ ಸ್ವೀಕರಿಸಿ ಅವರು ಮಾತನಾಡಿದರು.

ಪಕ್ಷದಲ್ಲಿ ಯಾವ ಹುದ್ದೆಯು ಶಾಶ್ವತವಲ್ಲ. ಮುಂದೊಂದು ದಿನ ಕಾರ್ಯಕರ್ತರು ಉನ್ನತ ಹುದ್ದೆ ಅಲಂಕರಿಸಬಹುದು. ಅದಕ್ಕೆ ಪ್ರಾಮಾಣಿಕತೆ, ಸಂಘಟನಾತ್ಮಕ ಶಕ್ತಿ ಅತಿಮುಖ್ಯ. ತಾವು ಕೂಡಾ ಪಕ್ಷದಲ್ಲಿ ಎರಡು ದಶಕಕ್ಕಿಂತ ಹೆಚ್ಚುಕಾಲ ಕಾರ್ಯಕರ್ತನಾಗಿ, ಯುವಮೋರ್ಚಾ ಸೇರಿದಂತೆ ಅನೇಕ ಹುದ್ದೆ ನಿರ್ವಹಿಸಿದ ಬಳಿಕ ಇದೀಗ ಜಿಲ್ಲಾಧ್ಯಕ್ಷ ಪಟ್ಟ ದೊರೆತಿದೆ ಎಂದು ಹೇಳಿದರು.

ಬಿಜೆಪಿಯಲ್ಲಿ ಮಾತ್ರ ಪ್ರತಿಯೊಂದು ಸಮುದಾಯಕ್ಕೂ ಒತ್ತು ನೀಡುವ ಕೆಲಸ ಮಾಡಿದೆ. ಪಕ್ಷವು ಯಾವುದೇ ಒಂದು ಸಮಾಜದಿಂದ ಮುಂಚೂಣಿಗೆ ಬಂದಿಲ್ಲ, ಸರ್ವಜನಾಂಗದ ಒಗ್ಗಟ್ಟಿನಿಂದ ಸಂಘಟನೆಯಲ್ಲಿ ಜಿಲ್ಲೆ ಐದನೇ ಸ್ಥಾನ ಪಡೆದುಕೊಂಡಿದೆ. ಅಲ್ಲದೇ ವಿಶ್ವದಲ್ಲೇ ಅತ್ಯಂತ ದೊಡ್ಡ ರಾಜಕೀಯ ಪಕ್ಷವಾಗಿ ಹೊರಹೊಮ್ಮಲು ಸಾಧ್ಯವಾಗಿದೆ ಎಂದು ತಿಳಿಸಿದರು.

ಸಮಾಜದಲ್ಲಿ ಮೇಲು–ಕೀಳು ಎಂಬ ಜಾತೀಯತೆಯನ್ನು ಪ್ರತಿಯೊಬ್ಬರು ತಾನಾಗಿಯೇ ತೊಲಗಿಸಬೇಕು. ಪ್ರಸ್ತುತ ದೇಶದಲ್ಲಿ ಬಹುಸಂಖ್ಯಾತರು ಪರಿಶಿಷ್ಟರಿದ್ದಾರೆ. ಕೆಲವು ವಿರೋಧಿಗಳು ಪರಿಶಿಷ್ಟರ ದಿಕ್ಕು ತಪ್ಪಿಸಿ ಬಿಜೆಪಿ ವಿರೋಧಿ ನಡೆ ಅನುಸರಿಸುತ್ತಿದೆ. ಹೀಗಾಗಿ ಕಾರ್ಯಕರ್ತರು ಪ್ರತಿ ಕಾಲೋನಿಗಳಿಗೆ ಭೇಟಿಕೊಟ್ಟು ಬಿಜೆಪಿ ಸಿದ್ಧಾಂತದ ಬಗ್ಗೆ ಮನವರಿಕೆ ಮಾಡಿಕೊಡಬೇಕು ಎಂದು ಸಲಹೆ ಮಾಡಿದರು.

ಮುಂಬರುವ ಜಿ.ಪಂ, ತಾ.ಪಂ. ಚುನಾವಣೆಗಳನ್ನು ಅತ್ಯಂತ ಚುರುಕಿನಿಂದ ಪಕ್ಷ ಸಂಘಟಿಸಿ ಅಭ್ಯರ್ಥಿಗಳ ಗೆಲುವಿಗೆ ಸಹಕರಿಸಬೇಕು. ತಮ್ಮ ಅವಧಿಯಲ್ಲೂ ಅನೇಕ ಸಹಕಾರ ಸಂಘ, ಡಿಸಿಸಿ ಬ್ಯಾಂಕ್, ಎಂಪಿ ಚುನಾವಣೆಯಲ್ಲಿ ಮೇಲುಗೈ ಸಾಧಿಸಿ ಪಕ್ಷವನ್ನು ಸಂಘಟಿಸಿದ್ದು, ಮುಂದಿನ ಪ್ರತಿ ಚುನಾವಣೆಯಲ್ಲಿ ಸಂಪೂರ್ಣ ತೊಡಗಿಸಿಕೊಂಡು ಮುನ್ನೆಡೆಯುತ್ತೇನೆ ಎಂದರು.

ಬಿಜೆಪಿ ಜಿಲ್ಲಾ ಪ್ರತಿನಿಧಿ ಕುರುವಂಗಿ ವೆಂಕಟೇಶ್ ಮಾತನಾಡಿ, ಪಕ್ಷಕೊಟ್ಟಂತ ಜವಾಬ್ದಾರಿಯಲ್ಲಿ ಸಣ್ಣ ಅಥವಾ ದೊಡ್ಡದು ಎನ್ನದಿರಿ. ಸೂಚಿಸಿದ ಅಭ್ಯರ್ಥಿಗಳ ಪರವಾಗಿ ಬೂತ್‌ಮಟ್ಟದಿಂದ ಸಂಘಟನಾತ್ಮಕವಾಗಿ ದುಡಿಯುವ ಕಾರ್ಯಕರ್ತರಿಗೆ ಮುಂದೆ ಉನ್ನತ ಸ್ಥಾನ ಲಭಿಸಲು ಬಿಜೆಪಿಯಲ್ಲಿ ಮಾತ್ರ ಅವಕಾಶವಿದೆ ಎಂಬುದು ಮರೆಯಬಾರದು ಎಂದರು.

ಪರಿಶಿಷ್ಟ ಏಳಿಗೆಗಾಗಿ ಕೇಂದ್ರ ಸರ್ಕಾರ ಹಲವಾರು ಸೌಲಭ್ಯಗಳನ್ನು ಕಲ್ಪಿಸಿ ಪ್ರೇರೇಪಿಸುತ್ತಿದೆ. ಅಲ್ಲದೇ ರಾಜಕೀಯ, ಶೈಕ್ಷಣಿಕ ಹಾಗೂ ಅಂಬೇಡ್ಕರ್ ಆಶಯದಂತೆ ಸವಲತ್ತು ನೀಡಿ ಬೆನ್ನೆಲುಬಾಗಿ ನಿಂತಿವೆ, ಆದರೆ ವಿರೋಧ ಪಕ್ಷಗಳು ಮತ್ತು ಬ್ಯಾಂಕ್‌ಗಾಗಿ ಪರಿಶಿಷ್ಟರನ್ನು ಬಳಸಿಕೊಂಡು ಬೇಕಾಬಿಟ್ಟಿಯಾಗಿ ನಡೆಸಿಕೊಳ್ಳುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಪರಿಷತ್ ಸದಸ್ಯ ಕನಕರಾಜ್‌ಅರಸ್, ಜಿಲ್ಲಾ ಎಸ್ಸಿ ಮೋರ್ಚಾ ಉಪಾಧ್ಯಕ್ಷ ಕೋಲ್ಲಾಬೋವಿ, ಕೃಷ್ಣಮೂರ್ತಿ, ನಗರ ಅಧ್ಯಕ್ಷ ಜಗದೀಶ್, ಮಾಧ್ಯಮ ಸಹ ಪ್ರಮುಖ್ ಹೆಚ್.ಕೆ.ಕೇಶವಮೂರ್ತಿ, ಗ್ರಾಮಾಂತರ ಪ್ರಮುಖ್ ಹಂಪಯ್ಯ, ಮುಖಂಡರುಗಳಾದ ರಾಘವೇಲು, ರಾಜ್‌ಕುಮಾರ್, ನಂಜುಂಡಪ್ಪ, ರಘು, ಧನಂಜಯ್, ಮಂಜುನಾಥ್, ರವಿಕುಮಾರ್, ಗುರು, ಧರ್ಮರಾಜ್ ಇದ್ದರು.

# ಜಿಎಸ್‌ಟಿ ಸಂಗ್ರಹ: ವಿತರಕರ ಪಾತ್ರ ಮಹತ್ವದ್ದು



**ಶಿವಮೊಗ್ಗ:** ದೇಶದಲ್ಲಿ ಕರ್ನಾಟಕವನ್ನು ಜಿಎಸ್‌ಟಿ ತೆರಿಗೆ ಸಂಗ್ರಹದಲ್ಲಿ ಎರಡನೇ ಸ್ಥಾನದಲ್ಲಿ ನಿಲ್ಲಿಸುವಲ್ಲಿ ವಿತರಕರ ಪಾತ್ರ ಮಹತ್ವದ ಆಗಿದೆ ಎಂದು ವಿಧಾನ ಪರಿಷತ್ ಸದಸ್ಯ ಡಿ.ಎಸ್. ಅರುಣ್ ಹೇಳಿದರು.

ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಸಭಾಂಗಣದಲ್ಲಿ ಆಯೋಜಿಸಿದ್ದ ವಿತರಕರ ದಿನಾಚರಣೆ ಉದ್ಘಾಟನೆ ಮಾತನಾಡಿ, ಕರ್ನಾಟಕದ ಆರ್ಥಿಕ ಪ್ರಗತಿ ಯಲ್ಲಿ ವಿತರಕರ ಕೊಡುಗೆ ಮಹತ್ವದ್ದು ಎಂದು ತಿಳಿಸಿದರು.

ಕರ್ನಾಟಕದಲ್ಲಿ ಚಿಲ್ಲರೆ ಮಾರುಕಟ್ಟೆಯನ್ನು ಬೆಳೆಸುವ ಬಗ್ಗೆ ವಿತರಕರಿಗೆ ಮಾಹಿತಿ ಗಳನ್ನು ನೀಡುತ್ತ ದೇಶದ ಆರ್ಥಿಕತೆಗೆ ವಿತರಕರ ಉದ್ಯಮ ಅತಿ ಹೆಚ್ಚಿನ ಕೊಡುಗೆ ನೀಡುತ್ತಿದೆ ಎಂದರು.

ಕರ್ನಾಟಕ ಗ್ರಾಹಕ ವಸ್ತುಗಳ ವಿತರಕರ ಸಂಘಗಳ ಒಕ್ಕೂಟ ಅಧ್ಯಕ್ಷ ಗಿರೀಶ್ ಶಂಕರ್ ಸುಂಕದ ಮಾತನಾಡಿ, ಕಂಪನಿಗಳ ಹಾಗೂ ಸರ್ಕಾರದ ಕೆಲ ನೀತಿಗ ಳಿಂದ ವಿತರಕರ ಅಸ್ತಿತ್ವಕ್ಕೆ ಧಕ್ಕೆ ಬಂದಿರುತ್ತದೆ. ಇಂತಹ ಸಂದರ್ಭದಲ್ಲಿ ನಾವುಗ ಳೆಲ್ಲರೂ ಒಗ್ಗಟ್ಟಾಗಿ ನಮ್ಮ ಮುಂದಿರುವ ಸವಾಲುಗಳನ್ನ ಎದುರಿಸಬೇಕು ಎಂದರು.ಕರ್ನಾಟಕ ಫೆಡರೇಶನ್ ಆಫ್ ಡಿಸ್ಟ್ರಿಬ್ಯೂಟರ್ಸ್ ವೆಲ್‌ಫೇರ್ ಅಸೋಸಿಯೇ ಷನ್ ಅಧ್ಯಕ್ಷ ಜಯಂತ್ ಗಾಣಿಗ್ ಮಾತನಾಡಿ, ರಾಜ್ಯ ಹಾಗೂ ರಾಷ್ಟಮಟ್ಟದಲ್ಲಿ ವಿತರಕರ ಮಂಡಳಿ ರಚಿಸುವಂತೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಿದ್ದೇವೆ. ಮುಂದಿನ ದಿನಗಳಲ್ಲಿ ಸರ್ಕಾರದಿಂದ ಹೆಚ್ಚಿನ ಮಟ್ಟದ ಭದ್ರತೆಯನ್ನು ವಿತರಿಕ ರಿಗೆ ನೀಡುವ ಭರವಸೆ ನೀಡಿದರು.

ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಅಧ್ಯಕ್ಷ ಬಿ. ಗೋಪಿನಾಥ್ ಮಾತ ನಾಡಿ, ಕಂಪನಿ ಹಾಗೂ ವರ್ತಕರಿಗೆ ಕೊಂಡಿಯಾಗಿ ಕಾರ್ಯ ನಿರ್ವಹಿಸು ತ್ತಿರುವ ವಿತರಕರಿಗೆ ಆಧುನಿಕ ಮಾರುಕಟ್ಟೆಯ ವ್ಯವಸ್ಥೆಗೆ ನಾವು ನಮ್ಮ ಕಾರ್ಯಕ್ಷಮತೆ ಹೆಚ್ಚಿಸಿಕೊಳ್ಳಬೇಕಾಗಿದೆ. ತಾಂತ್ರಿಕತೆಯನ್ನು ನಾವು ಉಪ ಯೋಗಿಸಿ ನಮ್ಮ ಆರ್ಡರ್ ಬುಕಿಂಗ್ ಹಾಗೂ ಸಪ್ಲೈ ಕೆಲಸಗಳಿಗೆ ಆಧುನಿಕತೆ ಸ್ಪರ್ಶ ನೀಡಿದಲ್ಲಿ ನಮ್ಮ ಹಲವಾರು ಸಮಸ್ಯೆಗಳನ್ನ ನಾವು ನೀಗಿಸಿಕೊಳ್ಳಬಹುದು. ಈ ನಿಟ್ಟಿನಲ್ಲಿ ನಮ್ಮ ವಿತರಕರು ಗಮನಹರಿಸಬೇಕು ಎಂದರು.

ಶಿವಮೊಗ್ಗ ಜಿಲ್ಲಾ ವಿತರಕ ಸಂಘದ ಅಧ್ಯಕ್ಷ ದೇವರಾಜ್ ಎಂಸಿ ಮಾತನಾಡಿ ದರು. ವಿತರಕರ ದಿನಾಚರಣೆ ಅಂಗವಾಗಿ 29 ಜನ ಸಂಸ್ಥಾಪಕ ಸದಸ್ಯರುಗಳಿಗೆ ಸನ್ಮಾನಿಸಲಾಯಿತು. 27 ಕಂಪೆನಿಗಳಿಂದ ಫ್ರೀ ಸ್ಯಾಂಪಲ್ ಪಡೆದು 125 ಕಿಟ್ ಗಳನ್ನು ತಯಾರಿಸಿ ಬಂದಂತಹ ಎಲ್ಲ ಸದಸ್ಯರುಗಳಿಗೆ ವಿತರಿಸಲಾಯಿತು. ಭದ್ರಾವತಿ, ಶಿಕಾರಿಪುರ, ಸಾಗರ, ಗದಗ ಹಾಗೂ ಕೊಪ್ಪದಿಂದ ಆಗಮಿಸಿದ ಪದಾಧಿಕಾರಿಗಳಿಗೂ ಗೌರವಿಸಿ ಸನ್ಮಾನಿಸಲಾಯಿತು.

# ಕ್ರೀಡೆಯಿಂದ ಮನಸ್ಸಿಗೆ ಉಲ್ಲಾಸ : ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್



**ಚಿತ್ರದುರ್ಗ:** ಕ್ರೀಡೆಯಲ್ಲಿ ತೊಡಗಿಸಿಕೊಳ್ಳುವುದರಿಂದ ಮನಸ್ಸಿಗೆ ಉಲ್ಲಾಸ ದೊರೆಯವುದು. ಜತೆಗೆ ಕೆಲಸ ಮಾಡಲು ಚೈತನ್ಯವೂ ಬರಲಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಹೇಳಿದರು.

ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಶನಿವಾರ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಆಫಿಷಿಯಲ್ಸ್ ಪೊಲೀಸ್ ಕ್ರಿಕೆಟ್ ಕಪ್ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲಾ ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ವಿವಿಧ ಇಲಾಖೆಯ ಸರ್ಕಾರಿ ನೌಕರರು ಸೇರಿ ಕ್ರಿ–ಕೆಟ್ ಪಂದ್ಯಾವಳಿ ಆಯೋಜಿಸಿರುವುದು ಉತ್ತಮ ಬೆಳವಣಿಗೆ. ಕ್ರೀಡೆ ಜೀವನದ ಅವಿಭಾಜ್ಯ ಅಂಗ. ಕ್ರೀಡೆಯು ಮನಸ್ಸನ್ನು ಮುದಗೊಳಿಸುವ ಜತೆಗೆ ನಮ್ಮ ಕೆಲಸಗಳ ಕಡೆ ಹೆಚ್ಚು ಮಗ್ನರಾಗಲು, ಆಸಕ್ತಿವಹಿಸಲು ಸಾಧ್ಯವಾಗಲಿದೆ. ಕ್ರೀಡೆ ಇರುವ ಕಡೆ ಯಶಸ್ಸು ಇರಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕ್ರೀಡೆಯಲ್ಲಿ ಸೋಲು–ಗೆಲವು ಸಹಜ. ಇದಕ್ಕಿಂತ ಮುಖ್ಯವಾಗಿ ಕ್ರೀಡೆಯಲ್ಲಿ ಪಾಲ್ಗೊಳ್ಳುವುದು ಬಹಳ ಮುಖ್ಯ ಎಂದು ತಿಳಿಸಿದ ಅವರು ಎಲ್ಲ ಕ್ರೀಡಾಪಟುಗಳಿಗೆ ಶುಭ ಹಾರೈಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಮಾತನಾಡಿ, ಯಾವುದೇ ಇಲಾಖೆ ಇರಲಿ ಪ್ರತಿಯೊಬ್ಬರಿಗೂ ದೈಹಿಕ ಸಾಮಾರ್ಥ್ಯ ಬಹಳ ಮುಖ್ಯ. ಎಲ್ಲರಿಗೂ ದೈಹಿಕ ಸಾಮಾರ್ಥ್ಯದ ಬಗ್ಗೆ ಅರಿವು ಹಾಗೂ ವೇದಿಕೆ ಕಲ್ಪಿಸುವ ನಿಟ್ಟಿನಲ್ಲಿ ಕ್ರೀಡಾಕೂಟ ಆಯೋಜಿಲಾಗಿದ್ದು, ಕ್ರೀಡಾಕೂಟಗಳಿಂದ ಉತ್ತಮ ಗೆಳೆತನ, ಬಾಂಧವ್ಯ ವೃದ್ಧಿಯಾಗಲಿದೆ ಎಂದು ತಿಳಿಸಿದರು.

ಆಫಿಷಿಯಲ್ಸ್ ಪೊಲೀಸ್ ಕ್ರಿಕೆಟ್ ಕಪ್ ಪಂದ್ಯಾವಳಿಯಲ್ಲಿ ಪೊಲೀಸ್ ಇಲಾಖೆ, ನ್ಯಾಯಾಂಗ ಇಲಾಖೆ, ಬೆಸ್ಕಾಂ, ಜಿಲ್ಲಾ ಪಂಚಾಯಿತಿ, ಆರೋಗ್ಯ ಇಲಾಖೆ, ಭದ್ರಾ ಮೇಲ್ದಂಡೆ ಯೋಜನೆ, ನಗರಸಭೆ, ಅಂಚೆ ಇಲಾಖೆ, ಕಂದಾಯ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಪತ್ರಕರ್ತರ ತಂಡ ಸೇರಿದಂತೆ 16 ವಿವಿಧ ಇಲಾಖೆಯ ತಂಡಗಳು ಭಾಗವಹಿಸಿದ್ದವು.

ಪೊಲೀಸ್ ಇಲಾಖೆಗೆ ಹೊಸ ವಾಹನಗಳ ಹಸ್ತಾಂತರ: ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಶನಿವಾರ 4 ಬೊಲೆರೋ ನಿಯೋ ಹೊಸ ಮಾದರಿಯ ವಾಹನಗಳನ್ನು ಪೊಲೀಸ್ ಇಲಾಖೆಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಹಸ್ತಾಂತರಿಸಿದರು.

ಮೊದಲ ಹಂತದಲ್ಲಿ 4 ಬೊಲೆರೋ ವಾಹನಗಳು ಹಾಗೂ ಎರಡನೇ ಹಂತದಲ್ಲಿ 4 ಬೊಲೆರೋ ನಿಯೋ ವಾಹನಗಳು ಸೇರಿದಂತೆ ಒಟ್ಟು 8 ಬೊಲೆರೋ ವಾಹನಗಳನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಅವರು ಶಾಸಕರ ಅನುದಾನದಲ್ಲಿ ಪೊಲೀಸ್ ಇಲಾಖೆಗೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಜಿಲ್ಲಾ ಸಶಸ್ತ್ರ ಮೀಸಲು ಪಡೆ ಪೊಲೀಸ್ ಉಪಾಧೀಕ್ಷಕ ಗಣೇಶ್, ಅಪರಾಧ ಪೊಲೀಸ್ ಠಾಣೆ ಪೊಲೀಸ್ ಉಪಾಧೀಕ್ಷಕ ಓಂಕಾರ ನಾಯ್ಕ್, ಚಿತ್ರದುರ್ಗ ಉಪವಿಭಾಗ ಪೊಲೀಸ್ ಉಪಾಧೀಕ್ಷಕ ದಿನಕರ್ ಸೇರಿದಂತೆ ಮತ್ತಿತರರು ಇದ್ದರು.

# ಸೆಲ್ಯೂಟ್ ದಿ ಸೈಲೆಂಟ್ ವರ್ಕರ್ ಕಾರ್ಯಕ್ರಮದಲ್ಲಿ ಪತ್ರಕರ್ತ ರುದ್ರಯ್ಯ ಹಾಗೂ ಲೈನ್‌ಮ್ಯಾನ್ ಲಿಂಗರಾಜುರಿಗೆ ಸನ್ಮಾನ




**ಚಿಕ್ಕಮಗಳೂರು:** ಜೆ.ಸಿ.ಐ ಸಪ್ತಾಹದ ಹಿನ್ನೆಲೆಯಲ್ಲಿ ಸೆಲ್ಯೂಟ್ ದಿ ಸೈಲೆಂಟ್ ವರ್ಕರ್ ಕಾರ್ಯಕ್ರಮದಡಿಯಲ್ಲಿ ಎಲೆಮರೆಯ ಕಾಯಿಯಂತೆ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತ ರುದ್ರಯ್ಯ ಹಾಗೂ ಲೈನ್‌ಮ್ಯಾನ್ ಲಿಂಗರಾಜುರಿಗೆ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ನಗರದ ಖಾಸಗಿ ವಾಹಿನಿಯ ಕಚೇರಿಯಲ್ಲಿ ಕಾರ್ಯಕ್ರಮ ಏರ್ಪಡಿಸಿದ ಜೆ.ಸಿ.ಐ ಮಲ್ನಾಡ್ ಸಂಸ್ಥೆ ಎಲೆಮರೆಯ ಕಾಯಿಯಂತೆ ಕಾರ್ಯನಿರ್ವಹಿಸುತ್ತಿರುವ ವ್ಯಕ್ತಿಗಳನ್ನು ಗುರುತಿಸಿ ಅವರಲ್ಲಿ ಆತ್ಮಸ್ಥೈರ್ಯ ತುಂಬುವ ನಿಟ್ಟಿನಲ್ಲಿ ಪತ್ರಕರ್ತರಾದ ರುದ್ರಯ್ಯ ಹಾಗೂ ಲೈನ್‌ಮ್ಯಾನ್ ಲಿಂಗರಾಜು ಅವರನ್ನು ಗೌರವಿಸಿ ಅಭಿನಂದಿಸಿ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಪತ್ರಕರ್ತರಾದ ರುದ್ರಯ್ಯ ಅವರು, ನನ್ನ ಸೇವೆಯನ್ನು ಗುರುತಿಸಿ ಗೌರವಿಸಿ ಸನ್ಮಾನಿಸುತ್ತಿರುವ ಜೆಸಿಐ ಸಂಸ್ಥೆಗೆ ಆಭಾರಿಯಾಗಿದ್ದೇನೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಲೈನ್‌ಮ್ಯಾನ್ ಲಿಂಗರಾಜು ಅವರು ತಮ್ಮ ಸೇವೆಯನ್ನು ಗುರುತಿಸಿ, ಗೌರವಿಸಿ ಸನ್ಮಾನಿಸುತ್ತಿರುವುದಕ್ಕೆ ಸಂತೋಷ ವ್ಯಕ್ತಪಡಿಸಿದರು.

ಜೆ.ಸಿ.ಐ ಮಲ್ನಾಡ್ ಸಂಸ್ಥೆಯ ಅಧ್ಯಕ್ಷ ಪ್ರದೀಪ್ ಅವರು ಮಾತನಾಡಿ, ಜೆಸಿಐ ಸಂಸ್ಥೆ ವ್ಯಕ್ತಿ ವಿಕಸನದ ಸಂಸ್ಥೆಯಾಗಿದ್ದು, ಹಲವು ವರ್ಷಗಳಿಂದ ಸಮಾಜಮುಖಿಯಾಗಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಸಮಾಜದಲ್ಲಿ ಎಲೆಮರೆ ಕಾಯಿಯಂತೆ ಸೇವೆ ಸಲ್ಲಿಸುತ್ತಿರುವ ವ್ಯಕ್ತಿಗಳಿಗೆ ಗೌರವಿಸುತ್ತಾ ಬಂದಿದ್ದು, ಇಂದು ಪತ್ರಕರ್ತರಲ್ಲಿ ಹಾಗೂ ಕೆಪಿಟಿಸಿಎಲ್ ಅಲ್ಲಿ ಎಲೆ ಮರೆಯ ಕಾಯಿಯಂತೆ ಕಾರ್ಯನಿರ್ವಹಿಸುತ್ತಿರುವ ರುದ್ರಯ್ಯ ಹಾಗೂ ಲಿಂಗರಾಜು ಅವರನ್ನು ಸನ್ಮಾನಿಸುತ್ತಿರುವುದು ಸಂತಸದ ಸುದ್ದಿ ಎಂದು ಹೇಳಿದರು. ಜೋನ್ ಪ್ರೆಸಿಡೆಂಟ್ ವಿಜಯ್‌ಕುಮಾರ್ ಅವರು ಮಾತನಾಡಿ, ವಿಶ್ವದಾದ್ಯಂತ ಸಮಾಜಮುಖಿ ಚಿಂತನೆಗಳೊಂದಿಗೆ ಕಾರ್ಯನಿರ್ವಹಿಸುತ್ತಿರುವ ಜೆಸಿಐ ಸಂಸ್ಥೆ ಚಿಕ್ಕಮಗಳೂರಿನಲ್ಲೂ ಕೂಡ ಉತ್ತಮ ಸಂಘಟನೆಯೊಂದಿಗೆ ಹಲವು ತರಬೇತಿ ಹಾಗೂ ಸೇವಾ ಕಾರ್ಯಗಳನ್ನು ಕೈಗೊಂಡಿದ್ದು, ಇಂದು ಪತ್ರಕರ್ತರು ಹಾಗೂ ಕೆಪಿಟಿಸಿಎಲ್ ಸಿಬ್ಬಂದಿಯವರನ್ನು ಗೌರವಿಸುತ್ತಿರುವುದು ಸಂತೋಷದ ಸಂಗತಿ ಎಂದು ಹೇಳಿದರು.

ಜೆಸಿಐ ಮಲ್ನಾಡ್ ಸಂಸ್ಥಾಪಕ ಅನಿಲ್ ಆನಂದ್, ನಿಕಟ ಪೂರ್ವ ಅಧ್ಯಕ್ಷ ಪುಷ್ಪ, ಲೇಡಿ ಜೆಸಿ ಕೋ–ಆರ್ಡಿನೇಟರ್ ಪೂರ್ಣಿಮಾ ಅನಿಲ್, ಪೂರ್ವ ಅಧ್ಯಕ್ಷ ಗಿರಿಧ್ರಾಜ್ ಅರಸ್, ರಘು, ಸೆಕ್ರೆಟರಿ ತಿಲಕ್, ಸದಸ್ಯ ಗುರುಮೂರ್ತಿ ನಾಡಿಗ್, ರಾಮಚಂದ್ರ, ಕೃಷ್ಣಮೂರ್ತಿ, ರವಿ, ರೋಹಿತ್, ಉಪಸ್ಥಿತರಿದ್ದರು.

# ಹೆಣ್ಣುತನಕ್ಕೆ ಪಾವಿತ್ರ್ಯತೆ ಇದೆ–ವಿನಯ್ ಗುರೂಜಿ

**ಚಿಕ್ಕಮಗಳೂರು:** ಹೆಣ್ಣು ಎಂದರೆ ಒಂದು ಕುಲವನ್ನು ಉದ್ಧಾರ ಮಾಡುವವಳು. ಹೆಣ್ಣುತನಕ್ಕೆ ಪಾವಿತ್ರ್ಯತೆ ಇದೆ. ಹೆಣ್ಣುತನದ ಜವಾಬ್ದಾರಿಯನ್ನು ಅರಿತು ಬದುಕಿದ ದಿನ ನಿಜವಾದ ಮಹಿಳಾ ದಿನಾಚರಣೆ ಆಗುತ್ತದೆ ಎಂದು ಹರಿಹರಪುರ ಗೌರಿಗದ್ದೆಯ ಅವಧೂತ ವಿನಯ್ ಗುರೂಜಿ ಹೇಳಿದರು.

ಅವರು ಭಾನುವಾರ ನಗರದ ಕುವೆಂಪು ಕಲಾ ಮಂದಿರದಲ್ಲಿ ಏರ್ಪಡಿಸಲಾಗಿದ್ದ ಜಿಲ್ಲಾ ಕುರುಹಿನ ಶೆಟ್ಟಿ (ನೇಕಾರ) ಮಹಿಳಾ ಸಂಘದ ಎಂಟನೇ ವರ್ಷದ ವಾರ್ಷಿಕೋತ್ಸವ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳ ಪುರಸ್ಕಾರ ಸಮಾರಂಭದಲ್ಲಿ ಅವರು ಪ್ರವಚನ ನೀಡಿದರು.

ಜಗತ್ತಿನಲ್ಲಿ ಬಿಡುವಿಲ್ಲದ ಚಕ್ರವೊಂದಿದೆ ಅದು ಕಾಲ ಚಕ್ರ. ಅದನ್ನು ಹೊರತು ಪಡಿಸಿದರೆ ಮನೆಗಳಲ್ಲಿರುವ ತಾಯಂದಿರು. ಆಕೆ ಒಂದು ಪರುಷನ ಬೆಳವಣಿಗೆಗೆ ಮಹಿಳೆ ಐದು ರೀತಿ ಸಹಾಯ ಮಾಡುತ್ತಾಳೆ. ನಮಗೆ ಈ ಜಗತ್ತನ್ನು ತೋರಿಸಿದ್ದು ತಾಯಿ ಎಂದರು.

ಏಳು ಮಕ್ಕಳನ್ನು ಹೆತ್ತ ತಾಯಿಗೆ ಅದು ಭಾರವಾಗಲಿಲ್ಲ. ಆ ಏಳು ಮಂದಿ ಮಕ್ಕಳು ಕೆಲಸಕ್ಕೆ ಸೇರಿದ ಮೇಲೆ ಹೆತ್ತ ತಾಯಿ ಭಾರವಾಗದಿರಲಿ. ಬಿಪಿ, ಶುಗರ್ ಮಾತ್ರೆ ಕೊಡದೆ ವೃದ್ಧಾಶ್ರಮಕ್ಕೆ ಬಿಡಲಾಗುತ್ತಿದೆ. ಆಕೆಗೆ ನೀವು ಎಷ್ಟೇ ಹಣ ಕೊಟ್ಟರು ಭಾವನೆ ಕೊಟ್ಟಂತಾಗುವುದಿಲ್ಲ ಎಂದರು.

ಹೆತ್ತ ತಾಯಿಯ ಬಳಿ ಬೆಳೆಯದೆ, ಅಜಿಯ ತೊಡೆಯ ಮೇಲೆ ಮಲಗದೆ, ಹಬ್ಬಗಳಲ್ಲಿ ತಿಂಡಿ ತಿನಿಸುಗಳನ್ನು ಮಾಡಿಸಿಕೊಂಡು ತಿನ್ನುವಂತಹ ಸಹಜತೆಯೇ ಹೊರಟು ಹೋಗಿದೆ. ಈ ಹಿನ್ನೆಲೆಯಲ್ಲಿ ಎಷ್ಟೋ ಮಂದಿ ನಗರದ ಮಕ್ಕಳಿಗೆ ಸಂಸ್ಕಾರವೇ ಇಲ್ಲದಂತಾಗಿದೆ. ಏನೇ ಕೃತಕತೆ ಮಾಡಿದರೂ ಅಮ್ಮ ಎನ್ನುವ ಶಬ್ಧಕ್ಕೆ ಪರ್ಯಾಯವಿಲ್ಲ. ಎಷ್ಟೇ ದೊಡ್ಡ ರೌಡಿಯಾಗಿದ್ದರೂ ತಾಯಿ ತೀರಿಕೊಂಡಾಗ ಅಳುವುದನ್ನು ನಾವು ನೋಡಿದ್ದೇವೆ ಎಂದರು.

ನಮ್ಮ ಪ್ರಧಾನಿಗಳು ತಾಯಿ ತೀರಿಕೊಂಡಾಗ ಸಾಮಾನ್ಯ ಮನುಷ್ಯರಂತೆ ಶವ ಸಂಸ್ಕಾರದ ಗೌರವವನ್ನು ಕೊಟ್ಟು ತಾಯಿಯ ಎದುರು ಎಲ್ಲರೂ ಚಿಕ್ಕವರು ಎನ್ನುವುದನ್ನು ತೋರಿಸಿಕೊಟ್ಟರು.



ನಾವು ಕಾರ್ಯಕ್ರಮಗಳಲ್ಲಿ ಸಕ್ರೀಯವಾಗಿರುತ್ತೇವೆ. ಆದರೆ ಪ್ರಗತಿ ವಿಚಾರದಲ್ಲಿ ಸಕ್ರೀಯರಾಗುವುದಿಲ್ಲ ಎಂದು ವಿಷಾಧಿಸಿದರು.

ಮಹಿಳಾ ದಿನಾಚರಣೆ ಆಚರಿಸುವಾಗ ಮೊದಲು ಮಹಿಳೆಯರು ಮಹಿಳೆಯರನ್ನು ದ್ವೇಷ ಮಾಡುವುದನ್ನು ಬಿಡಬೇಕು. ಉತ್ತರ ಕರ್ನಾಟಕದ ಭಾಗದಲ್ಲಿ ವೃದ್ಧಾಶ್ರಮಗಳು ಕಡಿಮೆ ಒಟ್ಟು ಕುಟುಂಬಗಳು ಅಲ್ಲಿ ಹೆಚ್ಚು. ಎಲ್ಲರೂ ಒಂದೇ ಮನೆಯಲ್ಲಿ ಜೋಳದ ರೊಟ್ಟಿ ತಟ್ಟಿ ಊಟ ಮಾಡುತ್ತಾರೆ. ಅಲ್ಲಿ ಭಾರೀ ದೊಡ್ಡದಾದ, ಸವಲತ್ತುಗಳಿರುವ ಮನೆಗಳಿಲ್ಲದಿದ್ದರು ಒಗ್ಗಟು ಉಂಟು ಅವರಲ್ಲಿ ವಿದ್ಯಾಭ್ಯಾಸ ಕಡಿಮೆ ಇದೆ. ನಮ್ಮಲ್ಲಿ ಎಂಬಿಬಿಎಸ್, ಎಂಬಿಎ ಎಲ್ಲ ಮಾಡಿದವರಿದ್ದಾರೆ. ಆದರೂ ಆ ರೀತಿ ಒಗ್ಗಟ್ಟಿಲ್ಲ. ಎಲ್ಲಿ ತಪ್ಪಾಗುತ್ತಿದೆ. ವಿದ್ಯೆಯೇ ಅಹಂಕಾರಕ್ಕೆ ದಾರಿಯಾಗುತ್ತಿದೆಯೇ ಎನ್ನುವುದನ್ನು ಆಲೋಚಿಸಬೇಕಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಮಾತನಾಡಿ, ಮನೆಯೊಂದಿಗೆ ಮನಶ್ಯಾಂತಿ, ಹಸಿವಿನೊಂದಿಗೆ ಭೋಜನ ಸಿಗುವಂತಾಗಲಿ, ಧನದೊಂದಿಗೆ ದಾನದ ಗುಣ ಬರಲಿ, ಹಾಸಿಗೆಯೊಂದಿಗೆ ನಿದ್ದೆಯೂ ಇರಬೇಕೆನ್ನುವ ರೀತಿ ಬದುಕು ಬೇಕೆನ್ನುವುದಾದರೆ ನಾವು ನಮಗೋಸ್ಕರ ಮಾತ್ರ ಎಂದು ಯೋಚಿಸದೆ ನಮ್ಮ ಬದುಕಿನ ಜೊತೆಗೆ ನೆರೆ ಹೊರೆಯವರ ಬದುಕಿನಲ್ಲೂ ನೆರವಾಗಬೇಕು ಎಂದರು.

ಶಾಸಕ ಎಚ್.ಡಿ.ತಮ್ಮಯ್ಯ ಮಾತನಾಡಿ, ಸಂಘಟನೆಗೆ ಹೆಚ್ಚು ಶಕ್ತಿ ಇರುವುದರಿಂದ ಮಹಿಳೆಯರು ಸಂಘಟಿತರಾಗಿ ಹೋರಾಟ ಮಾಡುವುದರಿಂದ ಹಕ್ಕುಗಳನ್ನು ಪಡೆಯಬಹುದು. ಪುರುಷರಷ್ಟೇ ಮಹಿಳೆಯರಿಗೂ ಎಲ್ಲ ಅವಕಾಶಗಳನ್ನು ಕೊಟ್ಟಿರುವುದರಿಂದ ಮುಂದೆ ಬರಲು ಸಾಕಷ್ಟು ಸಾಧ್ಯತೆಗಳಿವೆ ಅದನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಕೇಶವ ಪ್ರಸಾದ್ ಮಾತನಾಡಿ, ಎಲ್ಲ ಕಾಲಘಟ್ಟದಲ್ಲೂ ಮಹಿಳೆಯರು ಈ ದೇಶದ ಉನ್ನತಿಯಲ್ಲಿ ತನ್ನ ಪಾತ್ರವನ್ನು ನಿರಂತರವಾಗಿ ವಹಿಸುತ್ತಾ ಬಂದಿದ್ದಾರೆ. ಆಧುನಿಕ ಕಾಲದಲ್ಲೂ ಭಾರತಕ್ಕೆ ಹೊಸದಿಕ್ಕನ್ನು ಕೊಡುತ್ತಾ ಮಹಿಳೆಯರು ಪುರುಷನಿಗೆ ಸಮಾನರಾಗಿ ಬೆಳೆಯಬೇಕು ಎನ್ನುವುದನ್ನು ತೋರಿಸುತ್ತಾರೆ ಎಂದರು.

ವಿಧಾನ ಪರಿಷತ್ ಸದಸ್ಯೆ ಗಾಯತ್ರಿ ಶಾಂತೇಗೌಡ ಮಾತನಾಡಿ ನಮ್ಮ ಕೈಲಾದ ಸಹಾಯವನ್ನು ಹಿಂದುಳಿದ ಸಮಾಜಕ್ಕೆ ನೀಡಿ ಮುಂದೆ ತರುವ ಕೆಲಸ ಎಲ್ಲಾ ರಾಜಕಾರಣಿಗಳಿಂದಾಗಬೇಕು ಎಂದು ಹೇಳಿದರು.

ಜಿಲ್ಲಾ ಕುರುಹಿನ ಶೆಟ್ಟಿ(ನೇಕಾರ) ಮಹಿಳಾ ಸಂಘದ ಅಧ್ಯಕ್ಷೆ ಸಿ.ಎಸ್.ಪುಷ್ಪಾ ರಾಜೇಂದ್ರ ಆಧ್ಯಕ್ಷತೆ ವಹಿಸಿ ಮಾತನಾಡಿದರು. ಕೇಂದ್ರ ಕುರುಹಿನ ಶೆಟ್ಟಿ ಸಂಘದ ಅಧ್ಯಕ್ಷ ಬೆಂಗಳೂರಿನ ಅಂಬಾದಾಸ್ ಕಾಮೂರ್ತಿ, ಉಪಾಧ್ಯಕ್ಷ ಜಿ.ಟಿ.ಸೋಮಶೇಖರ್, ನಗರಸಭೆ ಅಧ್ಯಕ್ಷೆ ಸುಜಾತ ಶಿವಕುಮಾರ್, ನೇಯ್ಗೆ ನುಡಿ ಮಾಸ ಪತ್ರಿಕೆ ಸಂಪಾದಕ ಡಿ.ಸಿ.ಬೆಳ್ಳಿಚುಕ್ಕಿ ವೀರೇಂದ್ರ, ಉಪನ್ಯಾಸಕಿ ನಾಗಶ್ರೀ ತ್ಯಾಗರಾಜ್, ಜಿಲ್ಲಾ ಶ್ರೀ ನೀಲಕಂಠೇಶ್ವರ ಕುರುಹಿನ ಶೆಟ್ಟಿ ಸಂಘದ ಅಧ್ಯಕ್ಷ ಎಚ್. ಇಂದುಕುಮಾರ್ ಇತರರು ಉಪಸ್ಥಿತರಿದ್ದರು. ಜಯಾ ಶೇಖರ್ ಸ್ವಾಗತಿಸಿದರು.

# ಸಸಿ ನಡೆವ ಮೂಲಕ ಪರಿಸರ ಪ್ರೇಮ

**ಸೊರಬ:** ಪಟ್ಟಣದ ದಂಡಾವತಿ ಬ್ಲಾಕ್‌ನಲ್ಲಿರುವ ಶ್ರೀ ಚಂದ್ರಮೌಳೇಶ್ವರ ದೇವಸ್ಥಾನ ಹಿಂಭಾಗದ ಉದ್ಯಾನದಲ್ಲಿ ಜಯಂತಿ ಗ್ರಾಮದ ನಿವಾಸಿ ಸಂಧ್ಯಾ ಮತ್ತು ಬಸವರಾಜ್ ದಂಪತಿ ತಮ್ಮ ಎರಡನೇ ಮಗುವಿನ ನಾಮಕರಣ ಹಿನ್ನೆಲೆಯಲ್ಲಿ ಸಸಿ ನಡೆವ ಮೂಲಕ ಪರಿಸರ ಪ್ರೇಮ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಬಸವರಾಜ್ ಅವರು, ಪರಿಸರ ಉಳಿದರೆ ಮಾತ್ರ ಮನುಕುಲದ ಉಳಿವು ಸಾಧ್ಯವಾಗುತ್ತದೆ. ಮರಗಳು ಪರಿಸರಕ್ಕೆ ಪೂರಕವಾಗಿ ಹಣ್ಣು-ಆಹಾರ ಒದಗಿಸುತ್ತಾ, ಪಕ್ಷಿ-ಪ್ರಾಣಿ ಸಂಕುಲಕ್ಕೆ ನೆರವನ್ನು ನೀಡುತ್ತಿರುತ್ತವೆ. ಅಂತೆಯೇ ತಮ್ಮ ಪುತ್ರ ಭವಿಷ್ಯದಲ್ಲಿ ಉತ್ತಮ ಪ್ರಜೆಯಾಗಿ ಸಮಾಜಕ್ಕೆ ಮಾದರಿಯಾಗಬೇಕು ಎನ್ನುವ ಉದ್ದೇಶದಿಂದ ಸಸಿಗಳನ್ನು ನೆಡಲಾಗುತ್ತಿದೆ. ಇದಕ್ಕೆ ಪತ್ನಿ ಸಂಧ್ಯಾ ಅವರೇ ಸ್ಫೂರ್ತಿಯಾಗಿದ್ದಾರೆ ಮತ್ತು ನೆಮ್ಮದಿ ಗ್ರೂಪ್ ಆಫ್ ಸರ್ವಿಸಸ್ ನವರು, ಪರಿಸರಾಸಕ್ತರು ಕೈ ಜೋಡಿಸಿದರು ಎಂದರು.

ಪರಿಸರ ತಜ್ಞ ಮತ್ತು ಇತಿಹಾಸ ಸಂಶೋಧಕ ಶ್ರೀಪಾದ ಬಿಚ್ಚುಗತ್ತಿ ಮಾತನಾಡಿ, ಪ್ರತಿಯೊಬ್ಬರು ಬೆಳೆಯುವುದೇ ಪ್ರಕೃತಿಯೊಂದಿಗೆ. ಪ್ರಕೃತಿ ಹಾಳಾದರೆ ಸಂಸ್ಕೃತಿಯ ಮೇಲೆಯೂ ಪರಿಣಾಮ ಬೀರುತ್ತದೆ. ಮುಂದಿನ ಪೀಳಿಗೆಗೆ ಪ್ರಕೃತಿಯನ್ನು ಅರ್ಪಿಸುವ ಜೊತೆಗೆ ಬೆಳೆಸುವಂತಹ ಕೆಲಸವನ್ನು ಮಾಡಬೇಕಾಗುತ್ತದೆ. ಮಗುವಿನ ನಾಮಕರಣ ಕಾರ್ಯಕ್ರಮದಲ್ಲಿ ಸಸಿ ನೆಡುವ ಕಾರ್ಯಕ್ರಮ ಅತ್ಯಂತ ಅರ್ಥಪೂರ್ಣ ಮತ್ತು ಶ್ಲಾಘನೀಯವಾಗಿದೆ. ಶುಭ ಸಂದರ್ಭಗಳಲ್ಲಿ ಸಸಿ ನೆಡುವ ಪರಿಪಾಠ ಉತ್ತಮವಾದ ಬೆಳವಣಿಗೆ. ಪರಿಸರ ನಮಗೇನು ನೀಡಿದೆ ಎನ್ನುವದಕ್ಕಿಂತ ನಮ್ಮಗಳ ಕೊಡುಗೆ ಏನು ಎಂಬುದು ಮುಖ್ಯವಾಗುತ್ತದೆ. ಇಂತಹ ಕಾರ್ಯಕ್ರಮಗಳು ನಿರಂತರವಾಗಿ ನಡೆಯುತ್ತಿರಬೇಕು ಎಂದರು.

ನೆಮ್ಮದಿ ಗ್ರೂಪ್ ಆಫ್ ಸರ್ವಿಸಸ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನೆಮ್ಮದಿ ಸುಬ್ಬು ಮಾತನಾಡಿ, ಪರಿಸರಕ್ಕೆ ಪೂರಕವಾಗಿ ಕೊಡುಗೆಗಳನ್ನು ನೀಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಅಂತೆಯೇ ಈ ಒಂದು ನಾಮಕರಣ ಶಾಸ್ತ್ರವನ್ನು ಸಸಿ ನೆಡುವ ಮೂಲಕ ಚಾಲನೆ ನೀಡುವ ಜೊತೆಗೆ ನೆಮ್ಮದಿ ಇವೆಂಟ್ಸ್‌ಗೂ ಸಹ ಆರಂಭಗೊಳಿಸಲಾಗುತ್ತಿದೆ ಎಂದರು. ನಂತರ ಕುಟುಂಬಸ್ಥರು ಮತ್ತು ಪೋಷಕರು ಶಾಸ್ತ್ರೋಕ್ತವಾಗಿ ಮಗುವಿಗೆ ಸ್ಕಂದ ಎಂದು ನಾಮಕರಣ ಮಾಡಿದರು.

ಈ ಸಂದರ್ಭದಲ್ಲಿ ಪರಿಸರಕ್ಕೆ ಪೂರಕವಾದ ಕಲ್ಪವೃಕ್ಷ, ಮಾವು, ಹಲಸು, ನೇರಳೆ ಗಿಡಗಳ ಸೇರಿದಂತೆ ಹಲವು ಬಗೆಯ ಸಸಿಗಳನ್ನು ನೆಡಲಾಯಿತು. ಗಿಡಕ್ಕೆ ನಿತ್ಯ ನೀರಿನ ವ್ಯವಸ್ಥೆಯನ್ನು ಕಲ್ಪಿಸುವ ಕುರಿತು ಪರಿಸರಾಸಕ್ತರು ಭರವಸೆಯನ್ನು ನೀಡಿದರು.

ಕಾರ್ಯಕ್ರಮದಲ್ಲಿ ಬಿ.ಜಿ. ನಾಗರಾಜ, ಸರೋಜಮ್ಮ, ಶಾಂತಮ್ಮ, ಶಿಲ್ಪ ರವಿಶಂಕರ್, ಸವಿತಾ ನಾಗರಾಜ್, ಸುಜಾತ ಅಣ್ಣಪ್ಪ, ನಾಗರತ್ನ ದಾಮೋದರ, ನಿರಂಜನ್, ಕವಿತಾ, ಹಿರಿಯಪ್ಪ, ಉಷಾ, ರೂಪಾ ಸತೀಶ್, ನೆಮ್ಮದಿ ಗ್ರೂಪ್ ಆಫ್ ಸರ್ವಿಸಸ್ ಮುಖ್ಯಸ್ಥೆ ಅನಿತಾ ಸುಬ್ಬು, ಶ್ರೀರಕ್ಷಾ ಸುಬ್ಬು, ಯುವ ಬ್ರಿಗೇಡ್ ಜಿಲ್ಲಾ ಸಂಚಾಲಕ ಮಹೇಶ್ ಖಾರ್ವಿ, ಹೆಲ್ಪಿಂಗ್ ಹ್ಯಾಂಡ್ ಸಂಸ್ಥೆಯ ಮಧುಕೇಶ್ವರ, ನಾಗರಾಜ ಹಿರೇಶಕುನ ಸೇರಿದಂತೆ ಇತರರಿದ್ದರು.



ಸೊರಬ ಪಟ್ಟಣದ ದಂಡಾವತಿ ಬ್ಲಾಕ್‌ನಲ್ಲಿರುವ ಶ್ರೀ ಚಂದ್ರಮೌಳೇಶ್ವರ ಉದ್ಯಾನದಲ್ಲಿ ಜಯಂತಿ ಗ್ರಾಮದ ಸಂಧ್ಯಾ ಮತ್ತು ಬಸವರಾಜ್ ದಂಪತಿ ತಮ್ಮ ಎರಡನೇ ಮಗುವಿನ ನಾಮಕರಣ ಹಿನ್ನೆಲೆಯಲ್ಲಿ ಸಸಿ ನಡೆವ ಮೂಲಕ ಪರಿಸರ ಪ್ರೇಮ ವ್ಯಕ್ತಪಡಿಸಿದರು.

# ಹೊಸ ದೇವಾಲಯಗಳ ನಿರ್ಮಾಣಕ್ಕಿಂತ ಹಳೆಯ ದೇವಾಲಯಗಳ ಜೀರ್ಣೋದ್ಧಾರವೇ ಶ್ರೇಷ್ಠ

**ಚಿಕ್ಕಮಗಳೂರು:** ಹೊಸ ದೇವಾಲಯಗಳ ನಿರ್ಮಾಣಕ್ಕಿಂತ ಹಳೆಯ ದೇವಾಲಯಗಳ ಜೀರ್ಣೋದ್ಧಾರವೇ ಶ್ರೇಷ್ಠ. ಇದು ಬ್ರಹ್ಮದೇವರು ವ್ಯಾಖ್ಯಾನಿಸಿರುವ ರೀತಿ; ಆದ್ದರಿಂದಎಲ್ಲಿಯೇಇರಲಿ, ಯಾವುದೇದೇವಸ್ಥಾನವಿರಲಿ ಅಲ್ಲಿಯಾವುದೇ ಪೂಜಾ ವಿಧಾನಗಳಲ್ಲಿ ಲೋಪಗಳಾಗಬಾರದು ಎಂದುಉತ್ತರಕನ್ನಡಜಿಲ್ಲೆ ಹೊನ್ನಾವರದ ಶ್ರೀಕ್ಷೇತ್ರ ಬಂಗಾರುಮಕ್ಕಿ ಶ್ರೀ ಹೇಮಪುರ ಮಹಾಪೀಠಂನ ಶ್ರೀ ವಿಶ್ವ ವೀರಾಂಜನೇಯ ಸ್ವಾಮೀಜಿ ಹೇಳಿದರು.

ನಗರದ ಶ್ರೀ ಗಾಯತ್ರಿಕಲ್ಯಾಣ ಮಂಟಪದಲ್ಲಿಇತ್ತೀಚೆಗೆ ಶ್ರೀಪೀಠಂನ ಭಕ್ತಾದಿಗಳು ಹಾಗೂ ಚಿಕ್ಕಮಗಳೂರು ಬ್ರಾಹ್ಮಣ ಮಹಾಸಭಾ ವತಿಯಿಂದಆಯೋಜಿಸಲಾಗಿದ್ದಕಾರ್ಯಕ್ರಮದಲ್ಲಿ ಶ್ರೀಗಳು ಆಶೀರ್ವಚನ ನೀಡಿ, ದೇವಾಲಯಗಳ ಜೀರ್ಣೋದ್ಧಾರಗಳು ಕಾಲ ಕಾಲಕ್ಕೆ ಪುನರುಜ್ಜೀವನ ಆಗಬೇಕು.ಈ ದಿಕ್ಕಿನಲ್ಲಿಎಲ್ಲಾಜಾತಿ, ಜನಾಂಗ, ಧರ್ಮದವರೂ ಭಾಗಿಯಾಗಬೇಕಾಗಿರುವುದು ಇಂದಿನ ಅವಶ್ಯ.ದೇವಸ್ಥಾನಗಳೇ ಅಭಿವೃದ್ಧಿಯ ಸಂಕೇತಎಂದರು.

ಹೊನ್ನಾವರದ ಶ್ರೀ ಬಂಗಾರುಮಕ್ಕಿಕ್ಷೇತ್ರದಲ್ಲಿ ಮಾ.31 ರಿಂದಏಪ್ರಿಲ್ 13ರವರೆಗೆ ಹಮ್ಮಿಕೊಂಡಿರುವ ವಿವಿಧಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳ ವಿವರ ನೀಡಿದರು. ಶ್ರೀಕ್ಷೇತ್ರದಲ್ಲಿ ಶ್ರೀ ವೀರಾಂಜನೇಯ ಪ್ರತಿಷ್ಠಾ ಬಂಧ, ನೂತನಗೋಪುರ – ಸ್ವರ್ಣಮಯ ಕಲಶ, ಶ್ರೀ ಸುಬ್ರಹ್ಮಣ್ಯ, ಶ್ರೀ



ಮಹಾಗಣಪತಿ ಸನ್ನಿಧಿ, ಚೌಡೇಶ್ವರಿ ಸನ್ನಿಧಿ ನಿರ್ಮಾಣ ಹಾಗೂ ಗುರೂಜಿಯವರ ಪೀಠಾರೋಹಣದರಜತ ಮಹೋತ್ಸವ ಮಹಾ ಕಾರ್ಯಕ್ಕೆ ಈ ಜಿಲ್ಲೆಯಎಲ್ಲರನ್ನೂ ಶ್ರೀ ವಿಶ್ವ ವೀರಾಂಜನೇಯರಅನುಗ್ರಹದಿಂದಆಹ್ವಾನಿಸುತ್ತಿದ್ದು, ಈ ಅವಧಿಯಲ್ಲಿಎಲ್ಲ ಸದ್ಭಕ್ತರೂ ಭಾಗವಹಿಸಬಹುದುಎಂದು ತಿಳಿಸಿದರು.

ಮಾ.31 ರಿಂದಜರುಗುವ ಈ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಏ.7 ರಂದು ಶರಾವತಿಕುಂಭಸ್ನಾನ, ಶರಾವತಿಆರತಿ, ಏ.6 ರಿಂದ 12ರವರೆಗೆ ಸಂಸ್ಕೃತಿಕುಂಭ? ಮಲೆನಾಡಉತ್ಸವ, ಸಭಾಕಾರ್ಯಕ್ರಮ ಮತ್ತು ವಿವಿಧ ಸಾಂಸ್ಕೃತಿಕಕಾರ್ಯಕ್ರಮ ನಡೆಯಲಿವೆ. ಕೇತ್ರ ಪ್ರತಿನಿಧಿಗಳ ಸಹಕಾರದಿಂದರಾಜ್ಯದ ಕನಿಷ್ಠ 50 ಲಕ್ಷ ಮನೆಗಳಿಗೆ ಶ್ರೀ ವಿಶ್ವ ವೀರಾಂಜನೇಯ ಮಹಾ ಸಂಸ್ಥಾನದಆಹ್ವಾನ ಪತ್ರಿಕೆ – ಪ್ರಸಾದವನ್ನು ಮನೆ ಮನೆಗೆ ಕಳುಹಿಸುವ ವ್ಯವಸ್ಥೆ ಮಾಡಲಾಗುವುದು. ಈ ಕಾರ್ಯದಲ್ಲಿಎಲ್ಲ ಭಕ್ತಾದಿಗಳು ಸಹಕರಿಸಬೇಕುಎಂದು ತಿಳಿಸಿದರು.

ಇದೀಗ 17 ಜಿಲ್ಲೆಗಳಲ್ಲಿಯೂ ಈ ಪ್ರಚಾರ ಆಂದೋಳನ ಕೈಗೊಂಡಿದ್ದು, ರಾಜ್ಯಾದ್ಯಂತ ಶ್ರೀಕ್ಷೇತ್ರ ಬಂದಾರುಮಕ್ಕಿಯಲ್ಲಿ ನಡೆಯಲಿರುವ ಕಾರ್ಯಕ್ರಮಗಳ ವಿವರ ತಿಳಿಸಲಾಗುತ್ತಿದೆ.ನಮ್ಮೆಲ್ಲರ ಕಷ್ಟ–ನಷ್ಟ ಪರಿಹರಿಸಿ ಲೋಕಕ್ಕೆ ಮಂಗಳ ಉಂಟು ಮಾಡುವ ಶ್ರೀ ರಾಮಾಂಜನೇಯದೇವರಕೈಂಕರ್ಯದಲ್ಲಿ ಸಮಸ್ತ ಭಕ್ತರೂ ಸಹಕರಿಸುವಂತೆ ವಿನಂತಿಸಿದರು.

ಶ್ರೀವತ್ಸ ವೇದಘೋಷ, ಬ್ರಾಹ್ಮಣ ಮಹಾಸಭಾ ನಿರ್ದೇಶಕಿ ಸುಮಾ ಪ್ರಸಾದ್ ಸ್ವಾಗತ, ಸತ್ಯವತಿಕಾರ್ಯಕ್ರಮ ನಿರೂಪಣೆ, ಬಿ.ಎಂ.ಎಸ್.ನಿರ್ದೇಶಕಿಎಸ್.ಶಾಂತಕುಮಾರಿ ವಂದನಾರ್ಪಣೆ ನೆರವೇರಿಸಿದರು.

ಚಿಕ್ಕಮಗಳೂರು ಬ್ರಾಹ್ಮಣ ಮಹಾಸಭಾಅಧ್ಯಕ್ಷ ಪಿ.ಮಂಜುನಾಥಜೋಷಿ, ಪದಾಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು, ಶ್ರೀಗಳಿಗೆ ಪಾದಪೂಜೆ ನೆರವೇರಿಸಿದರು.

## ಉಡಾನ್ ಯೋಜನೆಯಡಿ ರಾಜ್ಯದಲ್ಲಿ 5 ಹೊಸ ಮಿನಿ ಏರ್ಪೋರ್ಟ್ ನಿರ್ಮಾಣ!

**ಬೆಂಗಳೂರು:** ಉಡಾನ್ (ಉಡೇ ದೇಶ್ ಕಾ ಆಮ್ ನಾಗರಿಕ್) ಯೋಜನೆಯಡಿ 5 ಹೊಸ ಏರ್ಸ್ಟ್ರಿಪ್ (ಮಿನಿ ಏರ್ಪೋರ್ಟ್) ನಿರ್ಮಾಣಕ್ಕೆ ರಾಜ್ಯದಲ್ಲಿ ಸ್ಥಳಗಳನ್ನು ನಾಗರಿಕ ವಿಮಾನಯಾನ ಸಚಿವಾಲಯವು ಗುರ್ತಿಸಿದೆ.ಮಾಜಿ ಮುಖ್ಯಮಂತ್ರಿ ಮತ್ತು ಹಾವೇರಿ ಸಂಸದ ಬಸವರಾಜ್ ಬೊಮ್ಮಾಯಿ ಅವರು ಬುಧವಾರ ಲೋಕಸಭೆಯಲ್ಲಿ ಕೇಳಿದ ಪ್ರಶ್ನೆಗೆ ನಾಗರಿಕ ವಿಮಾನಯಾನ ರಾಜ್ಯ ಸಚಿವ ಮುರಳೀಧರ್ ಮೊಹಲ್ ಅವರು ಉತ್ತರಿಸಿದರು.ಉಡಾನ್ ಯೋಜನೆಯಡಿ ಏರ್ಸ್ಟ್ರಿಫ್ಸ್ ನಿರ್ಮಾಣಕ್ಕೆ ಕರ್ನಾಟಕದ ಬಳ್ಳಾರಿ, ಕೋಲಾರ, ಕುಶಾಲನಗರ, ರಾಯಚೂರು ಹಾಗೂ ಹಾಸನವನ್ನು ತಾತ್ಕಾಲಿಕವಾಗಿ ಗುರುತಿಸಲಾಗಿದೆ. ಬೀದರ್, ಮೈಸೂರು, ವಿದ್ಯಾನಗರ, ಹುಬ್ಬಳ್ಳಿ, ಕಲಬುರಗಿ, ಬೆಳಗಾವಿ, ಶಿವಮೊಗ್ಗದಲ್ಲಿ ಈಗಾಗಲೇ ವಿಮಾನಗಳ ಹಾರಾಟ ಪ್ರಕ್ರಿಯೆ ಮುಂದುವರಿದಿದೆ. ವಿಜಯಪುರ ಹಾಗೂ ಕಾರವಾರದಲ್ಲಿ ಇನ್ನಷ್ಟೇ ವಿಮಾನ ನಿಲ್ದಾಣ ನಿರ್ಮಾಣ ಕಾರ್ಯ ಆರಂಭವಾಗಬೇಕಿದೆ ಎಂದು ಹೇಳಿದರು.ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದ ಅಧಿಕಾರಿಯೊಬ್ಬರು ಮಾತನಾಡಿ, ಈ ಐದು ಏರ್ಸ್ಟ್ರಿಪ್ಗಳಿಗೆ ಟೆಂಡರ್ ಪ್ರಕ್ರಿಯೆ ಪ್ರಾರಂಭವಾಗಿದ್ದು, ವಿಭಿನ್ನ ಹಂತಗಳಲ್ಲಿವೆ ಎಂದು ತಿಳಿಸಿದ್ದಾರೆ.ಉಡಾನ್–ಪ್ರಾದೇಶಿಕ ಸಂಪರ್ಕ ಯೋಜನೆಯು ಮಾರುಕಟ್ಟೆ ಆಧಾರಿತವಾಗಿದೆ. ವಿಮಾನಯಾನ ಮಾರ್ಗ, ಸಂಪರ್ಕ ಸ್ಥಳಗಳು, ನಿರ್ದಿಷ್ಟ ಹಾರಾಟ ಮಾರ್ಗಗಳ ವಿಚಾರವಾಗಿ ಏರ್ಲೈನ್ ಆಪರೇಟರ್ಗಳ ಕಾರ್ಯಸಾಧ್ಯತಾ ಸ್ಥಿತಿಗತಿ ಆಧರಿಸಿ ನಿಯಮಿತವಾಗಿ ಬಿಡ್ಡಿಂಗ್ ಸುತ್ತುಗಳು ನಡೆಯಲಿವೆ.

## ಭಾರತೀಯರ ವಲಸಿಗರಿಗೆ ಸಂಕೋಲೆ ಹಾಕಿ ಗಡೀಪಾರು ಮಾಡಿದ್ದಕ್ಕೆ ರಾಮದಾಸ್ ಅಠವಾಳೆ ಬೇಸರ

**ಭೋಪಾಲ್:** ಅಮೆರಿಕದಿಂದ ಭಾರತಕ್ಕೆ ಅಕ್ರಮ ವಲಸಿಗರನ್ನು ಸಂಕೋಲೆಯಲ್ಲಿ ಗಡೀಪಾರು ಮಾಡುವುದು ತಪ್ಪು ಮತ್ತು ಅಮೆರಿಕ ಸರ್ಕಾರವು ಅಂತಹ ನಿರ್ಧಾರವನ್ನು ತಪ್ಪಿಸಬೇಕಿತ್ತು ಎಂದು ಕೇಂದ್ರ ಸಚಿವ ರಾಮದಾಸ್ ಅಠವಳೆ ಹೇಳಿದ್ದಾರೆ.ಪತ್ರಿಕಾಗೋಷ್ಠಿಯಲ್ಲಿ ಮಾತಾನಡಿದ ಅವರು,

ಅವರು ಕೇಂದ್ರ ಬಜೆಟ್ನ ವಿವರಗಳನ್ನು ಹಂಚಿಕೊಂಡರು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ದೇಶವು ಅಭಿವದ್ಧಿಯ ಪಥದಲ್ಲಿದೆ ಎಂದು ಹೇಳಿದರು.

ಈ ವಾರದ ಆರಂಭದಲ್ಲಿ ಯುಎಸ್ನಿಂದ ಭಾರತಕ್ಕೆ ಗಡೀಪಾರು ಮಾಡಿದ ದಾಖಲೆರಹಿತ ವಲಸಿಗರ ಚಿಕಿತ್ಸೆ ಕುರಿತು ಅಠವಾಳೆ ಅವರು ಭಾರತೀಯರನ್ನು ಸಂಕೋಲೆಯಲ್ಲಿ ಕಳುಹಿಸುವುದು ತಪ್ಪು ಎಂದು ಹೇಳಿದರು. ಫೆಬ್ರವರಿ 5 ರಂದು ಅಮತಸರದಲ್ಲಿ 104 ಅಕ್ರಮ ಭಾರತೀಯ ವಲಸಿಗರನ್ನು ಹೊತ್ತ ಯುಎಸ್ ಮಿಲಿಟರಿ ವಿಮಾನವೊಂದು ಬಂದಿಳಿಯಿತು.

ಅಕ್ರಮ ವಲಸಿಗರ ವಿರುದ್ಧದ ದಮನದ ಭಾಗವಾಗಿ ಡೊನಾಲ್ಡ್ ಟ್ರಂಪ್ ಆಡಳಿತವು ಗಡೀಪಾರು ಮಾಡಿದ ಭಾರತೀಯರ ಮೊದಲ ಬ್ಯಾಚ್ ಇದಾಗಿದೆ. ಕೆಲವು ಗಡೀಪಾರು ಮಾಡಿದವರು ತಮ ಕೈಗಳು ಮತ್ತು ಕಾಲುಗಳನ್ನು ಪ್ರಯಾಣದ ಉದ್ದಕ್ಕೂ ಬಂಧಿಸಿದ್ದಾರೆ ಮತ್ತು ಅಮತಸರದಲ್ಲಿ ಇಳಿದ ನಂತರ ಮಾತ್ರ ಅವುಗಳನ್ನು ಬಿಚ್ಚಲಾಯಿತು ಎಂದು ಹೇಳಿದ್ದಾರೆ.ಯುಎಸ್ ಸರ್ಕಾರವು ಅಂತಹ ನಿರ್ಧಾರವನ್ನು ತಪ್ಪಿಸಬೇಕಿತ್ತು, ಮುಂದಿನ ವಾರದ ಪ್ರಧಾನಿಯವರ ಯುಎಸ್ ಭೇಟಿಯ ಸಮಯದಲ್ಲಿ ಈ ವಿಷಯವನ್ನು ಚರ್ಚಿಸಲಾಗುವುದು ಎಂದು ಅವರು ಹೇಳಿದರು.

## ವಿಮಾನ ಪತನದಲ್ಲಿ ಮೃತಪಟ್ಟಿದ್ದ 10 ಜನರ ಮೃತದೇಹಗಳು ಪತ್ತೆ



**ಜುನೌ:** ಬೇರಿಂಗ್ ಸಮುದ್ರದಲ್ಲಿ ಸಣ್ಣ ವಿಮಾನವು ಮಂಜುಗಡ್ಡೆಗೆ ಅಪ್ಪಳಿಸಿ ಸಾವನ್ನಪ್ಪಿದ ಎಲ್ಲಾ 10 ಜನರ ಅವಶೇಷಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನೋಮ್ ಸ್ವಯಂಸೇವಕ ಅಗ್ನಿಶಾಮಕ ಇಲಾಖೆ ತನ್ನ ಫೇಸ್‌ಬುಕ್ ಪುಟದಲ್ಲಿ ಈ ಪ್ರಕಟಣೆ ಮಾಡಿದೆ.

ಬೇರಿಂಗ್ ಏರ್ ವಿಮಾನದಲ್ಲಿದ್ದ ಎಲ್ಲಾ ಹತ್ತು ವ್ಯಕ್ತಿಗಳ ಪಾರ್ಥಿವ ಶರೀರಗಳನ್ನು ಅಧಿಕತವಾಗಿ ಮನೆಗೆ ಕರೆತರಲಾಗಿದೆ ಎಂದು ಅಗ್ನಿಶಾಮಕ ಇಲಾಖೆ ಮಧ್ಯಾಹ್ನ 3 ಗಂಟೆಗೆ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಬರೆದಿದೆ.

ಬೆರಿಂಗ್ ಏರ್ ಸಿಂಗಲ್ ಇಂಜಿನ್ ಟರ್ಬೋಪ್ರೊಪ್ ವಿಮಾನವು ಉನಲಕ್ಲೀಟ್‌ನಿಂದ ನೋಮ್ನ ಹಬ್ ಸಮುದಾಯಕ್ಕೆ ಪ್ರಯಾಣಿಸುತ್ತಿದ್ದಾಗ ಗುರುವಾರ ಮಧ್ಯಾಹ್ನ ಕಣರೆಯಾಗಿತ್ತು. ಮತ್ತು ಎಲ್ಲಾ ಒಂಬತ್ತು ಪ್ರಯಾಣಿಕರು ಮತ್ತು ಪೈಲಟ್ ಸತ್ತಿರುವ ವ್ಯಾಪಕ ಹುಡುಕಾಟದ ನಂತರ ಮರುದಿನ ಇದು ಪತ್ತೆಯಾಗಿದೆ, ಇದು 25 ವರ್ಷಗಳಲ್ಲಿ ರಾಜ್ಯದಲ್ಲಿ ಸಂಭವಿಸಿದ ಅತ್ಯಂತ ಮಾರಕ ವಿಮಾನ ಅಪಘಾತಗಳಲ್ಲಿ ಒಂದಾಗಿದೆ.

ಸಮುದಾಯವು ಮಾರಣಾಂತಿಕ ಘಟನೆಯನ್ನು ಪ್ರಕ್ರಿಯೆಗೊಳಿಸಲು ಪ್ರಯತ್ನಿಸುತ್ತಿದ್ದಂತೆ, ದೇಹಗಳು ಮತ್ತು ಅವಶೇಷಗಳನ್ನು ಚೇತರಿಸಿಕೊಳ್ಳಲು ಸಿಬ್ಬಂದಿಗಳು ಅಸ್ಥಿರವಾದ, ಕೆಸರು ಸಮುದ್ರದ ಮಂಜುಗಡ್ಡೆಯ ಮೇಲೆ ವೇಗವಾಗಿ ಕೆಲಸ ಮಾಡಿದರು. ರಾಷ್ಟ್ರೀಯ ಹವಾಮಾನ ಸೇವೆಯು ಚಳಿಗಾಲದ ಹವಾಮಾನ ಸಲಹೆಯನ್ನು ನೀಡಿತು, ಹಿಮ ಮತ್ತು ಗಾಳಿಯು ಗಂಟೆಗೆ 45 ಮೈಲುಗಳಷ್ಟು (ಗಂಟೆಗೆ 72 ಕಿಲೋಮೀಟರ್) ರಾತ್ರಿ ಪ್ರದೇಶವನ್ನು ಅಪ್ಪಳಿಸುವ ನಿರೀಕ್ಷೆಯಿದೆ, ಇದು ಭಾನುವಾರ ಸಂಜೆಯವರೆಗೆ ಇರುತ್ತದೆ.

# ಭದ್ರಾವತಿ ಆಕಾಶವಾಣಿ ವಜ್ರಮಹೋತ್ಸವದ ಸಂಭ್ರಮ

## ಆಕಾಶವಾಣಿ ಕಾರ್ಯಕ್ರಮಗಳು ಹೆಚ್ಚು ನಿಖರ ಮತ್ತು ಸ್ಪಷ್ಟತೆಯಿಂದ ಕೂಡಿದೆ– ಡಾ. ಶ್ರೀಕಂಠ ಕೂಡಿಗೆ

**ಶಿವಮೊಗ್ಗ:** ಆಕಾಶವಾಣಿ ಕಾರ್ಯಕ್ರಮಗಳು ಹೆಚ್ಚು ನಿಖರ ಮತ್ತು ಸ್ಪಷ್ಟತೆಯಿಂದ ಕೂಡಿದ್ದು ಈ ಹೊತ್ತಿಗು ಕೂಡ ತನ್ನ ಛಾಪನ್ನ ಉಳಿಸಿಕೊಂಡು ಬಂದಿದೆ ಎಂದು ಕುವೆಂಪು ವಿಶ್ವವಿದ್ಯಾಲಯದ ವಿಶ್ರಾಂತ ಕುಲಸಚಿವರಾದ ಡಾ. ಶ್ರೀಕಂಠ ಕೂಡಿಗೆ ಅವರು ಹೇಳಿದರು.

ಅವರು ಆಕಾಶವಾಣಿ ಭದ್ರಾವತಿ ಕೇಂದ್ರಕ್ಕೆ 60ವರ್ಷ ತುಂಬಿದ ಹಿನ್ನಲೆಯಲ್ಲಿ ಇಂದು ಆಕಾಶವಾಣಿ ಆವರಣದಲ್ಲಿ ಹಮ್ಮಿಕೊಂಡ ವಜ್ರಮಹೋತ್ಸದ ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು. 1965ರಲ್ಲಿ ಆರಂಭಗೊಂಡ ಆಕಾಶವಾಣಿ ಅಂದಿನಿಂದಲೂ ಇಂದಿನವರೆಗೆ ಹಲವು ನಿರ್ದೇಶಕರು ಹಾಗು ಸಿಬ್ಬಂದಿ ತಮ್ಮದೆ ಆದ ಕೊಡುಗೆಯನ್ನ ನೀಡಿದ್ದಾರೆ ಎಂದು ಹೇಳಿದರು. ಎಸ್.ಆರ್.ಭಟ್ ಅವರ ಕಲ್ಪನೆಯ ಹಲವು ವಿಶೇಷ ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ದೇಶವಿದೇಶಗಳಲ್ಲಿ ಭದ್ರಾವತಿ ಆಕಾಶವಾಣಿ ಕಾರ್ಯಕ್ರಮಗಳ ಕಂಪು ಪಸರಿಸಿವೆ ಎಂದರು.

ನಂತರ ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ.ಕೆ.ಸಿ.ಶಶಿಧರ್ ರವರು ಮಾತನಾಡಿ ದೇಶದಲ್ಲಿ ಕೃಷಿಗೆ ಸಂಬಂಧಿಸಿದಂತೆ ರೈತಬಂಧುಗಳಿಗೆ ಉಪಯುಕ್ತ ಮಾಹಿತಿಯನ್ನ ನೀಡಿ ಸ್ವಾವಲಂಭನೆ ಬದುಕಿಗೆ ಬಹುದೊಡ್ಡ ಕೊಡುಗೆ ಆಕಾಶವಾಣಿ ನೀಡಿದೆ ಎಂದರು.

ಕುವೆಂಪು ವಿಶ್ವವಿದ್ಯಾಲಯದ ಉಪಕುಲಸಚಿವರಾದ ಡಾ.ಕೆ.ಆರ್. ಮಂಜುನಾಥ್ ಅವರು ಮಾತನಾಡಿ ಎಲೆಮರೆಕಾಯಿಯಂತಿರುವ ಎಷ್ಟೋ ಪ್ರತಿಭೆಗಳಿಗೆ ಆಕಾಶವಾಣಿಯು ವೇದಿಕೆಯನ್ನು ಕೊಟ್ಟು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಗುರುತಿಸುವುಕೊಳ್ಳುವದರಲ್ಲಿ ಬಹು ದೊಡ್ಡ ಕೊಡುಗೆಯನ್ನು ನೀಡಿದೆ ಎಂದರು.

ಇನ್ನು ಕೆಲವೇ ದಿನಗಳಲ್ಲಿ ಆಕಾಶವಾಣಿಯ



ಪ್ರಸಾರಣ ಸಾಮರ್ಥ್ಯ, ಶಿವಮೊಗ್ಗದಲ್ಲಿ ಸ್ಥಾಪನೆಯಾಗುತ್ತಿರುವ 10ಕಿಲೊವ್ಯಾಟ್ ಸಾಮರ್ಥ್ಯದ ಎಫ್ ಎಂ ಟ್ರಾನ್ಸ್ಮಿಟ್ಟರ್ ನಿಂದಾಗಿ ಹೆಚ್ಚು ವ್ಯಾಪ್ತಿಯನ್ನು ತಲುಪಲು ಅವಿರತವಾಗಿ ಶ್ರಮಿಸುತ್ತಿರುವ ಶಿವಮೊಗ್ಗದ ಸಂಸದರಾದ ಬಿ.ವೈ.ರಾಘವೇಂದ್ರರವರನ್ನು ನೆನಪಿಸಿಕೊಳ್ಳುತ್ತ, ಅವರ ಪಾತ್ರ ದೊಡ್ಡದು ಎಂದರು. ಈ ಹಂತದಲ್ಲಿ ಹೊಸ ಹೊಸ ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ ಎಂದು ಆಕಾಶವಾಣಿ ಭದ್ರಾವತಿ ಮತ್ತು ಚಿತ್ರದುರ್ಗ ಕೇಂದ್ರದ ಕಾರ್ಯಕ್ರಮ ಮುಖ್ಯಸ್ಥರಾದ ಸುಬ್ರಾಯ ಆರ್ ಭಟ್ ರವರು ತಿಳಿಸಿದರು.

ವಿಶೇಷ ಆಹ್ವಾನಿತರಾಗಿ ಅಂಬೇಡ್ಕರ್ ಅಧ್ಯಯನ ಸಂಸ್ಥೆಯ ನಿರ್ದೇಶಕರಾದ ಡಾ. ನೆಲ್ಲಿಕಟ್ಟೆ ಸಿದ್ದೇಶ್, ಶಿವಮೊಗ್ಗದ ಛೇಂಬರ್ ಆಫ್ ಕಾಮರ್ಸ್ನ ಅಧ್ಯಕ್ಷರಾದ ಬಿ.ಗೋಪಿನಾಥ್, ಪಿ.ಇ.ಎಸ್ ಸಮೂಹ ಸಂಸ್ಥೆಯ ಮುಖ್ಯ ಸಂಯೋಜಕರಾದ ಡಾ. ನಾಗರಾಜ್ ಆರ್, ಶಿವಮೊಗ್ಗದ ಐ.ಎಂ.ಎ ಕಾರ್ಯದರ್ಶಿಗಳಾದ ಹಾಗು ಸುಬ್ಬಯ್ಯ ಸಮೂಹ ಸಂಸ್ಥೆಯ ಸಿ.ಇ.ಒ ಡಾ. ವಿನಯ ಶ್ರೀನಿವಾಸ್ ಉಪಸ್ಥಿತರಿದ್ದರು. ನಂತರ ಕಥಾ ಸ್ವರ್ಧೆಯಲ್ಲಿ ವಿಜೇತರಾದ ದೀಪ್ತಿ ಭದ್ರಾವತಿ, ಶ್ರೇಯ ಕೆ ಎಂ ಹಾಗೂ ಸಂತೆಬೆನ್ನೂರು ಫೈಜ್ನಟ್ರಾಜ್ ಮತ್ತು ಪಾಕಸ್ಪರ್ಧೆಯಲ್ಲಿ ವಿಜೇತರಾದ ಗಿರಿಜಾ ಹೆಗಡೆ, ಎಂ.ಎನ್.ಸುಶೀಲ, ಡಾ. ಮೈತ್ರೇಯಿ ಅವರಿಗೆ ಪ್ರಶಸ್ತಿ ಪತ್ರವನ್ನು ನೀಡಲಾಯಿತು.

ಇದೇ ಸಂದರ್ಭದಲ್ಲಿ ವಿಶ್ವೇಶ್ವರಾಯ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಯ ಕಾರ್ಯಪಾಲಕ ನಿರ್ದೇಶಕರಾದ ಬಿ.ಎಲ್.ಚಾಂದ್ವಾನಿ, ಮತ್ತು ಕೆ.ಎಸ್. ಸುರೇಶ್, ಮುಖ್ಯಮಹಾಪ್ರಭಂಧಕರು ಸ್ಥಾವರ, ಎಲ್.ಪ್ರವೀಣ್ಕುಮಾರ್ ಮಹಾಪ್ರಭಂಧಕರು, ಸಾರ್ವಜನಿಕ ಸಂಪರ್ಕ ಇಲಾಖೆ ಮತ್ತು ಮಾನವ ಸಂಪನ್ಮೂಲ, ಮುತ್ತಣ್ಣ ಸುಬ್ಬರಾವ್, ಮಹಾಪ್ರಭಂಧಕರು, ಪರಿಸರ ವಿಭಾಗ ಹಾಗು ವಿಕಾಸ್ ಬಸೀರ್ ಸಹಾಯಕ ಮಹಾಪ್ರಭಂಧಕರು ಮತ್ತು ಇತರ ಸಿಬ್ಬಂದಿ ವರ್ಗದವರು, 60ವರ್ಷದ ಸವಿನೆನಪಿಗೆ 60 ಸಸಿಗಳನ್ನು ವಿತರಿಸಿದರು. ಆಕಾಶವಾಣಿ ಕೇಂದ್ರದಲ್ಲಿ ನಿವೃತ್ತ ಹೊಂದಿದವರಿಗೆ ಮತ್ತು ಹಾಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಸಿಬ್ಬಂಧಿವರ್ಗದವರಿಗೆ ಸ್ಮರಣಿಕೆ ನೀಡಿ ಗೌರವಿಸಲಾಯಿತು. ರಾಜ್ಯದ ಬೇರೆ ಬೇರೆ ಭಾಗಗಳಿಂದ ಆಗಮಿಸಿದ ಕೇಳುಗರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಕಾರ್ಯಕ್ರಮವನ್ನು ಶೋಭ ಮತ್ತು ತಂಡದವರಿಂದ ಸ್ವಾಗತಗೀತೆಯೊಂದಿಗೆ ಆರಂಭಿಸಿದರೆ ಕಾರ್ಯಕ್ರಮ ಅಧಿಕಾರಿ ಎಸ್. ಎಲ್.ರಮೇಶ್ಪ್ರಸಾದ್ ಅವರು ಎಲ್ಲರನ್ನು ಸ್ವಾಗತಿಸಿದರು. ಡಾ.ಗಣೇಶ್ ಆರ್ ಕೆಂಚನಾಳ ಅವರು ಪ್ರಾಸ್ತವಿಕ ನುಡಿಗಳನ್ನಾಡಿದರೆ ಶಕೀಲ್ ಅಹ್ಮದ್ ಮತ್ತು ಮೀನ ಅವರು ನಿರೂಪಿಸಿದರು. ಕಾರ್ಯಕ್ರಮದಲ್ಲಿ ಆಕಾಶವಾಣಿಯ ಎಲ್ಲಾ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

# ಮಕ್ಕಳಿಗೆ ಬಾಲ್ಯದಲ್ಲಿಯೇ ಶಿಕ್ಷಣ ಸಂಸ್ಕಾರ ನೀಡಬೇಕು



**ಗದಗ ;** ಮಗುವಿನ ಸಾಧನೆಯಲ್ಲಿ ಅತೀ ಹೆಚ್ಚು ಸಂತೋಷ ಪಡುವರು ತಂದೆ–ತಾಯಿ ಹಾಗೂ ಶಿಕ್ಷಕರಾಗಿದ್ದಾರೆ ಎಂದು ಡಿಡಿಪಿಐ ಆರ್.ಎಸ್. ಬುರಡಿ ಅವರು ಹೇಳಿದರು.

ನಗರದ ಗಂಗಾಪೂರ ಪೇಟೆಯಲ್ಲಿರುವ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ 19 ನೇ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ಮಕ್ಕಳ ಹಬ್ಬ–2024–25 ಸಾಲಿನ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ತಂದೆ–ತಾಯಿಗಳು ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ಸಾಕಷ್ಟು ಕಷ್ಟಪಡುತಿರುವದರಿಂದ ಮಕ್ಕಳ ಉತ್ತಮ ಶಿಕ್ಷಣ ಪಡೆದು ದೊಡ್ಡವರಾದ ಮೇಲೆ ತಂದೆ–ತಾಯಿಗಳನ್ನು ಜೋಪಾನ ಮಾಡಬೇಕು. ಈ ಬಗ್ಗೆ ಶಾಲೆಗಳಲ್ಲಿ ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ ನೀಡುವದು ಅಗತ್ಯವಾಗಿದೆ. ಮಕ್ಕಳು ಮನೆಯಲ್ಲಿ ಪ್ರತಿದಿನ ತಂದೆ–ತಾಯಿ, ಗುರು–ಹಿರಿಯರಿಗೆ ನಮಸ್ಕಾರ ಮಾಡಿ ಬರಬೇಕು. ಶಾಲೆಯಲ್ಲಿ ಮಕ್ಕಳಿಗೆ ನೀಡಲಾಗುವ ಹೋಮವರ್ಕ್‌ನ್ನು ತಂದೆ–ತಾಯಿ ಮಾಡದೆ ಮಕ್ಕಳಿಗೆ ಮಾಡಲು ಪ್ರೋತ್ಸಾಹ ನೀಡಬೇಕು. ಜೀವನ ರಕ್ಷಣೆ ಜ್ಞಾನ ಕೌಶಲ್ಯಗಳನ್ನು ಮಕ್ಕಳಿಗೆ ಕಲಿಸಬೇಕು ಎಂದು ಅವರು ಹೇಳಿದರು.

ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ ಅವರು ಮಾತನಾಡಿ, ವರ್ಷದಿಂದ ವರ್ಷಕ್ಕೆ ವಿನೂತನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಅಭಿವೃದ್ಧಿ ಪಥದಲ್ಲಿ ಸಾಗುತ್ತಿರುವ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ ಸಾಧನೆಗೆ ಶಾಲೆಯ ಆಡಳಿತ ಮಂಡಳಿ ಮತ್ತು ಶಿಕ್ಷಕಿಯರ ಕೊಡುಗೆ ಅಪಾರವಾಗಿದೆ. ಅಲ್ಲದೆ, ಬಡವರ್ಗದ ಜನರೆ ಹೆಚ್ಚಾಗಿರುವ ಈ ಪ್ರದೇಶದಲ್ಲಿನ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಮತ್ತು ಸಂಸ್ಕಾರ ನೀಡಬೇಕು ಎನ್ನುವ ಉದ್ದೇಶ ಶಾಲೆಯನ್ನು ಆರಂಭಿಸಿರುವ ಆಡಳಿತ ಮಂಡಳಿಯ ಕಾರ್ಯ ಶ್ಲಾಘನೀಯವಾಗಿದೆ ಎಂದು ಹೇಳಿದರು.

ಇದಕ್ಕೂ ಮುನ್ನ ಕಾರ್ಯಕ್ರಮದಲ್ಲಿ ಶಿಕ್ಷಣಕ್ಕಾಗಿತಮ್ಮ ಜೀವನವನ್ನೆ ಮುಡುಪಾಗಿಟ್ಟ, ನಾಡಿನ ಸಂತ ಶ್ರೇಷ್ಠರ ವೇಷದಾರಿಗಳಾದ ಗೌತಮ ಕಬಾಡಿ–

(ಲಿಂ.ಪಂ. ಪುಟ್ಟರಾಜ ಗವಾಯಿಗಳು), ಶುಭಂ ಕಬಾಡಿ–(ಲಿಂ.ಪೂಜ್ಯಶ್ರೀ ಶಿವಕುಮಾರ ಸ್ವಾಮಿಗಳು ಸಿದ್ದಗಂಗಾ), ಮೈಲಾರಿ ಹಿರೇಮನಿ–(ಲಿಂ. ತೋಂಟದ ಸಿದ್ದಲಿಂಗ ಶ್ರೀಗಳು), ಆಕಾಶ ಜಡಿ–(ಲಿಂ. ಪೂಜ್ಯಶ್ರೀ ಸಿದ್ದೇಶ್ವರ ಶ್ರೀಗಳು) ಹಾಗೂ ರಿಶಬ್ ಇಮರಾಪೂರ–(ಪೂಜ್ಯಶ್ರೀ ಕೊಪ್ಪಳದ ಗವಿಸಿದ್ದೇಶ್ವರ ಶ್ರೀಗಳು) ಮಕ್ಕಳ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ವೇದಿಕೆ ಮೇಲೆ ನಟರಂಗ ಅಕಾಡೆಮಿಯ ಸಂಸ್ಥಾಪಕ ಸೋಮಶೇಖರಯ್ಯ.ಚಿಕ್ಕಮಠ, ಶಿಕ್ಷಕರುಗಳಾದ ಎಫ್.ಎ.ನಮಾಜಿ, ಆರ್.ಬಿ.ಲೋದಿ, ಸಮಾಜ ಸೇವಕ ಹೀರಾಲಾಲ ಸಿಂಗ್ರಿ, ಶಾಲೆಯ ನಿರ್ದೇಶಕರುಗಳಾದ ಮೋಹನ ಇಮರಾಪೂರ,

ಕವಿತಾ ಇಮರಾಪೂರ, ಹಿರಿಯರಾದ ನಿರ್ಮಲಾ ಪಾಟೀಲ, ಸಲಹಾ ಸಮಿತಿ ಸದಸ್ಯರುಗಳಾದ ಮುತ್ತು ಜಡಿ, ಲೋಕೇಶ ಮಲ್ಲಿಗವಾಡ, ಸವಿತಾ ಇಮರಾಪೂರ, ಶೋಭಾ ಕುರಿಯವರ,

ಲಕ್ಷ್ಮೀ ಕವಡಕಿ, ಕವಿತಾ ಜಡಿ, ಆಡಳಿತಾಧಿಕಾರಿ ಸಾವಿತ್ರಿ ಕವಡಕಿ, ಮುಖ್ಯೋಪಾಧ್ಯಾಯನಿ ಎಚ್.ಎಂ. ನದಾಫ್, ಶಿಕ್ಷಕಿಯರಾದ ಮಂಜುಳಾ ಹಿಡ್ಕಿಮಠ, ಸುಧಾ ತಿರಕಣ್ಣವರ, ರೇಖಾ ಅಂಗಡಿ, ವಂದನಾ ಕಲ್ಮನಿ, ಮಂಜುಳಾ ದಾಸರ, ರೂಪಾ ಅಸೂಟಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು. ನಂತರ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

## ಲೇವಾದೇವಿ ವ್ಯವಹಾರಸ್ಥರ ಪರವಾನಿಗೆ ಮತ್ತು ಬಡ್ಡಿದರ ಪ್ರದರ್ಶನ ಕಡ್ಡಾಯ

**ಶಿವಮೊಗ್ಗ :** ಶಿವಮೊಗ್ಗ ಜಿಲ್ಲೆಯ ಲೇವಾದೇವಿ ವ್ಯವಹಾರ ನಡೆಸುತ್ತಿರುವ ಲೇವಾದೇವಿಗಾರರು/ ಗಿರವಿದಾರರು ಮತ್ತು ಹಣಕಾಸು ಸಂಸ್ಥೆಗಳು, ವ್ಯವಹಾರ ಸ್ಥಳದ ಕಚೇರಿಯಲ್ಲಿ ಪರವಾನಿಗೆ ಮತ್ತು ಬಡ್ಡಿದರದ ಫಲಕವನ್ನು ಪ್ರದರ್ಶಿಸುವುದು ಕಡ್ಡಾಯವಾಗಿದೆ.

ಕರ್ನಾಟಕ ಲೇವಾದೇವಿ ಅಧಿನಿಯಮ 1961ರ ಪ್ರಕರಣ 28ರಡಿ ಸರ್ಕಾರವು ನಿಗದಿಪಡಿಸಿರುವ ಬಡ್ಡಿದರ ಭದ್ರತಾ ಸಾಲಗಳಿಗೆ ವಾರ್ಷಿಕ ಶೇ. 14% ರಷ್ಟು, ಭದ್ರತಾ ರಹಿತ ಸಾಲಗಳಿಗೆ ವಾರ್ಷಿಕ ಶೇ. 16% ರಷ್ಟು ಬಡ್ಡಿಯನ್ನು ಮಾತ್ರ ವಿಧಿಸತಕ್ಕದ್ದು, ವ್ಯವಹಾರ ಸ್ಥಳದಲ್ಲಿ ಬಡ್ಡಿದರದ ಫಲಕವನ್ನು ಸಾರ್ವಜನಿಕರಿಗೆ ಕಾಣುವ ರೀತಿ ಪ್ರದರ್ಶಿಸತಕ್ಕದ್ದು, ಸರ್ಕಾರವು ನಿಗಧಿಪಡಿಸಿದ ಬಡ್ಡಿದರಕ್ಕಿಂತ ಹೆಚ್ಚಿನ ಬಡ್ಡಿಯನ್ನು ಪಡೆದ ಬಗ್ಗೆ ಪರಿವೀಕ್ಷಣೆಯಲ್ಲಿ ಕಂಡುಬಂದಲ್ಲಿ ಅಥವಾ ಸಾರ್ವಜನಿಕರಿಂದ ದೂರುಗಳು ಬಂದಲ್ಲಿ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಸಹಕಾರ ಸಂಘಗಳ ಉಪನಿಬಂಧಕರು ಎಚ್ಚರಿಸಿದ್ದಾರೆ.

ಸಾರ್ವಜನಿಕರು ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಂಗಳೂರು– ದೂ.ಸಂ.: 080–23562951, ಸಹಕಾರ ಸಂಘಗಳ ಉಪನಿಬಂಧಕರು ಹಾಗೂ ಲೇವಾದೇವಿ ನಿಬಂಧಕರು, ಶಿವಮೊಗ್ಗ ?ದೂ.ಸಂ.: 08182–222711, ಸಹಕಾರ ಸಂಘಗಳ ಉಪನಿಬಂಧಕರು ಹಾಗೂ ಲೇವಾದೇವಿ ನಿಬಂಧಕರು, ಶಿವಮೊಗ್ಗ ಉಪವಿಭಾಗ– ದೂ.ಸಂ.: 08182–225182, ಸಹಕಾರ ಸಂಘಗಳ ಉಪನಿಬಂಧಕರು ಹಾಗೂ ಲೇವಾದೇವಿ ನಿಬಂಧಕರು, ಸಾಗರ ಉಪವಿಭಾಗ– ದೂ.ಸಂ.: 08183–221807 ಇವರುಗಳಿಗೆ ದೂರು ಸಲ್ಲಿಸಬಹುದಾಗಿದೆ ಎಂದು ಸಹಕಾರ ಸಂಘಗಳ ಉಪನಿಬಂಧಕರು ಹಾಗೂ ಲೇವಾದೇವಿ ಮತ್ತು ಗಿರವಿ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಇ–ಕೈವೈಸಿ ಕಡ್ಡಾಯ

**ಚಿಕ್ಕಮಗಳೂರು:** ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ವತಿಯಿಂದ ಜಿಲ್ಲೆಯಲ್ಲಿ ಪಡಿತರ ಚೀಟಿ ಪಡೆದ ಎಲ್ಲಾ ಸದಸ್ಯರು ಕಡ್ಡಾಯವಾಗಿ ನ್ಯಾಯಬೆಲೆ ಅಂಗಡಿಗಳಲ್ಲಿ ಇ–ಕೈವೈಸಿ (ಜೀವಮಾಪಕ ಮರು ಧೃಢೀಕರಣ) ಮಾಡಿಸಬೇಕಾಗಿದೆ. ಇ–ಕೈವೈಸಿ (ಜೀವಮಾಪಕ ಮರು ಧೃಢೀಕರಣ) ಮಾಡಿಸಲು ಫೆಬ್ರವರಿ 15 ಕೊನೆಯ ದಿನವಾಗಿರುತ್ತದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನಸಂಪರ್ಕ ಸಭೆ

**ಚಿಕ್ಕಮಗಳೂರು:** ಚಿಕ್ಕಮಗಳೂರು ತಾಲ್ಲೂಕು ಪಂಚಾಯಿತಿ ವತಿಯಿಂದ ಲಕ್ಕಮ್ಮನಹಳ್ಳಿ ಮತ್ತು ಬಿಳೇಕಲ್ಲಹಳ್ಳಿ ಎರಡು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಜನ ಸಂಪರ್ಕ ಸಭೆಯನ್ನು ಫೆಬ್ರವರಿ 15 ರಂದು ಬೆಳಿಗ್ಗೆ 10.30 ಗಂಟೆಗೆ ಲಕ್ಯಾ ಹೋಬಳಿ ಲಕ್ಕಮ್ಮನಹಳ್ಳಿ ಗ್ರಾಮ ಪಂಚಾಯಿತಿ ಹತ್ತಿರ ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಹೆಚ್.ಡಿ. ತಮ್ಮಯ್ಯ ಅವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದೆ ಎಂದು ಚಿಕ್ಕಮಗಳೂರು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉದ್ಯೋಗ ನೋಂದಣಿ

**ಚಿಕ್ಕಮಗಳೂರು:** ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ವತಿಯಿಂದ ಫೆಬ್ರವರಿ 11 ರಂದು ಮಧ್ಯಾಹ್ನ 12:30 ಗಂಟೆಗೆ ತರೀಕೆರೆ ತಾಲ್ಲೂಕಿನ ಬಾವಿಕೆರೆ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಉದ್ಯೋಗ ನೋಂದಣಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಆಸ್ತಕ ಅಲ್ಪಸಂಖ್ಯಾತ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ದೂರವಾಣಿ: 08262–295538 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಲ್ಮೀಕಿ ಜಾತ್ರೆ ಶುಭ ಕೋರಿದ ಕಾಂಗ್ರೆಸ್ ಮುಖಂಡರು



**ದಾವಣಗೆರೆ :** ಜಿಲ್ಲೆಯ ಹರಿಹರ ತಾಲೂಕಿನ ರಾಜನಹಳ್ಳಿ ವಾಲ್ಮೀಕಿ ಶ್ರೀಮಠದಲ್ಲಿ ನಡೆಯುವ ಶ್ರೀಮಠದ 27 ನೇ ವಾರ್ಷಿಕೋತ್ಸವ ,ಬೆಳ್ಳಿ ಲಿಂಗೈಕ್ಯ ಜಗದ್ಗುರು ಶ್ರೀ ಪುಣ್ಯಾನಂದಪುರಿ ಮಹಾಸ್ವಾಮೀಜಿಯವರ 18 ನೇ ವರ್ಷದ ಪುಣ್ಯಾರಾಧನೆ ಹಾಗೂ.

ಜಗದ್ಗುರು ಶ್ರೀ ಡಾ. ವಾಲ್ಮೀಕಿ ಪ್ರಸನ್ನಾನಂದ ಮಹಾಸ್ವಾಮೀಜಿಯವರ 17 ನೇ ವರ್ಷದ ಪಟ್ಟಾಧಿಕಾರ ಮಹೋತ್ಸವದ ವಾಲ್ಮೀಕಿ ಜಾತ್ರೆಗೆ ದಾವಣಗೆರೆಯ ಕಾಂಗ್ರೆಸ್ ಮುಖಂಡರು ಶುಭ ಕೋರಿ ಕಾರ್ಯಕ್ರಮಗಳು ಯಶಸ್ವಿಯಾಗಲೆಂದು ಹಾರೈಸಿ ಶ್ರೀಗಳ ಆಶೀರ್ವಾದ ಪಡೆದರು .

ಇಂದು ವಾಲ್ಮೀಕಿ ಶ್ರೀಮಠದ ಮಹಾಸ್ವಾಮಿಗಳವರನ್ನು ಭೇಟಿ ಮಾಡಿದ ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ ಶೆಟ್ಟಿ, ಮಹಾಪೌರರಾದ ಕೆ.ಚಮನ್ ಸಾಬ್, ಮಹಾನಗರ ಪಾಲಿಕೆ ಸದಸ್ಯ ಎ.ನಾಗರಾಜ್, ಕಾಂಗ್ರೆಸ್ ಮುಖಂಡರಾದ ಗಣೇಶ ಹುಲ್ಮನಿ ರುದ್ರೇಶ್ ಚೇತನ್ ಕುಮಾರ್ ಭೇಟಿ ನೀಡಿ ಶ್ರೀಗಳ ಆಶೀರ್ವಾದ ಪಡೆದರು.

## ರಾಜ್ಯ ಮಟ್ಟದ ವಿಚಾರ ಸಂಕಿರಣ

**ದಾವಣಗೆರೆ:** ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಬೆಂಗಳೂರು, ಸಂತ ಸೇವಾಲಾಲ್ ಜನ್ಮಸ್ಥಾನ ಮಹಾಮಠ ಸಮಿತಿ(ರಿ), ಸಹಯೋಗದಲ್ಲಿ ಫೆಬ್ರವರಿ 13 ರಂದು ಸಂಜೆ 4.30ಕ್ಕೆ ಸೂರಗೊಂಡನಕೊಪ್ಪ, ನ್ಯಾಮತಿ ತಾಲ್ಲೂಕು ಭಾಯಾಗಡ್‌ದಲ್ಲಿ ರಾಜ್ಯ ಮಟ್ಟದ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಬಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿಯ ಅಧ್ಯಕ್ಷರಾದ ಡಾ.ಎ.ಆರ್ ಗೋವಿಂದಸ್ವಾಮಿ ಕಾರ್ಯಕ್ರಮ ಉದ್ಘಾಟಿಸುವರು. ನಿವೃತ್ತ ಹಿರಿಯ ಅಧಿಕಾರಿ ಬಿ.ಹೀರಾನಾಯ್ಕ ಅಧ್ಯಕ್ಷತೆ ವಹಿಸುವರು. ವಿಧಾನಸಭೆಯ ಉಪಸಭಾಪತಿ ಹಾಗೂ ಸಂತ ಸೇವಾಲಾಲ್ ಜನ್ಮಸ್ಥಾನ ಮಹಾಮಠ ಸಮಿತಿಯ ಅಧ್ಯಕ್ಷರಾದ ರುದ್ರಪ್ಪ ಮಾನಪ್ಪ ಲಮಾಣಿ ಘನಉಪಸ್ಥಿತರಾಗಿರುವರು.

ಮುಖ್ಯ ಅತಿಥಿಗಳಾಗಿ ಸಂತ ಸೇವಾಲಾಲ್ ಜನ್ಮಸ್ಥಾನ ಮಹಾಮಠ ಸಮಿತಿಯ ನಿರ್ದೇಶಕರಾದ ರಾಘವೇಂದ್ರನಾಯ್ಕ, ಭಾಯಾಗಡ್ ನಿರ್ದೇಶಕರಾದ ಡಾ.ಎಲ್ ಈಶ್ವರನಾಯ್ಕ, ಡಿ.ಥಾವರ್‍ಯಾನಾಯ್ಕ, ಗೋಪಾಲ್ ನಾಯ್ಕ, ಬೋಜಾನಾಯ್ಕ, ಉಪಾಧ್ಯಕ್ಷರಾದ ಕುಮಾರನಾಯ್ಕ ಬಾಂಬೆರವರು, ಮತ್ತು ಮಲ್ಲಿಕಾರ್ಜುನ್ ಬಿ ನಾಯ್ಕರವರು, ಧರ್ಮದರ್ಶಿಗಳಾದ ಬೋಜ್ಯಾನಾಯ್ಕ, ಕರ್ನಾಟಕ ಹಕ್ಕು ಸಂರಕ್ಷಣಾ ಸಮಿತಿಯ ಅಧ್ಯಕ್ಷರಾದ ಎಸ್. ಆರ್ ರಾಜಾನಾಯ್ಕ ಸಿಂಗಟಗೆರೆ, ಸಂತ ಸೇವಾಲಾಲ್ ಜನ್ಮಸ್ಥಾನ ಮಹಾಮಠ ಸಮಿತಿಯ ಪ್ರಧಾನ ಕಾರ್ಯದರ್ಶಿ ನರೇನಹಳ್ಳಿ ಅರುಣಕುಮಾರ್ ಭಾಗವಹಿಸುವರು.

ಗೋಷ್ಠಿ: ಹಿರಿಯ ಸಾಹಿತಿಗಳಾದ ಡಾ.ಬಿ.ಟಿ ಲಲಿತನಾಯಕ ಗೋಷ್ಠಿಯ ಅಧ್ಯಕ್ಷತೆ ವಹಿಸುವರು. ವಿಷಯ:1– ಬಂಜಾರ ಸಮುದಾಯದ ಪ್ರಧಾನ ದೈವಗಳು ಹಾಗೂ ಮಹಿಳಾ ದೈವಗಳ ಆರಾಧನೆ ಕುರಿತು ವಿಶ್ರಾಂತ ಪ್ರಾಧ್ಯಾಪಕರು ಹಾಗೂ ಹಿರಿಯ ಸಾಹಿತಿಗಳು ಪ್ರೊ.ಸಣ್ಣರಾಮನಾಯ್ಕ ವಿಷಯ ಮಂಡನೆ ಮಾಡುವರು. ಬೆಂಗಳೂರು ವಿಶ್ವವಿದ್ಯಾನಿಲಯದ ಉಪನ್ಯಾಸಕರಾದ ಡಾ.ಡಿ.ಪರಮೇಶ್ವರನಾಯ್ಕ ಸಂವಾದ ಮಾಡುವರು. ವಿಷಯ:2– ಬಹುತ್ವ ಸಂಸ್ಕೃತಿಗಳ ಭಾರತದಲ್ಲಿ ಅಲೆಮಾರಿ ಬುಡಕಟ್ಟುಗಳ ಧಾರ್ಮಿಕ ಶ್ರದ್ಧೆ ಮತ್ತು ಲೋಕ ದೃಷ್ಟಿಯ ಕುರಿತು ಸಂಸ್ಕೃತಿ ಚಿಂತಕರಾದ ಡಾ.ವಡ್ಡಗೆರೆ ನಾಗರಾಜನಾಯ್ಕ ವಿಷಯ ಮಂಡನೆ ಮಾಡುವರು. ಪ್ರಗತಿಪರ ಚಿಂತರಕರು ಹಾಗೂ ಕೃಷಿಕರಾದ ಡಾ.ಎಸ್ ಇಂದ್ರಾನಾಯ್ಕ ಮತ್ತು ನಿವೃತ್ತ ಡಿ.ವೈ.ಎಸ್.ಪಿ ಗೋಪಾಲನಾಯ್ಕ ಸಂವಾದ ನಡೆಸುವರು.

ವಿಷಯ:3– ಧರ್ಮ ವೈಚಾರಿಕತೆ ಮತ್ತು ವೈಜ್ಞಾನಿಕತೆ ಕುರಿತು ಸವಣೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಪ್ರಾಧ್ಯಪಕರಾದ ಗಂಗಾನಾಯ್ಕ.ಎಲ್ ವಿಷಯ ಮಂಡನೆ ಮಾಡುವರು. ಸಹ್ಯಾದ್ರಿ ಕಾಲೇಜಿನ ಉಪನ್ಯಾಸಕರಾದ ಡಾ.ರಾಜು ಮತ್ತು ಕಾನೂನು ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾಧ ಪ್ರೊ.ಶಿವಣ್ಣನಾಯ್ಕ ಸಂವಾದ ನಡೆಸುವರು.



# ಮಾಲವಿ ಅಂದ ಹೆಚ್ಚಿಸಿದ ಬಾನಾಡಿ

**ಹಗರಿಬೊಮ್ಮನಹಳ್ಳಿ:** ತಾಲ್ಲೂಕಿನ ಮಾಲವಿ ಜಲಾಶಯದಲ್ಲಿ ಮತ್ತು ಬಸಿದ ನೀರು ಸಂಗ್ರಹಗೊಂಡ ಪಕ್ಕದ ಹಳ್ಳದಲ್ಲಿ ಬಾನಾಡಿಗಳು ವಾಸ್ತವ್ಯ ಹೂಡಿದ್ದು, ಅಣೆಕಟ್ಟೆಯ ಸುತ್ತಮುತ್ತ ಚಿಲಿಪಿಲಿ ಸದ್ದಿನ ಮೂಲಕ ಅದರ ಅಂದವನ್ನು ಹೆಚ್ಚಿಸಿವೆ.

ಜಲಾಶಯದ ಆವರಣದಲ್ಲಿ ರಜೆಯ ಮಜಾವನ್ನು ಕಳೆಯುವಂತೆ ಸ್ವಚ್ಛಂದವಾಗಿ ಮೈಮರೆತು ಈಜಾಡುತ್ತ ದೃಶ್ಯಕಾವ್ಯವನ್ನೇ ಸೃಷ್ಟಿಸಿರುವ ಹಕ್ಕಿಗಳು ಹೇರಳವಾಗಿ ಸಿಗುವ ಆಹಾರ ಹೆಕ್ಕಿ ತಿನ್ನುತ್ತಿರುವುದನ್ನು ನೋಡುವುದೇ ಚೆಂದ. ಇದನ್ನು ನೋಡುತ್ತ ಪಕ್ಷಿಪ್ರಿಯರು ತಮ್ಮನ್ನೇ ತಾವು ಮರೆತುಹೋಗುತ್ತಿರುವುದು ಸಹ ಇಲ್ಲಿನ ಇನ್ನೊಂದು ದೃಶ್ಯವಾಗಿಬಿಟ್ಟಿದೆ.

ಲೆಸರ್ ವಿಸಿಲಿಂಗ್ ಡಕ್ಸ್ (ಚಿಕ್ಕ ಸಿಳ್ಳೆಬಾತು) ನೂರಾರು ಸಂಖ್ಯೆಯಲ್ಲಿವೆ. ಜಲಾಶಯದಿಂದ ಬಸಿಯಲ್ಲಿ ಸೋರಿಕೆಯಾದ ನೀರು ಪುಟ್ಟ ಹಳ್ಳವಾಗಿಸಿದೆ. ಈ ಸ್ಥಳದಲ್ಲಿ ಗಿಡಬಳ್ಳಿಗಳಿಂದ ನಾಲ್ಕೈದು ನಡುಗಡ್ಡೆಗಳು ಸೃಷ್ಟಿಯಾಗಿವೆ, ಅಲ್ಲಿ ಪಕ್ಷಿಗಳು ವಿರಮಿಸುತ್ತಿವೆ.

ಯುರೇ ಷಿಯನ್ ಕೂಟ್ (ನಾಮದ ಕೋಳಿ) ಯಾವುದೇ ಅಳುಕು, ಅಂಜಿಕೆ ಇಲ್ಲದೆ ಈಜುವುದರಲ್ಲಿಯೇ ತಲ್ಲೀನವಾಗಿದ್ದರೆ. ಏಷಿಯನ್ ಓಪನ್ಬಿಲ್ ಸ್ಟಾರ್ಕ್ (ಬಾಯ್ಕಳಕ ಕೊಕ್ಕರೆ), ಲಿಟಲ್ ಈಗ್ರೀಟ್ (ಸಣ್ಣ ಬೆಳ್ಳಕ್ಕಿ), ಇಂಡಿಯನ್ ಪಾಂಡ್ ಹೆರಾನ್ (ಕೊಳದ ಬಕ), ಲಿಟಲ್ ಕಾರ್ಮೋರೆಂಟ್ (ಸಣ್ಣ ನೀರು ಕಾಗೆ), ಪೇ ಟೆಡ್ ಸ್ಟಾರ್ಕ್ (ಬಣ್ಣದ ಕೊಕ್ಕರೆ), ಕಾಮನ್ ಸ್ಯಾಂಡ್ಪೈಪರ್ (ಗದ್ದೆಗೊರವ), ವುಡ್ ಸ್ಯಾಂಡ್ಪೈಪರ್ (ಚುಕ್ಕೆ ಗದ್ದೆಗೊರವ), ಗ್ಲೋಸಿ ಐಬೀಸ್ (ಮಿಂಚು ಕೆಂಬರಲು), ಬಾರ್ನ್ ಸ್ವೆಲ್ಲೊ (ಕವಲು ತೋಕೆ), ಬ್ಲಾಕ್ ವಿಂಗ್ಡ್ ಸ್ಟಿಲ್ಟ್ (ಮೆಟ್ಟುಗಾಲು ಹಕ್ಕಿ), ರಿವರ್ ಟರ್ನ್ (ನದಿರೀವ) ತಮ್ಮ ಇರುವಿಕೆಯಿಂದ ಇಲ್ಲಿನ ಅಂದಕ್ಕೆ ಮತ್ತಷ್ಟು ಬಣ್ಣದ ಬೆಡಗು ತಂದುಬಿಟ್ಟಿವೆ. ರಾಷ್ಟ್ರ ಪಕ್ಷಿ ನವಿಲುಗಳ ಸಂಖ್ಯೆಯೂ ದಿನದಿಂದ ದಿನಕ್ಕೆ ಹೆಚ್ಚತೊಡಗಿವೆ.





# ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಯೇ ನನ್ನ ಗುರಿ : ಶಾಸಕ ಹೆಚ್.ಡಿ. ತಮ್ಮಯ್ಯ

**ಚಿಕ್ಕಮಗಳೂರು:** ಗ್ಯಾರಂಟಿ ಯೋಜನೆಗಳನ್ನು ಪ್ರತಿಯೊಬ್ಬ ನಾಗರೀಕರಿಗೂ ತಲುಪಿಸಿ ಅವರ ಜೀವನ ಸುಧಾರಣೆಗೆ ಸಹಕರಿಸುವುದರೊಂದಿಗೆ ಕ್ಷೇತ್ರದಲ್ಲಿ ವಿವಿಧ ಕಾಮಗಾರಿಗಳನ್ನು ಕೈಗೊಂಡು ಅಭಿವೃದ್ಧಿಗೊಳಿಸುವುದೇ ನನ್ನ ಗುರಿ ಎಂದು ಶಾಸಕ ಹೆಚ್.ಡಿ ತಮ್ಮಯ್ಯ ಹೇಳಿದರು.

ಸಖರಾಯಪಟ್ಟಣ ಆಟೋ ನಿಲ್ದಾಣ ನಿರ್ಮಾಣ ಕಾಮಗಾರಿ ಸೇರಿದಂತೆ ಸಖರಾಯಪಟ್ಟಣ ವ್ಯಾಪ್ತಿಯ ರಸ್ತೆ, ದೇವಸ್ಥಾನ, ಸಮುದಾಯ ಭವನ, ಕಾಂಪೌಂಡ್ ಹಾಗೂ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸುವುದರ ಮೂಲಕ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯದಲ್ಲಿ ಅಭಿವೃದ್ಧಿಯ ಪರ್ವ ಪ್ರಾರಂಭವಾಗಿದೆ. ಕ್ಷೇತ್ರದ ಅಭಿವೃದ್ಧಿಗಾಗಿ ಲೋಕೋಪಯೋಗಿ ಇಲಾಖೆ ಹಾಗೂ ಗ್ರಾಮಾಂತರ ಭಾಗವನ್ನೊಳಗೊಂಡಂತೆ ಕ್ಷೇತ್ರಕ್ಕೆ ಒಟ್ಟು 25 ಕೋಟಿ ರೂಗಳ ವಿಶೇಷ ಅನುಧಾನ ನೀಡಲಾಗಿದೆ ಎಂದರು.

ಸಖರಾಯಪಟ್ಟಣ ವ್ಯಾಪ್ತಿಯಲ್ಲಿ ದೇವಸ್ಥಾನ, ಆಟೋ ನಿಲ್ದಾಣ ಹಾಗೂ ರಸ್ತೆ ಸೇರಿದಂತೆ ಸುಮಾರು 2 ಕೋಟಿಗೂ ಹೆಚ್ಚಿನ ಕಾಮಗಾರಿಗಳಿಗೆ ಇಂದು ಗುದ್ದಲಿ ಪೂಜೆ ನಡೆಸಿ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಮುಂದಿನ 4 ತಿಂಗಳೊಳಗಾಗಿ ಎಲ್ಲ ಕಾಮಗಾರಿಗಳನ್ನು ಪೂರ್ಣಗೊಳಿಸಿ ಸಾರ್ವಜನಿಕರಿಗೆ ಲೋಕಾರ್ಪಣೆ ಮಾಡಲಾಗುವುದು



ಎಂದು ತಿಳಿಸಿದರು.

ಗುಬ್ಬಿಹಳ್ಳಿ ಗೇಟ್‌ನಿಂದ ದೇವನೂರುವರೆಗೂ ಒಟ್ಟು 29 ಕೋಟಿರೂ ವೆಚ್ಚದ ರಸ್ತೆ ನಿರ್ಮಾಣ ಕಾಮಗಾರಿಯನ್ನು ಕೈಗೊಂಡು ಶೀಘ್ರವಾಗಿ ಪೂರ್ಣಗೊಳಿಸಲಾಗುವುದು ಎಂದ ಅವರು, ಅಭಿವೃದ್ಧಿ ಕಾರ್ಯಗಳೊಂದಿಗೆ ಜನರ ಸಮಸ್ಯೆಗಳನ್ನು ಬಗೆಹರಿಸುವ ಕಾರ್ಯಗಳನ್ನು ನಿಷ್ಠೆಯಿಂದ ನಿರ್ವಹಿಸಲಾಗುತ್ತಿದೆ ಎಂದು ತಿಳಿಸಿದರು.

ಸರ್ಕಾರವು ಸಾಮಾಜದ ಎಲ್ಲಾ ಬಡವರು, ಹಿಂದುಳಿದ ವರ್ಗ ಹಾಗೂ ಶೋಷಿತ ವರ್ಗದವರ ಪರವಾದ ಯೋಜನೆಗಳನ್ನು ರೂಪಿಸಿ ಅವರ ಏಳಿಗೆಗಾಗಿ ದುಡಿಯುವುದಲ್ಲದೇ ಮಹಿಳಾ ಸಬಲೀಕರಣಕ್ಕೆ ಶ್ರಮಿಸುತ್ತಿದೆ. ಎತ್ತಿನಹೊಳೆ ಯೋಜನೆ ಮೂಲಕ ಯೋಜನಾ ವ್ಯಾಪ್ತಿಯಲ್ಲಿ ನಮ್ಮ ಕ್ಷೇತ್ರವಿಲ್ಲದಿದ್ದರು ಸಹ ಮನವಿ ಮೇರೆಗೆ ಹಳೇಬೀಡು, ದೇವನೂರು, ಬೆಳವಾಡಿ ಕೆರೆಗಳನ್ನು ಭರ್ತಿಗೊಳಿಸಿರುವುದು ಇಲ್ಲಿನ ರೈತರ ಸಂತಸಕ್ಕೆ ಕಾರಣವಾಗಿದೆ ಎಂದರು.

ಈ ಸಂದರ್ಭದಲ್ಲಿ ಸಖರಾಯಪಟ್ಟಣ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಾಜಮ್ಮ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹಡಿಮನೆ ಸತೀಶ್, ಗಣೇಶ್, ರಾಜಣ್ಣ, ಕಿರಣ್, ಲೋಕೇಶ್, ಸಚಿನ್‌ಎತ್ತಿನ ಮನೆ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ನ್ಯಾಮತಿ ತಾ; ಸೂರಗೊಂಡನಕೊಪ್ಪದಲ್ಲಿ ಸಂತ ಸೇವಾಲಾಲ್‌ರವರ 286ನೇ ಜಯಂತಿ ಕಾರ್ಯಕ್ರಮ

**ದಾವಣಗೆರೆ:** ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾಡಳಿತ ದಾವಣಗೆರೆ, ರಾಜ್ಯ ತಾಂಡಾ ಅಭಿವೃದ್ಧಿ ನಿಗಮ ನಿಯಮಿತ, ಮತ್ತು ಸಂತ ಸೇವಾಲಾಲ್ ಕ್ಷೇತ್ರ ಅಭಿವೃದ್ಧಿ ಮತ್ತು ನಿರ್ವಹಣಾ ಪ್ರತಿಷ್ಠಾನ, ಬೆಂಗಳೂರು, ಸಂತ ಸೇವಾಲಾಲ್ ಜನ್ಮಸ್ಥಾನ ಮಹಾಮಠ ಸಮಿತಿ(ರಿ) ಸೂರಗೊಂಡನಕೊಪ್ಪ ಇವರ ಸಹಯೋಗದಲ್ಲಿ ಸಂತ ಸೇವಾಲಾಲ್‌ರವರ 286ನೇ ಜಯಂತ್ಯೋವ ಹಾಗೂ ವಿವಿಧ ಕಟ್ಟಡಗಳ ಉದ್ಘಾಟನಾ ಕಾರ್ಯಕ್ರಮ ಫೆಬ್ರವರಿ 14 ರಂದು ಮಧ್ಯಾಹ್ನ 2 ಗಂಟೆಗೆ ನ್ಯಾಮತಿ ತಾಲ್ಲೂಕಿನ ಭಾಯಾಗಡ್–ಸೂರಗೊಂಡನಕೊಪ್ಪದಲ್ಲಿ ನಡೆಯಲಿದೆ.

ಕಾರ್ಯಕ್ರಮವನ್ನು ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಉದ್ಘಾಟಿಸುವರು. ಹೊನ್ನಾಳಿ ಕ್ಷೇತ್ರದ ಶಾಸಕರಾದ ಡಿ.ಜಿ.ಶಾಂತನಗೌಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕೇಂದ್ರ ಬೃಹತ್ ಕೈಗಾರಿಕಾ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಘನ ಉಪಸ್ಥಿತರಾಗಿರುವರು.

ಹಾತಿರಾಂ ಬಾವಾಜಿ ಸಭಾಂಗಣವನ್ನು ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಉದ್ಘಾಟಿಸುವರು. ಸಂತ ಸೇವಾಲಾಲ್ ಭಾವಚಿತ್ರಕ್ಕೆ ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಪುಷ್ಪಾರ್ಚನೆ ಮಾಡುವರು. ಸಮಾಜ ಕಲ್ಯಾಣ ಸಚಿವರಾದ ಡಾ.ಹೆಚ್.ಸಿ.ಮಹಾದೇವಪ್ಪ ವಲಸೆ ಮಕ್ಕಳ ವಸತಿ ಶಾಲೆಯ ಶಂಕುಸ್ಥಾಪನೆಯನ್ನು ನರವೇರಿಸುವರು. ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವರಾದ ಹೆಚ್. ಕೆ.ಪಾಟೀಲ್ ಸಂತ ಸೇವಾಲಾಲ್ ವಿಹಾರವನ ಉದ್ಘಾಟಿಸುವರು. ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಕಟ್ಟಡವನ್ನು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಚಿವರಾದ ಡಾ.ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್ ಉದ್ಘಾಟಿಸುವರು. ಸೇವಾಲಾಲ್ ಸರೋವರವನ್ನು ಮಹಾರಾಷ್ಟ್ರ ಸರ್ಕಾರದ ಮಣ್ಣು ಮತ್ತು ಜಲ ಸಂರಕ್ಷಣಾ ಸಚಿವರಾದ ಸಂಜಯ್ ಡಿ. ರಾಥೋಡ್ ಉದ್ಘಾಟನೆ ನೆರವೇರಿಸಲಿದ್ದಾರೆ.

### ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಬಾಳೆ ಬೆಳೆಯ ಸುಧಾರಿತ ಬೇಸಾಯ ಕ್ರಮಗಳ ಕುರಿತು ತರಬೇತಿ

# ಬಾಳೆ ಬೆಳೆ: ಪ್ರಪಂಚದಲ್ಲಿಯೇ ಅತಿ ಹೆಚ್ಚು ಉತ್ಪಾದನೆ ಮಾಡುವ ದೇಶ ಭಾರತ

**ಚಿತ್ರದುರ್ಗ:** ಬಾಳೆಯು ಮಾವಿನ ನಂತರ ನಮ್ಮ ದೇಶದ ಪ್ರಮುಖ ಹಣ್ಣಿನ ಬೆಳೆಯಾಗಿದ್ದು, ಭಾರತ ದೇಶವು ಪ್ರಪಂಚದಲ್ಲಿಯೇ ಅತಿ ಹೆಚ್ಚು ಉತ್ಪಾದನೆ ಮಾಡುವ ದೇಶವೆಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ರಜನೀಕಾಂತ ಹೇಳಿದರು.

ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಈಚೆಗೆ ಜಿಲ್ಲೆಯ ವಿವಿಧ ಗ್ರಾಮಗಳಿಂದ ಆಗಮಿಸಿದ ರೈತರಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಕೃಷಿಯಲ್ಲಿ ತುಂತುರು ಮತ್ತು ಹನಿ ನೀರಾವರಿ ಘಟಕಗಳ ಅಳವಡಿಕೆ ಮತ್ತು ನಿರ್ವಹಣೆ, ಬಾಳೆ ಬೆಳೆಯ ಸುಧಾರಿತ ಬೇಸಾಯ ಕ್ರಮಗಳು, ಸಮಗ್ರ ರೋಗ ಮತ್ತು ಕೀಟಗಳ ನಿರ್ವಹಣೆ ಕುರಿತು ಆಯೋಜಿಸಲಾದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಮುಖವಾಗಿ ಏಲಕ್ಕಿ ಬಾಳೆ ಮತ್ತು ಪಚ್ಚ ಬಾಳೆಯನ್ನು ಚಿತ್ರದುರ್ಗ ಜಿಲ್ಲೆಯಲ್ಲಿ ಐದು ಸಾವಿರ ಹೇಕ್ಟೇರಿಗಿಂತ ಅಧಿಕ ಪ್ರದೇಶದಲ್ಲಿ ಬೆಳೆಯುತ್ತಿದ್ದಾರೆ. ಸೂಕ್ಷ್ಮ ನೀರಾವರಿ ಘಟಕಗಳನ್ನು ಉಪಯೋಗಿಸುವುದರಿಂದ ನೀರಿನ ಮಿತ ಬಳಕೆ ಮತ್ತು ಗೊಬ್ಬರದ ಉಳಿತಾಯ, ನೀರು ಹಾಯಿಸಲು ಕೂಲಿ ಕಾರ್ಮಿಕರ ಉಳಿತಾಯ, ಕಳೆಗಳ ನಿಯಂತ್ರಣ, ವಿದ್ಯುತ್ ಶಕ್ತಿ ಉಳಿತಾಯ ಹಾಗೂ ಕೊಳವೆಬಾವಿ ಮತ್ತು ತೆರೆದ ಬಾವಿಗಳಲ್ಲಿನ ನೀರಿನ ಸದ್ಬಳಕೆ ಮತ್ತು ಅವುಗಳ ಬಳಕೆಯ ಅವಧಿ ಹೆಚ್ಚಿಸುವಲ್ಲಿ ಸಹಕಾರಿಯಾಗಿದೆ ಎಂದರು.

ನಮ್ಮ ಕರ್ನಾಟಕ ರಾಜ್ಯವು ರಾಷ್ಟ್ರದಲ್ಲಿಯೇ ಅತಿ ಹೆಚ್ಚು ಪ್ರದೇಶದಲ್ಲಿ ಸೂಕ್ಷ್ಮ ನೀರಾವರಿ ಅಳವಡಿಸಿದ ರಾಜ್ಯವಾಗಿದೆ. ಪ್ರಧಾನಮಂತ್ರಿ



ಕೃಷಿ ಸಿಂಚಾಯಿ ಯೋಜನೆ ಅಡಿ ರೈತರು ಅಗತ್ಯ ದಾಖಲಾತಿಗಳೊಂದಿಗೆ ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸಿ ತುಂತುರು ನೀರಾವರಿ ಘಟಕಗಳನ್ನು ಪಡೆಯಬಹುದಾಗಿದೆ. ಒಮ್ಮೆ ಸೂಕ್ಷ್ಮ ನೀರಾವರಿ ಪದ್ಧತಿಗೆ ಸಹಾಯಧನ ಪಡೆದ ಸಾಮಾನ್ಯ ವರ್ಗದ ರೈತರಿಗೆ ಮತ್ತೊಮ್ಮೆ ಸಹಾಯಧನ ಪಡೆಯಲು ಅವಕಾಶವಿರುವುದಿಲ್ಲ. ಆದರೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ರೈತರಿಗೆ ಪ್ರತಿ ಏಳು ವರ್ಷಕ್ಕೊಮ್ಮೆ ಸೂಕ್ಷ್ಮ ನೀರಾವರಿ ಘಟಕಗಳನ್ನು ಸಹಾಯಧನದಲ್ಲಿ ನೀಡಲು ಅವಕಾಶವಿರುತ್ತದೆಂದರು. ಹಾಗೂ ಹೆಚ್ಚಿನ ಮಾಹಿತಿಗಾಗಿ ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರಕ್ಕೆ ಸಂಪರ್ಕಿಸಲು ಕೋರಿದರು.

ಜೈನ್ ಇರಿಗೇಷನ್ ಸಂಸ್ಥೆಯ ಪ್ರತಿನಿಧಿ ಕೆ. ದೇವರಾಜ್ ಅವರು ಕೃಷಿ ಹಾಗೂ ತೋಟಗಾರಿಕಾ ಬೆಳಗಳಲ್ಲಿ ನೀರಿನ ಮಿತ ಬಳಕೆ ಹಾಗೂ ಉತ್ಪಾದಕತೆ ಹೆಚ್ಚಿಸಲು ಸ್ಪಿಂಕ್ಲರ್ ಮತ್ತು ಹನಿ ನೀರಾವರಿ ತಾಂತ್ರಿಕತೆ, ರಸಾವರಿ ತಂತ್ರಜ್ಞಾನ ಮತ್ತು ಅವುಗಳ ನಿರ್ವಹಣೆ ಹಾಗೂ ಅಂಗಾಂಶ ಬಾಳೆಯ ಕುರಿತು ವಿಷಯ ಮಂಡನೆ ಮಾಡಿದರು.

ಬಬ್ಬೂರು ಫಾರಂನ ಕೃಷಿ ವಿಜ್ಞಾನ ಕೇಂದ್ರದ ತೋಟಗಾರಿಕಾ ತಜ್ಞರಾದ ಡಾ. ಮಹಾಂತೇಶ್ ಮಾತನಾಡಿ, ರೋಗ ಮತ್ತು ಕೀಟ ರಹಿತ ಆರೋಗ್ಯವಾದ ಬಾಳೆ ಕಂದುಗಳನ್ನು ಜೂನ್ – ಜುಲೈ ತಿಂಗಳಲ್ಲಿ ನಾಟಿ ಮಾಡುವುದು ಸೂಕ್ತವಾಗಿದೆ. ಬಾಳೆಗೊನೆಗಳು ಸಂಪೂರ್ಣವಾಗಿ ಹೊರಹೊಮ್ಮಿದ ನಂತರ 5, 6 ಮತ್ತು 9ನೇ ತಿಂಗಳಲ್ಲಿ ಅರ್ಕ ಬಾಳೆ ಸ್ಪೆಷಲ್ 75 ಗ್ರಾಂ ಪ್ರತಿ 15 ಲೀಟರ್ ನೀರಿನ ಕ್ಯಾನಿಗೆ ಒಂದು ಶಾಂಪು ಸಾಚಟ್ ಅಥವಾ ಎರಡು ಮಿಲಿ ಸಾಬೂನು ಸಾಬೂನು ದ್ರಾವಣ ಮತ್ತು ಎರಡು ನಿಂಬೆಹಣ್ಣಿನ ರಸವನ್ನು ನೀರಿನಲ್ಲಿ ಚೆನ್ನಾಗಿ ಮಿಶ್ರಣ ಮಾಡಿ ಸಿಂಪಡಿಸಬೇಕು. ಪ್ರತಿ ಹೆಕ್ಟರಿಗೆ 30 ಕೆಜಿ ಅರ್ಕ ಬಾಳೆ ಸ್ಪೆಷಲ್ ಬಳಸುವುದರಿಂದ ಶೇಕಡ 15 ರಿಂದ 20 ರವರೆಗೆ ಹೆಚ್ಚಿನ ಇಳುವರಿ ಪಡೆಯಬಹುದೆಂದರು. ಕಂದು ಅಥವಾ ಅಂಗಾಂಶ ಸಸಿಗಳನ್ನು ನಾಟಿ ಮಾಡುವಾಗ ಅಲಸಂದೆಯನ್ನು ಬಿತ್ತನೆ ಮಾಡಿ, 45 ದಿನಗಳ ನಂತರ, ಬೆಳೆದ ಅಲಸಂದೆಯನ್ನು ಮಣ್ಣಿನಲ್ಲಿ ಸೇರಿಸುವುದು ಮತ್ತು 10 ದಿನಗಳ ನಂತರ ಎರಡನೇ ಬಾರಿ ಅಲಸಂದೆಯನ್ನು ಬಿತ್ತನೆ ಮಾಡಿ, 100 ದಿನಗಳ ನಂತರ ಮಣ್ಣಿನಲ್ಲಿ ಸೇರಿಸುವುದರಿಂದ ಬಾಳೆಯಲ್ಲಿ ಕಳೆಯನ್ನು ಅತ್ಯುತ್ತಮವಾಗಿ ನಿಯಂತ್ರಿಸಬಹುದು ಎಂದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**